ಸಂಪುಟ : 13 Volume | ಸಂಚಿಕೆ : 215 Issue | ಪುಟಗಳು : 08 Pages | ಶುಕ್ರವಾರ 10 ಅಕ್ಟೋಬರ್ 2025 | ₹2 | RNINO:KARKAN/2011/48371 | BDR/054/2026-20274 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

' ತಿರಸ್ಕಾರಕ್ಕೆ ತಿರಸ್ಕಾರವೇ ಮದ್ದಲ್ಲ ಪ್ರೀತಿಯೇ ದಿವ್ಯಾಷಧ ' .
–ಗೌತಮ ಬುದ್ಧ .

2. ಇಷ್ಟಲಿಂಗ ಪೂಜೆಯಿಂದ ಏಕಾಗ್ರತೆ ವೃದ್ಧಿ | 4 ಮತದಾರರ ಮಾಹಿತಿ ಕೇಂದ್ರ ಆರಂಭ | 8 ದರೋಡೆ ಪ್ರಕರಣದ ಆರೋಪಿಗಳ ಬಂಧನ

# ಮಹಿಳೆಯರಿಗೆ ಋತುಚಕ್ರ ರಜೆ

## ತಿಂಗಳಲ್ಲಿ 1 ದಿನ ವೇತನ ಸಹಿತ ರಜೆಗೆ ಸಂಪುಟ ಒಪ್ಪಿಗೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಅ. 9: ರಾಜ್ಯದ ಸರ್ಕಾರಿಹಾಗೂ ಖಾಸಗಿವಲಯಗಳಲ್ಲಿ ಕಾರ್ಯನಿರ್ವಹಿಸುವಮಹಿಳೆಯರಿಗೆ ಪ್ರತಿ ತಿಂಗಳು 1 ದಿನ ಋತುಚಕ್ರ ರಜೆ ನೀತಿಯನ್ನು ರಾಜ್ಯ ಸರ್ಕಾರ ಜಾರಿ ಮಾಡಿದೆ.

ಮುಖ್ಯಮಂತ್ರಿಸಿದ್ದರಾಮಯ್ಯನವರ ಅಧ್ಯಕ್ಷತೆಯಲ್ಲಿ ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಋತುಚಕ್ರ ರಜೆ ನೀತಿ–2025ಕ್ಕೆ ಅನುಮೋದನೆ ನೀಡಲಾಗಿದೆ.

ಈ ಋತುಚಕ್ರ ರಜೆ ನೀತಿಯಂತೆ ರಾಜ್ಯದ ಸರ್ಕಾರಿ ಕಚೇರಿಗಳು, ಐಟಿ ಕಂಪೆನಿಗಳು, ಬಹುರಾಷ್ಟ್ರೀಯ ಕಂಪೆನಿಗಳು, ಮಾಹಿತಿ ತಂತ್ರಜ್ಞಾನ ಕಂಪೆನಿಗಳು ಮತ್ತು ಖಾಸಗಿ ಕೈಗಾರಿಕೆ ಕಚೇರಿಗಳಲ್ಲೂ ಕೆಲಸ ಮಾಡುವ ಎಲ್ಲ ಮಹಿಳೆಯರಿಗೆ ಪ್ರತಿ ತಿಂಗಳು 1 ದಿನ ವೇತನ ಸಹಿತ ಋತುಚಕ್ರ ರಜೆಯನ್ನು ನೀಡಲಾಗುತ್ತದೆ. ಯಾವ ದಿನ ರಜೆ ಪಡೆಬೇಕು ಅಂತ ಹೆಣ್ಣುಮಕ್ಕಳು ತೀರ್ಮಾನ ಮಾಡಲಿದ್ದಾರೆ.

2ನೇ ಪುಟನೋಡಿ

ಕ್ಯಾಬಿನೆಟ್ ಸಭೆಯ ಬಳಿಕ ಮಾತನಾಡಿದ ಸಚಿವ ಸಂತೋಷ ಲಾಡ್, ಹೆಣ್ಣು ಮಕ್ಕಳಿಗೆ ಋತು ಚಕ್ರ ರಜೆ ನೀಡಲು ಕ್ಯಾಬಿನೆಟ್ ನಲ್ಲಿ ಒಪ್ಪಿಗೆ ಆಗಿದೆ. ವರ್ಷದಲ್ಲಿ 12 ದಿನ ರಜೆ ಸಂಬಳ ಸಹಿತ ಕೊಡಲಾಗುತ್ತದೆ. ತಿಂಗಳಲ್ಲಿ ಋತುಚಕ್ರವಾದಾಗ ಯಾವ ದಿನ ಬೇಕಾದರೂ ಒಂದು ದಿನ ರಜೆ ತೆಗೆದುಕೊಳ್ಳಬಹುದು. ಕಾನೂನು ಇಲಾಖೆ ಜೊತೆ ಚರ್ಚೆ ಸೇರಿ ಅನೇಕ ಚರ್ಚೆಗಳು ಆಗಿದೆ. ಯಾವತ್ತು ರಜೆ ಬೇಕು ಅಂತ ಹೆಣ್ಣುಮಕ್ಕಳು ತೀರ್ಮಾನ ಮಾಡಿಕೊಳ್ಳಬೇಕು. ಹೆಣ್ಣು ಮಕ್ಕಳ ಪರ ಸರ್ಕಾರ ಈ ಮಹತ್ವದ ನಿರ್ಧಾರ ಮಾಡಿದೆ. ಕ್ಯಾಬಿನೆಟ್ ನಲ್ಲಿ ಒಪ್ಪಿಗೆಯಾಗಿದ್ದು, ಆದಷ್ಟೂ ಬೇಗ ಬಿಲ್ ತಂದು ದೊಡ್ಡ ಕಾರ್ಯಕ್ರಮ ಮಾಡಿ ಅನುಷ್ಠಾನ ಮಾಡುತ್ತೇವೆ ಎಂದು ತಿಳಿಸಿದರು.




## 5 ಕೆಜಿ ಅಕ್ಕಿ ಜತೆ ಇಂದಿರಾ ಆಹಾರ ಕಿಟ್




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.9: ಬಿಪಿಎಲ್ ಹಾಗೂ ಅಂತ್ಯೋದಯ ಕಾರ್ಡುಗಳಿಗೆ ಅನ್ನಭಾಗ್ಯದ 10 ಕೆಜಿ ಅಕ್ಕಿ ಬದಲು 5 ಕೆಜಿ ಅಕ್ಕಿ ಹಾಗೂ ಉಳಿದ 5 ಕೆಜಿ ಅಕ್ಕಿ ಲೆಕ್ಕದಲ್ಲಿ ಆಹಾರ ಧಾನ್ಯ ನೀಡಲು ಸರ್ಕಾರ ಸಚಿವ ಸಂಪುಟ ಸಭೆಯಲ್ಲಿ ನಿರ್ಧಾರ ಮಾಡಿದೆ.

ಇಂದಿರಾ ಆಹಾರ ಕಿಟ್'(ಇಂದಿರಾ ಅನ್ನಭಾಗ್ಯ ಫಲಾನುಭವಿಗಳನ್ನು ಪುನರುಜ್ಜೀವನಗೊಳಿಸಲು ಸಮಗ್ರ

2ನೇ ಪುಟನೋಡಿ

## ಕೆಮ್ಮಿನ ಸಿರಪ್ ಕಂಪನಿ ಮಾಲೀಕನ ಬಂಧನ




ಮಲ್ಲಮ್ಮ ನುಡಿ ವಾರ್ತೆ

ಚೆನ್ನೈ,ಅ.9: ಮಕ್ಕಳ ಸಾವಿಗೆ ಕಾರಣವಾಗಿದ್ದ ಕೆಮ್ಮಿನ ಸಿರಪ್ ತಯಾರಿಕಾ ಕಂಪನಿಯ ಮಾಲೀಕನನ್ನು ಪೊಲೀಸರು ಬಂಧಿಸಿದ್ದಾರೆ.ಕೋಲ್ಡ್ರಿಫ್ ಕೆಮ್ಮಿನ ಸಿರಪ್ ಸೇವಿಸಿ ಕನಿಷ್ಠ 21 ಮಕ್ಕಳು ಮೃತಪಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿರಪ್ ತಯಾರಿಸಿದ ಕಂಪನಿ ಸ್ರೆಸನ್ ಫಾರ್ಮಾಸ್ಯುಟಿಕಲ್ಸ್‌ನ ಮಾಲೀಕ ಎಸ್.ರಂಗನಾಥನ್ ಅವರನ್ನು ಮಧ್ಯಪ್ರದೇಶ ಪೊಲೀಸರು ಚೆನ್ನೈನಲ್ಲಿ ಸಂಬಂಧಿಸಿದ್ದಾರೆ.ಮಧ್ಯಪ್ರದೇಶ ಮತ್ತು ತಮಿಳುನಾಡು ಪೊಲೀಸರು ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ ರಂಗನಾಥನ್ ಅವರನ್ನು ಚೆನ್ನೈನಲ್ಲಿ ಬಂಧಿಸಲಾಗಿದೆ. ಈತನನ್ನು ವಶಕ್ಕೆ ಪಡೆದಿರುವ ಮಧ್ಯಪ್ರದೇಶದ ಪೊಲೀಸರು ವಿಚಾರಣೆ ನಡೆಸಿದ್ದಾರೆ.

2ನೇ ಪುಟನೋಡಿ

## ಸಂಪುಟ ಪುನಾರಚನೆ ವಿಚಾರ ಮಾಹಿತಿಯಿಲ್ಲ: ಡಿಕೆಶಿ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.9: ಸಚಿವ ಸಂಪುಟದಲ್ಲಿ ಬದಲಾವಣೆ ವಿಚಾರವಾಗಿ ನನಗೆ ಯಾವುದೇ ಮಾಹಿತಿ ಇಲ್ಲ. ಇದು ಪಕ್ಷ ಹಾಗೂ ಮುಖ್ಯಮಂತ್ರಿಗಳಿಗೆ ಬಿಟ್ಟ ವಿಚಾರ. ಅವರು ಈ ಬಗ್ಗೆ ತೀರ್ಮಾನ ಮಾಡುತ್ತಾರೆ ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ಹೇಳಿದರು.

ತಮ್ಮ ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈ ವಿಚಾರದಲ್ಲಿ ನಾನು ಮಾತನಾಡುವುದಿಲ್ಲ. ನನ್ನ ಜೊತೆ ಈ ವಿಚಾರ ಚರ್ಚೆ ಮಾಡಿದರೆ ನಾನು ನನ್ನ ಸಲಹೆ ನೀಡುತ್ತೇನೆ. ಈ ವಿಚಾರವಾಗಿ ಅನಗತ್ಯ ಚರ್ಚೆ ಮಾಡಿ ಗೊಂದಲ ಸೃಷ್ಟಿಸಬೇಡಿ ಎಂದು ನಿಮ್ಮಲ್ಲಿ ಮನವಿ ಮಾಡುತ್ತೇನೆ ಎಂದು ತಿಳಿಸಿದರು. ಮುಖ್ಯಮಂತ್ರಿಗಳು ಔತಣಕೂಟ ಆಯೋಜಿಸಿರುವ ಬಗ್ಗೆ ಕೇಳಿದಾಗ, ಇದರಲ್ಲಿ ತಪ್ಪೇನಿದೆ? ಒಟ್ಟಿಗೆ ಸೇರಿ ಊಟ ಮಾಡಿ, ಸಾಕಷ್ಟು ವಿಚಾರಗಳ ಬಗ್ಗೆ ಚರ್ಚೆ ಮಾಡುವುದು ಸಹಜ ಎಂದರು.

2ನೇ ಪುಟನೋಡಿ

## ಪ್ರತಿ ಮನೆಯ ಒಬ್ಬರಿಗೆ ಸರ್ಕಾರಿ ಉದ್ಯೋಗ, 20 ತಿಂಗಳಲ್ಲಿ ಜಾರಿ: ಯಾದವ್

ಮಲ್ಲಮ್ಮ ನುಡಿ ವಾರ್ತೆ

ಪಾಟ್ನಾ: ಬಿಹಾರ ವಿಧಾನಸಭೆಗೆ ದಿನಾಂಕ ಘೋಷಣೆಯಾದ ಬೆನ್ನಲ್ಲೇ ಒಂದು ಕಡೆ ಸೀಟು ಹಂಚಿಕೆ ಲೆಕ್ಕಚಾರಗಳು ನಡೆಯುತ್ತಿದ್ದರೆ ಮತ್ತೊಂದು ಕಡೆ ಭರಪೂರ ಕೊಡುಗೆಗಳ ಘೋಷಣೆ ಆರಂಭವಾಗಿದೆ. ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಇಂಡಿಯಾ ಮಹಾಘಟಬಂಧನ್ ಅಧಿಕಾರಕ್ಕೆ ಬಂದರೆ, ಬಿಹಾರದ ಪ್ರತಿ ಮನೆಯಿಂದ ಒಬ್ಬ ವ್ಯಕ್ತಿಗೆ ಸರ್ಕಾರಿ ಉದ್ಯೋಗ ನೀಡಲಾಗುವುದು ಎಂದು ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಭರವಸೆ ನೀಡಿದ್ದಾರೆ.



ಇಂದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಇಂಡಿಯಾ ಮೈತ್ರಿಕೂಟ ಸರ್ಕಾರ ರಚಿಸಿದ 20 ದಿನಗಳಲ್ಲಿ ಉದ್ಯೋಗ ಖಾತರಿಪಡಿಸುವ ಹೊಸ ಕಾನೂನನ್ನು ಪರಿಚಯಿಸಲಾಗುವುದು ಎಂದು ಹೇಳಿದರು. ಅಧಿಕಾರ ವಹಿಸಿಕೊಂಡ 20 ತಿಂಗಳೊಳಗೆ ಈ ಯೋಜನೆಯನ್ನು ರಾಜ್ಯಾದ್ಯಂತ ಸಂಪೂರ್ಣವಾಗಿ ಜಾರಿಗೆ ತರಲಾಗುವುದು. 20 ತಿಂಗಳಲ್ಲಿ ಒಂದೇ ಒಂದು ಮನೆಯೂ ಸರ್ಕಾರಿ ಉದ್ಯೋಗವಿಲ್ಲದೆ ಇರುವುದಿಲ್ಲ ಎಂದು ಹೇಳಿದರು.

ಭರವಸೆಗೆ ದತ್ತಾಂಶ ಬೆಂಬಲವಿದೆ, ಇದು ನನ್ನ ಪ್ರತಿಜ್ಞೆ, ಇದನ್ನು ಮಾಡಲು ಸಾಧ್ಯವಿದೆ. ಇದು ಜುಮ್ಲೆಬಾಜಿ ಅಲ್ಲ. ಬಿಹಾರದ ಜನರು ಈ ಬಾರಿ ಬದಲಾವಣೆಯನ್ನು ಬಯಸುತ್ತಿದ್ದಾರೆ. ಸಾಮಾಜಿಕ ನ್ಯಾಯದ ಜೊತೆಗೆ, ನಾವು ಬಿಹಾರದ ಜನರಿಗೆ ಆರ್ಥಿಕ ನ್ಯಾಯವನ್ನು ಸಹ ಖಚಿತಪಡಿಸುತ್ತೇವೆ. ಇದನ್ನು ಸಾಧಿಸಬಹುದು, ಇದಕ್ಕೆ ದೃಢಸಂಕಲ್ಪ ಮಾತ್ರ ಬೇಕಾಗುತ್ತದೆ. ಎನ್‌ಡಿಎ ನಮ್ಮ ಘೋಷಣೆಗಳನ್ನು ನಕಲಿಸಿದ್ದಾರೆ ಎಂದು ತಿಳಿಸಿದರು.

ಈ ನಡುವೆ ಎನ್‌ಡಿಎ ಒಕ್ಕೂಟದಲ್ಲಿ ಸೀಟು ಹಂಚಿಕೆಗೆ ತಿಕ್ಕಾಟ ನಡೆಯುತ್ತಿದೆ. ಲೋಕ ಜನಶಕ್ತಿ ಪಕ್ಷದ (ರಾಮ್ ವಿಲಾಸ್) ರಾಷ್ಟ್ರೀಯ ಅಧ್ಯಕ್ಷ ಚಿರಾಗ್ ಪಾಸ್ವಾನ್ 40ರಿಂದ 50 ಸ್ಥಾನಗಳಲ್ಲಿ ಸ್ಪರ್ಧಿಸಲು ಬಯಸಿದ್ದು, ಬಿಜೆಪಿ ಅವರಿಗೆ ಸುಮಾರು 20 ಸ್ಥಾನಗಳನ್ನು ನೀಡಲು ನಿರ್ಧರಿಸಿದೆ. ಆದರೆ ಇದಕ್ಕೆ ಚಿರಾಗ್ ಪಾಸ್ವಾನ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಮಾಧ್ಯಮಗಳಿಗೆ ಮಾತನಾಡಿರುವ ಚಿರಾಗ್ ಪಾಸ್ವಾನ್, ಮಾತುಕತೆ ನಡೆಯುತ್ತಿವೆ. ಕೇಂದ್ರ ಸಚಿವರಾಗಿ ಉಳಿಯುವವರೆಗೆ ಸಚಿವಾಲಯದ ಜವಾಬ್ದಾರಿಗಳು ನನಗಿರುತ್ತವೆ, ಅದನ್ನು ಮಾಡುತ್ತಿದ್ದೇನೆ ಎಂದಿದ್ದಾರೆ.

ಸೀಟು ಹಂಚಿಕೆ ಬಿಕ್ಕಟ್ಟನ್ನು ಪರಿಹರಿಸುವ ಪ್ರಯತ್ನದಲ್ಲಿ ಬಿಜೆಪಿ ಪ್ರಯತ್ನ ಮಾಡುತ್ತಿದೆ. ಎಲ್‌ಜೆಪಿ ನಾಯಕ ಚಿರಾಗ್ ಅವರನ್ನು ಕೇಂದ್ರ ಸಚಿವ ನಿತ್ಯಾನಂದ ರೈ ಭೇಟಿಯಾಗಿದ್ದಾರೆ. ಇದಕ್ಕೂ ಮೊದಲು, ಬಿಹಾರ ಚುನಾವಣೆಗೆ ಬಿಜೆಪಿಯ ಉಸ್ತುವಾರಿ ವಹಿಸಿರುವ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ಮಂಗಳವಾರ ಪಾಸ್ವಾನ್ ಅವರನ್ನು ಭೇಟಿಯಾಗಿದ್ದರು. ಅವರೊಂದಿಗೆ ಬಿಹಾರ ಸಚಿವ ಮಂಗಲ್ ಪಾಂಡೆ ಮತ್ತು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ವಿನೋದ್ ತಾವ್ಡೆ ಇದ್ದರು.

ಈ ನಡುವೆ ಕಾಂಗ್ರೆಸ್ ಕೇಂದ್ರೀಯ ಚುನಾವಣಾ ಸಮಿತಿ ಸಭೆ ನಡೆಸಿದ್ದು, 20–30 ಕ್ಷೇತ್ರಗಳಿಗೆ ಅಭ್ಯರ್ಥಿಗಳ ಹೆಸರು ಅಂತಿಮಗೊಳಿಸಿದೆ. ಆದರೆ ಇಂಡಿಯಾ, ಎನ್‌ಡಿಎ ಸೀಟು ಹಂಚಿಕೆ ಕಸರತ್ತು ಮುಗಿದ ಬಳಿಕ ಅಭ್ಯರ್ಥಿಗಳ ಹೆಸರು ಘೋಷಿಸುವ ಸಾಧ್ಯತೆ ಇದೆ.

## 2 ತಿಂಗಳಲ್ಲಿ ತನಿಖೆ ಪೂರ್ಣಗೊಳಿಸಿ ವರದಿ ಸಲ್ಲಿಸಲು ಕೋರ್ಟ್ ಆದೇಶ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.9: ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಿಎಂ ಪತ್ನಿ ವಿರುದ್ಧದ ಮುಡಾ ಪ್ರಕರಣದ ತನಿಖೆ ಪೂರ್ಣಗೊಳಿಸಲು ತನಿಖಾ ಸಂಸ್ಥೆಗೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ 2 ತಿಂಗಳು ಗಡುವು ನೀಡಿದೆ.ಕಳೆದ 6 ತಿಂಗಳಿಂದ ತನಿಖೆಯಲ್ಲಿ ಪ್ರಗತಿ ಆಗದ ಹಿನ್ನೆಲೆ ಅರ್ಜಿದಾರರು ಬಿ ರಿಪೋರ್ಟ್ ಸಲ್ಲಿಸುವಂತೆ ನ್ಯಾಯಾಲಯಕ್ಕೆ ಮನವಿ ಮಾಡಿದ್ದರು. ಈ ಅರ್ಜಿಯನ್ನು ನ್ಯಾಯಾಲಯ ವಿಚಾರಣೆ ನಡೆಸಿ, ಇಂದಿಗೆ ಆದೇಶ ಕಾಯ್ದಿರಿಸಿತ್ತು.

ಆದೇಶದಲ್ಲಿ 2 ತಿಂಗಳ ಒಳಗಾಗಿ ತನಿಖೆಯನ್ನು ಸಂಪೂರ್ಣಗೊಳಿಸಿ ಅಂತಿಮ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಕೆ ಮಾಡಬೇಕು. ಹೆಚ್ಚುವರಿಯಾಗಿ ಕಾಲಾವಕಾಶ ಕೋರುವಂತಿಲ್ಲ ಎಂದು ನ್ಯಾಯಾಲಯ ಸೂಚಿಸಿದೆ.

ಲೋಕಾಯುಕ್ತ ಪೊಲೀಸರು ತನಿಖೆಯ ನೆಪದಲ್ಲಿ ಕಾಲಹರಣ ಮಾಡುತ್ತಾ ಇದ್ದಾರೆ. ಹೀಗಾಗಿ ಬಿ ರಿಪೋರ್ಟ್‌ಗೆ ತೀರ್ಮಾನ ಮಾಡುವಂತೆ ಅರ್ಜಿ ಸಲ್ಲಿಸಲಾಗಿತ್ತು. ಸುದೀರ್ಘ ವಿಚಾರಣೆ ನಡೆಸಿದ ನ್ಯಾಯಲಯ ನವೆಂಬರ್ 15ಕ್ಕೆ ವಿಚಾರಣೆ ಮುಂದೂಡಿದೆ. ತನಿಖಾಧಿಕಾರಿ ಬದಲಾವಣೆ ಮಾಡುವಂತೆ ಕೋರಿದ್ದ ಮಧ್ಯಂತರ ಅರ್ಜಿಯನ್ನು ನ್ಯಾಯಾಲಯ ಇದೇ ವೇಳೆ ವಜಾ ಮಾಡಿದೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ದೂರುದಾರ ಸ್ನೇಹಮಯಿ ಕೃಷ್ಣ, ಇಂದು ಆದೇಶ ಮಾಡುವ ನಿರೀಕ್ಷೆ ಇತ್ತು. ನ್ಯಾಯಾಲಯ ತನಿಖಾಧಿಕಾರಿ ಬದಲಾವಣೆ ಮಾಡಲು ಕೋರಿದ್ದ ಅರ್ಜಿ ವಜಾ ಮಾಡಿದೆ.

ಲೋಕಾಯುಕ್ತ ಅಧಿಕಾರಿಗಳಿಗೆ ಅಂತಿಮ ವರದಿ ಸಲ್ಲಿಕೆಗೆ 2 ತಿಂಗಳ ಕಾಲಾವಕಾಶ ನೀಡಿದೆ. ಅಂತಿಮ ವರದಿ ಸಲ್ಲಿಕೆ ಬಳಿಕ ಬಿ– ರಿಪೋರ್ಟ್ ವಿರುದ್ಧ ತೀರ್ಪು ಪ್ರಕಟಿಸುವ ವಿಶ್ವಾಸವಿದೆ ಎಂದು ಹೇಳಿದ್ದಾರೆ.

## ಸರಾಸರಿಗಿಂತ ಹೆಚ್ಚು ಹಿಂಗಾರು ಮಳೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.9: ಕಳೆದ ವರ್ಷಕ್ಕಿಂತ ಈ ಬಾರಿ ರಾಜ್ಯದಲ್ಲಿ ಮುಂಗಾರು ಮಳೆ ಅಬ್ಬರ ಜೋರಾಗಿತ್ತು. ಇನ್ನೇನು ಕೆಲ ದಿನಗಳಲ್ಲಿ ಮುಂಗಾರು ಮುಗಿದು, ಹಿಂಗಾರು ಮಳೆ ಆರಂಭವಾಗಲಿದ್ದು, ಈ ವರ್ಷಾಂತ್ಯದವರೆಗೂ ಜನರಿಗೆ ಮಳೆಕಾಟ ತಪ್ಪಿದ್ದಲ್ಲ.

2025ನೇ ಸಾಲಿನ ನೈಋತ್ಯ ಮುಂಗಾರು ಕೆಲ ದಿನಗಳಲ್ಲಿ ಮುಕ್ತಾಯವಾಗಲಿದ್ದು, ಹಿಂಗಾರು ಮಳೆ ಆರಂಭಗೊಳ್ಳುತ್ತಿದೆ. ಈ ಮುಂಗಾರು ಮಳೆ ಜೂನ್ 1ರಿಂದ ಸೆಪ್ಟೆಂಬರ್ 30ರವರೆಗೂ ದಾಖಲೆಗಳ ಪ್ರಕಾರವಿತ್ತು. ಇದುವರೆಗೂ ರಾಜ್ಯದಲ್ಲಿ ವಾಡಿಕೆಗಿಂತ ಹೆಚ್ಚು ಮುಂಗಾರು ಮಳೆಯಾಗಿದೆ. ಈ ಮುಂಗಾರು ಅವಧಿಯಲ್ಲಿ ರಾಜ್ಯದಲ್ಲಿ 339 ಸೆಂಟಿ ಮೀಟರ್ ಮುಂಗಾರು ಮಳೆಯಾಗಿದ್ದು, ಸರಾಸರಿಗಿಂತ 14 ಸೆಂಟಿ ಮೀಟರ್ ಹೆಚ್ಚಿನ ಮಳೆಯಾಗಿದೆ. ಕರಾವಳಿ ಹಾಗೂ ಉತ್ತರ ಒಳನಾಡಿನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಮಳೆಯಾಗಿದ್ದು, ಸಾಕಷ್ಟು ಮಳೆ ಅನಾಹುತಗಳು ಈ ವರ್ಷವಾಗಿವೆ.

ಇನ್ನೂ ಈ ವರ್ಷ ಮುಂಗಾರಿನಂತೆ ಹಿಂಗಾರು ಮಳೆಯೂ ವಾಡಿಕೆಗಿಂತ ಹೆಚ್ಚಾಗೋ ಸಾಧ್ಯತೆಯಿದೆ ಅಂತಾ ಹವಾಮಾನ ಇಲಾಖೆ ತಿಳಿಸಿದೆ. ಅಕ್ಟೋಬರ್‌ನಿಂದ ಡಿಸೆಂಬರ್‌ವರೆಗೂ ಇರಲಿದ್ದು, ಜನರಿಗೆ ಮಳೆ ಕಾಟ ತಪ್ಪಿದ್ದಲ್ಲ ಅಂತಾರೆ ಹವಾಮಾನ ಇಲಾಖೆಯ ವಿಜ್ಞಾನಿಗಳು. ಒಟ್ಟಿನಲ್ಲಿ ಈ ಬಾರಿಯ ಮುಂಗಾರು ಹಾಗೂ ಹಿಂಗಾರು ಮಳೆ ಉತ್ತಮವಾಗಿದ್ದು, ರೈತರಿಗೆ ಹಾಗೂ ಜನರಿಗೆ ಸಂತಸವನ್ನುಂಟು ಮಾಡಿದೆ.

## ನ. 25 ರಂದು ರಾಮ ಮಂದಿರ ಮೇಲೆ 21 ಅಡಿ ಧ್ವಜಾರೋಹಣ

ಮಲ್ಲಮ್ಮ ನುಡಿ ವಾರ್ತೆ

ಅಯೋಧ್ಯೆ:ಅ.9: ಪ್ರಧಾನಿ ನರೇಂದ್ರ ಮೋದಿ ಅವರು ನವೆಂಬರ್ 25 ರಂದು ಅಯೋಧ್ಯೆಯ ರಾಮ ಮಂದಿರದ ಶಿಖರದ ಮೇಲೆ 21 ಅಡಿ ಎತ್ತರದ ಧಾರ್ಮಿಕ(ಧರ್ಮ) ಧ್ವಜವನ್ನು ಹಾರಿಸಲಿದ್ದಾರೆ ಎಂದು ಅಧಿಕಾರಿಗಳು ಗುರುವಾರ ತಿಳಿಸಿದ್ದಾರೆ.ಈ ಕಾರ್ಯಕ್ರಮವು ದೇವಾಲಯದ ನಿರ್ಮಾಣವನ್ನು ಅಧಿಕೃತವಾಗಿ ಪೂರ್ಣಗೊಳಿಸಲಿದೆ ಎಂದು ರಾಮ ಮಂದಿರ ನಿರ್ಮಾಣ ಸಮಿತಿಯ ಅಧ್ಯಕ್ಷ ನೃಪೇಂದ್ರ ಮಿಶ್ರಾ ಹೇಳಿದ್ದಾರೆ.

ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಮಿಶ್ರಾ ಅವರು, ನವೆಂಬರ್ 25 ರಂದು ಪ್ರಧಾನಿ ಮೋದಿ ಅವರ ಆಗಮನವನ್ನು ದೃಢಪಡಿಸಿದರು ಮತ್ತು ಈ ಸಮಾರಂಭ "ಐತಿಹಾಸಿಕ"ವಾಗಿರುತ್ತದೆ ಎಂದು ಹೇಳಿದರು.

ಪ್ರಧಾನಿ ಮೋದಿ ಅವರು ಧರ್ಮ ಧ್ವಜಾರೋಹಣದ ಮೂಲಕ, ನಂಬಿಕೆ ಮತ್ತು ಕಾಯುವಿಕೆಯ ಬಹುದಿನಗಳ ಕನಸು ಈಗ ನನಸಾಗಿದೆ ಎಂದು ಜಗತ್ತಿಗೆ ತಿಳಿಸುತ್ತಾರೆ ಎಂದರು.

### ಭಾರತದ ವಿರುದ್ಧ ಪ್ರತೀಕಾರಕ್ಕೆ

## ಜೈಷ್ ಉಗ್ರ ಸಂಘಟನೆಯಿಂದ ಮೊದಲ ಬಾರಿಗೆ 'ಮಹಿಳಾ ವಿಂಗ್

ಮಲ್ಲಮ್ಮ ನುಡಿ ವಾರ್ತೆ

ಇಸ್ಲಾಮಾಬಾದ್: ಅ.9:ಭಾರತದ 'ಆಪರೇಷನ್ ಸಿಂಧೂರ'ದಾಳಿಯಿಂದ ಭಾರಿ ನಷ್ಟ ಅನುಭವಿಸಿರುವ ಪಾಕಿಸ್ತಾನ ಮೂಲದ ಉಗ್ರ ಸಂಘಟನೆ ಜೈಷ್–ಇ–ಮೊಹಮ್ಮದ್ ಭಾರತ ಸೇರಿದಂತೆ ಮತ್ತಿತರ ಕಡೆಗಳಲ್ಲಿ ಮತ್ತೆ ಪುಟಿದೇಳಲು ಪ್ರಯತ್ನ ನಡೆಸುತ್ತಿದ್ದು, ಇದೇ ಮೊದಲ ಬಾರಿಗೆ ಜಮತ್–ಉಲ್–ಮಾಮಿನಾತ್ ಎಂಬ ಮಹಿಳಾ ಘಟಕ (ವಿಂಗ್) ರಚನೆಯ ಘೋಷಣೆ ಮಾಡಿರುವುದಾಗಿ ಮಾಧ್ಯಮಗಳು ವರದಿ ಮಾಡಿವೆ.

ಜೆಇಎಂ ಮುಖ್ಯಸ್ಥ ಮತ್ತು ವಿಶ್ವಸಂಸ್ಥೆ ಘೋಷಿತ ಭಯೋತ್ಪಾದಕ ಮೌಲಾನಾ ಮಸೂದ್ ಅಜರ್ ಹೆಸರಿನಲ್ಲಿ ಬರೆಯಲಾದ ಪತ್ರದಲ್ಲಿ ಈ ಘೋಷಣೆ ಮಾಡಲಾಗಿದೆ ಎಂದು ವರದಿಯಾಗಿದೆ.

ಹೊಸ ಮಹಿಳಾ ಘಟಕಕ್ಕೆ ಅಕ್ಟೋಬರ್ 8ರಂದು ಪಾಕಿಸ್ತಾನದ ಬಹವಾಲ್ಪುರದಲ್ಲಿರುವ ಮರ್ಕಝ್ ಉಸ್ಮಾನ್–ಒ–ಅಲಿಯಲ್ಲಿ ನೇಮಕಾತಿ ಪ್ರಾರಂಭವಾಗಿದೆ. ಮಹಿಳಾ ಬ್ರಿಗೇಡ್ ಅನ್ನು ಮಸೂದ್ ಅಜರ್ ಅವರ ಸಹೋದರಿ ಸಾದಿಯಾ ಅಜರ್ ಮುನ್ನಡೆಸಲಿದ್ದಾರೆ ಎಂದು ವರದಿಯಾಗಿದೆ.ಪಾಕಿಸ್ತಾನದ ದಕ್ಷಿಣ ಪಂಜಾಬ್ ಪ್ರಾಂತ್ಯದ ಸುಮಾರು 100 ಕಿಮೀ ದೂರದಲ್ಲಿರುವ ಬಹವಾಲ್‌ಪುರದ ಮರ್ಕಝ್ ಸುಭಾನಲ್ಲಾಹ್‌ನಲ್ಲಿರುವ ಜೆಎಂನ ಪ್ರಧಾನ ಕಚೇರಿಯನ್ನು ಭಾರತೀಯ ಸಶಸ್ತ್ರ ಪಡೆಗಳು ಮೇ 7 ರಂದು ಆಪರೇಷನ್ ಸಿಂಧೂರ್‌ನಲ್ಲಿ ಹೊಡೆದುರುಳಿಸಿದಾಗ ಆಕೆಯ ಪತಿ ಯೂಸುಫ್ ಅಜರ್ ಹತ್ಯೆಯಾಗಿತ್ತು.

ಜೆಇಎಂ ಕಮಾಂಡರ್‌ಗಳ ಪತ್ನಿಯರನ್ನು ಮತ್ತು ಬಹವಾಲ್‌ಪುರ್, ಕರಾಚಿ, ಮುಜಾಫರಾಬಾದ್, ಕೋಟ್ಲಿ, ಹರಿಪುರ ಮತ್ತು ಮನ್ಸೆಹ್ರಾದಲ್ಲಿನ ತನ್ನ ಕೇಂದ್ರಗಳಲ್ಲಿ ಕಲಿಯುತ್ತಿರುವ ಆರ್ಥಿಕವಾಗಿ ದುರ್ಬಲ ಮಹಿಳೆಯರನ್ನು ಈ ಗುಂಪಿನಲ್ಲಿ ಸೇರಿಸಿಕೊಳ್ಳಲು ಪ್ರಾರಂಭಿಸಿದೆ ಎಂದು ಮೂಲಗಳು ಹೇಳಿವೆ.

ಸಾಂಪ್ರದಾಯಿಕವಾಗಿ ಮಹಿಳೆಯರು ಶಸ್ತ್ರಸಜ್ಜಿತ ಅಥವಾ ಯುದ್ಧ ಕಾರ್ಯಾಚರಣೆಗಳಲ್ಲಿ ಭಾಗವಹಿಸುವುದನ್ನು ಜೆಎಂ ನಿಷೇಧಿಸಿದೆ. ಭಾರತೀಯ ಸೇನೆಯ ಯಶಸ್ವಿ ಆಪರೇಷನ್ ಸಿಂಧೂರ್ ಜೊತೆಗೆ 26 ನಾಗರಿಕರ ಹತ್ಯೆಗೆ ಕಾರಣವಾದ ಇತ್ತೀಚಿನ ಪಹಲ್ಗಾಮ್ ಭಯೋತ್ಪಾದಕ ದಾಳಿಯು ಸಂಘಟನೆಯಲ್ಲಿ ಕಾರ್ಯತಂತ್ರದ ಬದಲಾವಣೆಯನ್ನು ಪ್ರೇರೇಪಿಸಿದೆ ಎಂದು ವಿಶ್ಲೇಷಕರು ಹೇಳಿದ್ದಾರೆ.

ಆತ್ಮಾಹುತಿ ದಾಳಿಯಲ್ಲಿ ಮಹಿಳೆಯರ ಬಳಕೆ:ಮಸೂದ್ ಅಜರ್ ಮತ್ತು ಆತನ ಸಹೋದರ ತಲ್ಹಾ ಅಲ್–ಸೈಫ್ ಅವರು ಜೆಇಎಂನ ಕಾರ್ಯಾಚರಣೆಯಲ್ಲಿ ಮಹಿಳೆಯರನ್ನು ಸೇರ್ಪಡೆಗೊಳಿಸುವುದನ್ನು ಅನುಮೋದಿಸಿದ್ದಾರೆ. ಐಎಸ್‌ಐಎಸ್ ಉಗ್ರಸಂಘನೆಗಳಂತೆ ಮಹಿಳೆಯರನ್ನು ಯುದ್ಧ ಅಥವಾ ಆತ್ಮಾಹುತಿ ದಾಳಿಗಳಲ್ಲಿ ಬಳಸಿಕೊಳ್ಳಲು ಯೋಜಿಸಲಾಗಿದೆ

2ನೇ ಪುಟನೋಡಿ

## ವೈಜ್ಞಾನಿಕ ಮನೋಭಾವವೇ ಭಾರತದ ಬೆಳವಣಿಗೆಗೆ ಇಂಧನ : ಗೆಹ್ಲೋಟ್




ಬೆಂಗಳೂರು,ಅ,09 :ಭಾರತದ ಜ್ಞಾನ ಮತ್ತು ವಿಜ್ಞಾನವು ತಾಂತ್ರಿಕ ಪ್ರಗತಿಯ ಜೊತೆಗೆ "ವಸುಧೈವ ಕುಟುಂಬಕಂ"ಎಂಬ ಮನೋಭಾವದಿಂದ ಮಾನವ ಕಲ್ಯಾಣಕ್ಕಾಗಿ ಕೆಲಸ ಮಾಡುತ್ತಿದೆ. ಪ್ರಾಚೀನ ಜ್ಞಾನ ಮತ್ತು ಆಧುನಿಕ ನಾವೀನ್ಯತೆಗಳ ಸಂಗಮವು ಭಾರತವನ್ನು ವಿಜ್ಞಾನ ಜಗತ್ತಿನಲ್ಲಿ ವಿಶ್ವ ಶಕ್ತಿಯಾಗಿ ಮಾಡುತ್ತಿದೆ ಎಂದು ಕರ್ನಾಟಕದ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಹೇಳಿದರು.

"ನಾನು ವಿಜ್ಞಾನಿ"ಕಾರ್ಯಕ್ರಮದಡಿಯಲ್ಲಿ ಆಯೋಜಿಸಲಾಗಿದ್ದ ರಾಜ್ಯಮಟ್ಟದ ಪ್ರಥಮ ದೂರದರ್ಶಕ ತರಬೇತಿ ಶಿಬಿರ–2025 ಬಹುಮಾನ ವಿತರಣಾ ಸಮಾರಂಭದಲ್ಲಿ ಭಾಗವಹಿಸಿ.

2ನೇ ಪುಟನೋಡಿ

**ಮಹಿಳಾ ವಿಶ್ವಕಪ್ 2025: ಪಾಯಿಂಟ್ಸ್ ಪಟ್ಟಿಯಲ್ಲಿ ಅಗ್ರಸ್ಥಾನಕ್ಕೇರಿದ ಆಸ್ಟ್ರೇಲಿಯಾ ತಂಡ**

# ಒಂದನೇ ಪುಟದಿಂದ

## ಸಿರಪ್ ಕಂಪನಿ ಮಾಲೀಕನ ಬಂಧನ

ರಾಜ್ಯದಲ್ಲಿ ವಿಷಕಾರಿ ಸಿರಪ್ ಸೇವಿಸಿ ಸಾವನ್ನಪ್ಪಿದ ಕನಿಷ್ಠ 21 ಮಕ್ಕಳ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಮಧ್ಯಪ್ರದೇಶದ ಪೊಲೀಸರು ಕಂಪನಿ ಮಾಲೀಕ ರಂಗನಾಥನ್ ಅವರಿಗಾಗಿ ಶೋಧ ನಡೆಸಿದ್ದರು ಅಲ್ಲದೆ ಅವರ ಸುಳಿವುಕೊಟ್ಟವರಿಗೆ 20,000 ರೂ. ಬಹುಮಾನವನ್ನು ಘೋಷಿಸಿದ್ದರು.

ಮಧ್ಯಪ್ರದೇಶದ ಹೊರತಾಗಿ, ರಾಜಸ್ಥಾನದಲ್ಲೂ ಈ ಸಿರಪ್ ಸೇವಿಸಿ ಕೆಲ ಮಕ್ಕಳು ಸಾವನ್ನಪ್ಪಿದರು. ಜೊತೆಗೆ ಮಕ್ಕಳಿಗೆ ಮೂತ್ರಪಿಂಡದ ಸೋಂಕು ಉಂಟಾಗಿ ಹಲವು ಮಕ್ಕಳು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ

ಕೋಲ್ಡ್ರಿಫ್ ಎಂಬುದು ಮಕ್ಕಳಲ್ಲಿ ಶೀತ ಮತ್ತು ಕೆಮ್ಮಿನ ಲಕ್ಷಣಗಳನ್ನು ನಿವಾರಿಸಲು ಸೂಚಿಸಲಾದ ಔಷಧಿಯಾಗಿದೆ, ಉದಾಹರಣೆಗೆ ಮೂಗು ಸೋರುವುದು, ಸೀನುವುದು, ಗಂಟಲು ನೋವು ಮತ್ತು ಕಣ್ಣುಗಳಲ್ಲಿ ನೀರು ಬರುವುದು ಈ ರೀತಿಯ ಕಾಯಿಲೆಗಳಿಗೆ ಶಿಫಾರಸ್ಸು ಮಾಡಲಾಗುತ್ತಿದೆ.

## ಮಹಿಳೆಯರಿಗೆ ಋತುಚಕ್ರ ರಜೆ

ದೇಶದಲ್ಲೇ ಮೊದಲ ಬಾರಿಗೆ ಇಂತಹದೊಂದು ನೀತಿಯನ್ನು ಜಾರಿ ಮಾಡಿದ ಮೊದಲ ರಾಜ್ಯ ಕರ್ನಾಟಕವಾಗಿದೆ. ಖಾಸಗಿ ಕಂಪೆನಿಗಳು ಈ ನೀತಿಯನ್ನು ಅಳವಡಿಸಿಕೊಳ್ಳುವುದು ಕಡ್ಡಾಯವಾಗಿದೆ.ರಾಜ್ಯದ ಕಾರ್ಮಿಕ ಇಲಾಖೆ ಈ ಋತುಚಕ್ರ ರಜೆ ನೀತಿ ಪ್ರಸ್ತಾವವನ್ನು ಸಂಪುಟದ ಮುಂದೆ ಮಂಡಿಸಿದ್ದು, ಅದಕ್ಕೆ ಸಂಪುಟ ಒಪ್ಪಿಗೆ ನೀಡಿದೆ.ಬಿಹಾರ ಮತ್ತು ಓರಿಸ್ಸಾದಲ್ಲಿ ವಾರ್ಷಿಕ 12 ದಿನಗಳ ಋತುಚಕ್ರ ರಜೆ ನೀತಿ ಇದ್ದು, ಅದು ಕೇವಲ ಸರ್ಕಾರಿ ಉದ್ಯೋಗಿಗಳಿಗೆ ಮಾತ್ರ ಅನ್ವಯವಾಗುತ್ತಿದೆ.ಇಡೀ ದೇಶದಲ್ಲೇ ಕರ್ನಾಟಕ ಸರ್ಕಾರಿ ಹಾಗೂ ಖಾಸಗಿ ವಲಯದಲ್ಲಿ ಈ ನೀತಿಯನ್ನು ಜಾರಿ ಮಾಡಿದ ಮೊದಲ ರಾಜ್ಯ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.ವಿವಿಧ ಕಂಪೆನಿ, ಕಚೇರಿ, ಕೈಗಾರಿಕೆಗಳಲ್ಲಿ ಕಾರ್ಯನಿರ್ವಹಿಸುವ ಮಹಿಳೆಯರಿಗೆ ಋತುಚಕ್ರ ರಜೆ ನೀಡುವಂತೆ ಪರಿಶೀಲಿಸುವಂತೆ ಇತ್ತೀಚೆಗೆ ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರಕ್ಕೆ ಸೂಚನೆ ನೀಡಿತ್ತು.

## 5 ಕೆಜಿ ಅಕ್ಕಿ ಜತೆ ಇಂದಿರಾ ಆಹಾರ ಕಿಟ್

ಪೋಷಣೆ ಮತ್ತು ಆಹಾರ ಉಪಕ್ರಮ) ಕಿಟ್ ನೀಡಲು ಸರ್ಕಾರ ನಿರ್ಧರಿಸಿದೆ.

ಅದರಂತೆ ಫಲಾನುಭವಿಗಳಿಗೆ 10 ಕೆಜಿ ಅಕ್ಕಿ ಬದಲಿಗೆ 5 ಕೆಜಿ ಅಕ್ಕಿ ನೀಡಲಾಗುತ್ತದೆ. ಉಳಿದ 5 ಕೆಜಿ ಅಕ್ಕಿ ಲೆಕ್ಕದಲ್ಲಿ ತೊಗರಿ ಬೇಳೆ, ಹೆಸರು ಕಾಳು, ಸಕ್ಕರೆ, ಉಪ್ಪು ತಲಾ 1 ಕೆಜಿ ಹಾಗೂ 1 ಲೀಟರ್ ಅಡುಗೆ ಎಣ್ಣೆ ಪದಾರ್ಥವನ್ನು ಇಂದಿರಾ ಆಹಾರ ಕಿಟ್‌ನಲ್ಲಿ ನೀಡಲಾಗುತ್ತದೆ. ಅನ್ನಭಾಗ್ಯದ ಅಕ್ಕಿ ದುರ್ಬಳಕೆ ತಡೆಯಲು ಈ ಕ್ರಮ ಕೈಗೊಳ್ಳಲಾಗಿದೆ ಎಂದು ಸಚಿವ ಹೆಚ್.ಕೆ.ಪಾಟೀಲ್ ತಿಳಿಸಿದ್ದಾರೆ.

ಅದಕ್ಕಾಗಿ ಅನ್ನಭಾಗ್ಯ ಯೋಜನೆ ಅಡಿಯಲ್ಲಿ 5 ಕೆಜಿ ಹೆಚ್ಚುವರಿ ಅಕ್ಕಿ ನೀಡಲು ಆಯವ್ಯಯದಲ್ಲಿ ಹಂಚಿಕೆ ಮಾಡಿರುವ 6,426 ಕೋಟಿ ರೂ.ಗಳಲ್ಲಿ 6,119.52 ಕೋಟಿ ರೂ. ವೆಚ್ಚದಲ್ಲಿ ಇಂದಿರಾ ಆಹಾರ ಕಿಟ್ ಅನ್ನು ಒದಗಿಸಲು ಬಜೆಟ್ ಮರುಹಂಚಿಕೆ ಮಾಡುವುದಕ್ಕೆ ಅನುಮೋದನೆ ನೀಡಲಾಗಿದೆ.

## ಮಾಹಿತಿಯಿಲ್ಲ: ಡಿಕೆಶಿ

ಬಿಗ್ ಬಾಸ್ ವಿಚಾರವಾಗಿ ಪ್ರತಿಕ್ರಿಯಿಸಿ, ಬುಧವಾರ ರಾತ್ರಿ ಡಿಸಿಗೆ ಕರೆ ಮಾಡಿ ಜಾಲಿವುಡ್ ಸ್ಟುಡಿಯೋದವರು ತಮ್ಮ ತಪ್ಪನ್ನು ಸರಿಪಡಿಸಿಕೊಳ್ಳಲು ಒಂದು ಅವಕಾಶ ಕಲ್ಪಿಸಿ ಎಂದು ಸೂಚಿಸಿದ್ದೇನೆ. ನಮ್ಮ ಉದ್ಯಮ ಬೆಳೆಯಬೇಕು. ಇದು ಹೆಚ್ಚಿನ ಮಾಲಿನ್ಯ ಉಂಟು ಮಾಡಲು ದೊಡ್ಡ ಕಾರ್ಖಾನೆಯಲ್ಲ. ಸಣ್ಣಪುಟ್ಟ ನಿಯಮ ಉಲ್ಲಂಘನೆಯಾಗಿದ್ದರೆ ಸರಿಪಡಿಸಿಕೊಳ್ಳಿ. ಮಾಲಿನ್ಯ ನಿಯಂತ್ರಣ ಮಂಡಳಿ ನಿಯಮಾವಳಿಯನ್ನು ಪಾಲನೆ ಮಾಡಿ ಎಂದು ಸ್ಟುಡಿಯೋದವರಿಗೂ ಹೇಳಿ ಕಳುಹಿಸಿದ್ದೇನೆ ಎಂದು ಹೇಳಿದರು.

## ಮೊದಲ ಬಾರಿಗೆ 'ಮಹಿಳಾ ವಿಂಗ್

. ಆಪರೇಷನ್ ಸಿಂಧೂರ್ ನಂತರ ಜೆಎಂ, ಮಿತ್ರ ಗುಂಪುಗಳಾದ ಹಿಜ್ಬುಲ್ ಮುಜಾಹಿದ್ದೀನ್ (ಎಚ್‌ಎಂ) ಮತ್ತು ಲಷ್ಕರ್-ಎ-ತೋಯ್ಬಾ ಜೊತೆಗೆ ತನ್ನ ಕಾರ್ಯಾಚರಣೆಯ ಭಾಗಗಳನ್ನು ಪಾಕಿಸ್ತಾನದ ಖೈಬರ್ ಪಖ್ತುಂಕ್ವಾ (ಕೆಪಿಕೆ) ಪ್ರಾಂತ್ಯಕ್ಕೆ ಸ್ಥಳಾಂತರಿಸಿದೆ ಎಂದು ಹೇಳಲಾಗುತ್ತದೆ.

ಭಯೋತ್ಪಾದಕರ ನೆಲೆ ಪುನರ್ ನಿರ್ಮಾಣ:ಮಿಲಿಟರಿ ಕಾರ್ಯಾಚರಣೆಯ ಸಮಯದಲ್ಲಿ ನಾಶವಾದ ಭಯೋತ್ಪಾದಕರ ಮೂಲಸೌಕರ್ಯವನ್ನು ಪುನರ್ನಿರ್ಮಿಸಲು ಪಾಕಿಸ್ತಾನ ಸಕ್ರಿಯವಾಗಿ ಪ್ರಯತ್ನಿಸುತ್ತಿದೆ. ದೇಶಾದ್ಯಂತ 313 ಹೊಸ ಮಾರ್ಕಾಜ್ (ತರಬೇತಿ ಮತ್ತು ಕಾರ್ಯಾಚರಣಾ ಕೇಂದ್ರಗಳು) ಸ್ಥಾಪಿಸಲು ಸುಮಾರು 3.91 ಶತಕೋಟಿ ರೂ. ಸಂಗ್ರಹಿಸುವ ಗುರಿಯೊಂದಿಗೆ ಇಜಿಪೈಸಾ ಮೂಲಕ ಆನ್‌ಲೈನ್ ಪ್ರಚಾರ ಸೇರಿದಂತೆ ನಿಧಿಸಂಗ್ರಹಣೆಯ ಕಾರ್ಯಗಳು ನಡೆಯುತ್ತಿವೆ ಎಂದು ವರದಿಯಾಗಿದೆ.ಜಮ್ಮು ಮತ್ತು ಕಾಶ್ಮೀರ, ಉತ್ತರ ಪ್ರದೇಶ ಮತ್ತು ದಕ್ಷಿಣ ಭಾರತದ ಕೆಲವು ಭಾಗಗಳಲ್ಲಿ ಆನ್‌ಲೈನ್ ನೆಟ್‌ವರ್ಕ್‌ಗಳ ಮೂಲಕ ಜಮಾತ್-ಉಲ್-ಮೊಮಿನಾತ್ ಭಾರತದಲ್ಲಿ ತನ್ನ ಕಾರ್ಯಾಚರಣೆಯನ್ನು ವಿಸ್ತರಿಸಲು ಪ್ರಯತ್ನಿಸಬಹುದು ಎನ್ನಲಾಗಿದೆ. ಈ ಗುಂಪು ಸಾಮಾಜಿಕ ಮಾಧ್ಯಮ ವೇದಿಕೆಗಳು, ವಾಟ್ಸಾಪ್‌ನಂತಹ ಅಪ್ ಗಳ ಮೂಲಕ ಮಹಿಳೆಯರನ್ನು ಗುರಿಯಾಗಿಸಿಕೊಂಡಿದೆ ಎಂದು ಗುಪ್ತಚರ ಮೂಲಗಳು ತಿಳಿಸಿವೆ.

## ಬೆಳವಣಿಗೆಗೆ ಇಂಧನ : ಗೆಹ್ಲೋಟ್

ಅವರು ಮಾತನಾಡಿದರು. ಪ್ರಾಚೀನ ಕಾಲದಿಂದಲೂ ವಿಜ್ಞಾನಕ್ಕೆ ಭಾರತದ ಕೊಡುಗೆ ಮಹತ್ವದ್ದಾಗಿದೆ. ಆರ್ಯಭಟ, ಭಾಸ್ಕರಾಚಾರ್ಯ, ಬ್ರಹ್ಮಗುಪ್ತ ಮತ್ತು ವರಾಹಮಿಹಿರರಂತಹ ವಿಜ್ಞಾನಿಗಳು ಗಣಿತ, ಖಗೋಳಶಾಸ್ತ್ರ ಮತ್ತು ಭೌತಶಾಸ್ತ್ರಕ್ಕೆ ಬಲವಾದ ಅಡಿಪಾಯ ಹಾಕಿದರು. ಶೂನ್ಯ, ದಶಮಾಂಶ ವ್ಯವಸ್ಥೆ, ಗ್ರಹಗಳ ಚಲನೆ ಮತ್ತು ಭೂಮಿಯ ತಿರುಗುವಿಕೆಯಂತಹ ಸಿದ್ಧಾಂತಗಳೆಲ್ಲವೂ ಭಾರತದ ಕೊಡುಗೆಗಳಾಗಿವೆ. ವೈದ್ಯಕೀಯ ಕ್ಷೇತ್ರದಲ್ಲಿ, ಚರಕ ಮತ್ತು ಸುಶ್ರುತ ಆಯುರ್ವೇದ ಮತ್ತು ಶಸ್ತ್ರಚಿಕಿತ್ಸೆಯಲ್ಲಿ ಗಮನಾರ್ಹ ಪ್ರಗತಿಯನ್ನು ಸಾಧಿಸಿದರು. ದೆಹಲಿಯ ಕಬ್ಬಿಣದ ಕಂಬವು ಭಾರತೀಯ ಲೋಹಶಾಸ್ತ್ರದ ಶ್ರೇಷ್ಠತೆಯನ್ನು ಸಂಕೇತಿಸುತ್ತದೆ ಎಂದರು. ಸ್ವಾತಂತ್ರ್ಯದ ನಂತರ, ಭಾರತವು ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಗಮನಾರ್ಹ ಪ್ರಗತಿಯನ್ನು ಸಾಧಿಸಿದೆ. ಡಾ. ಹೋಮಿ ಭಾಭಾ ಪರಮಾಣು ಶಕ್ತಿ ಕಾರ್ಯಕ್ರಮವನ್ನು ಪ್ರಾರಂಭಿಸಿದರು, ಆದರೆ ಡಾ. ವಿಕ್ರಮ್ ಸಾರಾಭಾಯ್ ಬಾಹ್ಯಾಕಾಶ ಸಂಶೋಧನೆಗೆ ಅಡಿಪಾಯ ಹಾಕಿದರು. ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯು ಚಂದ್ರಯಾನ ಮತ್ತು ಮಂಗಳಯಾನದಂತಹ ಯಶಸ್ಸಿನೊಂದಿಗೆ ಭಾರತದ ಜಾಗತಿಕ ಪ್ರತಿಷ್ಠೆಯನ್ನು ಹೆಚ್ಚಿಸಿದೆ.

# ಕರಾಮಾನಿಮಂ:ಅ.15 ರಂದು ಚಿತ್ರಕಲೆ ಹಾಗೂ ನಿಬಂಧ ಸ್ಪರ್ಧೆ

ಬೀದರ, ಅ.09 : ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಸ್ಥಾಪನೆಯಾಗಿ 50 ವರ್ಷ ಪೂರೈಸಿದ ಹಿನ್ನಲೆಯಲ್ಲಿ ಸುವರ್ಣ ಮಹೋತ್ಸವ ಆಚರಣೆ ಅಂಗವಾಗಿ ಜಿಲ್ಲಾಡಳಿತ ಹಾಗೂ ಪ್ರಾದೇಶಿಕ ಕಛೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಜಿಲ್ಲಾ ಮಟ್ಟದ ಕಾರ್ಯಕ್ರಮವನ್ನು ಬೀದರ ನಗರದಲ್ಲಿ ಆಯೋಜಿಸಲಾಗುತ್ತಿದೆ.

ಈ ಪ್ರಯುಕ್ತ ದಿನಾಂಕ: 15-10-2025 ರಂದು ಬೆಳಿಗ್ಗೆ 11 ಗಂಟೆಗೆ ಅಗಸ್ತ್ಯ ಫೌಂಡೇಶನ್ ಕೋರ್ ವಿಜ್ಞಾನ ಚಟುವಟಿಕೆ ಕೇಂದ್ರ ಗಾದಗಿ ರಸ್ತೆ ಬೀದರದಲ್ಲಿ ಜಿಲ್ಲೆಯ ಪ್ರೌಢ ಶಾಲೆ ಮಕ್ಕಳಿಗೆ ಚಿತ್ರಕಲೆ ಹಾಗೂ ನಿಬಂಧ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಸ್ಪರ್ಧೆಯಲ್ಲಿ ವಿಜೇತರಾದ ಮಕ್ಕಳಿಗೆ ದಿನಾಂಕ: 18-10-2025 ರಂದು ಜಿಲ್ಲಾ ನೆಹರು ಕ್ರೀಡಾಂಗಣದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರಧಾನ ಮಾಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9880020370 ಗೆ ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರ ಅಧಿಕಾರಿ (ಪ್ರ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯಾದಗಿರಿಗೆ ರಾಜ್ಯ ಮಾಹಿತಿ ಆಯೋಗ ಆಯುಕ್ತರ ಭೇಟಿ

ಯಾದಗಿರಿ:ಅ:9: ರಾಜ್ಯ ಮಾಹಿತಿ ಆಯೋಗ ಆಯುಕ್ತರಾದ ಶ್ರೀ ಬದ್ರುದ್ದೀನ್ ಕೆ.ಅವರು ಶುಕ್ರವಾರ ಅಕ್ಟೋಬರ್ 10 ರಂದು ಯಾದಗಿರಿಗೆ ಆಗಮಿಸಿ ಈ ಕೆಳಕಂಡ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಅಂದು ಬೆಳಿಗ್ಗೆ 10 ಗಂಟೆಗೆ ಅವರು ಯಾದಗಿರಿ ಪ್ರವಾಸಿ ಮಂದಿರಕ್ಕೆ ಆಗಮಿಸುವರು.ನಂತರ ಬೆಳಿಗ್ಗೆ 10.30 ರಿಂದ 12 ರವರೆಗೆ ಜಿಲ್ಲಾಡಳಿತ ಭವನ ಆಡಿಟೋರಿಯಂ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಜಿಲ್ಲೆಯ ವಿವಿಧ ಇಲಾಖೆಗಳ ಸಾರ್ವಜನಿಕ ಮಾಹಿತಿ ಅಧಿಕಾರಿಗಳೊಂದಿಗೆ ಮಾಹಿತಿ ಹಕ್ಕು ಕಾಯ್ದೆ ಕುರಿತು ಕಾರ್ಯಾಗಾರ ಹಾಗೂ ಸಂವಾದ ನಡೆಸುವರು. ಅಂದು ಮಧ್ಯಾಹ್ನ 12 ರಿಂದ 12.30 ಗಂಟೆಯವರೆಗೆ ಜಿಲ್ಲಾಡಳಿತ ಭವನ ಆಡಿಟೋರಿಯಂ ಸಭಾಂಗಣದಲ್ಲಿ ಸಾರ್ವಜನಿಕರು ಹಾಗೂ ಮಾಧ್ಯಮ ಪ್ರತಿನಿಧಿಗಳೊಂದಿಗೆ ಸಂವಾದ ಹಾಗೂ ಚರ್ಚೆ ನಡೆಸುವರು. ಮಧ್ಯಾಹ್ನ 3-30 ಕ್ಕೆ ಕಲ್ಬುರ್ಗಿಗೆ ಪ್ರಯಾಣ ಬೆಳೆಸುವರು.

## ಎಲ್ಲಾ ಸರ್ಕಾರಿ ಕಛೇರಿ, ಅಧೀನ ಕಛೇರಿ ಮುಂಭಾಗದಲ್ಲಿ ಫಲಕ ಅಳವಡಿಸಲು ಸೂಚನೆ

ಯಾದಗಿರಿ : ಅ 09 : ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011 ಮತ್ತು (ತಿದ್ದುಪಡಿ) ಅಧಿನಿಯಮ 2014ರ ಅನುಸಾರ ಸಕಾಲ ಅರ್ಜಿ ವಿಳಂಭವಾದಲ್ಲಿ ಪರಿಹಾರ ವೆಚ್ಚ ಹಾಗೂ ಸೇವೆ ಪಡೆಯಲು ನಾಗರಿಕರು ಅಪೀಲು ದಾಖಲಿಸುವ ಕುರಿತು ನಾಗರಿಕರಿಗೆ ಜಾಗೃತಿ ಮೂಡಿಸುವ ಕಾರ್ಯಕ್ರಮವನ್ನು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದೆ ಎಂದು ಯಾದಗಿರಿ ಅಪರ ಜಿಲ್ಲಾಧಿಕಾರಿ ಶ್ರೀ ರಮೇಶ ಕೋಲಾರ ಅವರು ತಿಳಿಸಿದ್ದಾರೆ. ಬೆಂಗಳೂರು ಜನನ ಮರಣಗಳ ಮುಖ್ಯ ನೋಂದಣಾಧಿಕಾರಿಗಳು ಹಾಗೂ ಅಪರ ನಿರ್ದೇಶನಕರು ಅವರ ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011 ಮತ್ತು (ತಿದ್ದುಪಡಿ) ಅಧಿನಿಯಮ 2014ರ ಅನುಸಾರ ಸಕಾಲ ಅರ್ಜಿ ವಿಳಂಭವಾದಲ್ಲಿ ಪರಿಹಾರ ವೆಚ್ಚ ಹಾಗೂ ಸೇವೆ ಪಡೆಯಲು ನಾಗರಿಕರು ಅಪೀಲು ದಾಖಲಿಸುವ ಕುರಿತು ನಾಗರಿಕರಿಗೆ ಜಾಗೃತಿ ಮೂಡಿಸುವ ಸಂಬಂಧ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸರ್ಕಾರದ ಪತ್ರದಲ್ಲಿ ನಿರ್ದೇಶನ ನೀಡಲಾಗಿರುತ್ತದೆ. ಈ ಮಾಹಿತಿಯನ್ನು ಪ್ರಮಾಣ ಫಲಕ ಅನ್ನು ಲಗತ್ತಿಸಬೇಕು, ಎಲ್ಲಾ ಜನನ ಮರಣ ನೊಂದಣಿ ಘಟಕಗಳಲ್ಲಿ ಪ್ರಚುರಪಡಿಸುವ ಸಂಬಂಧ ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕು. ಸಕಾಲ ಮಿಷನ್ ವತಿಯಿಂದ ತಯಾರಿಸಲಾಗಿರುವ ಟೆಂಪ್ಲೇಟ್ ಅನ್ನು ಜಿಲ್ಲೆಗಳಲ್ಲಿ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಹಾಗೂ ಅಧೀನ ಕಛೇರಿಗಳ ಮುಂಭಾಗದಲ್ಲಿನ ಫಲಕಗಳಲ್ಲಿ ಅಳವಡಿಸಲು ಕೈಗೊಂಡಿರುವ ಕ್ರಮದ ಕುರಿತು ಅನುಪಾಲನಾ ವರದಿಯನ್ನು ಮುಂದಿನ ಕ್ರಮಕ್ಕಾಗಿ ಸಕಾಲ ಮಿಷನ್‌ಗೆ ಕಳುಹಿಸಿಕೊಡುವಂತೆ ನಿರ್ದೇಶಿಸಿದೆ. ಈ ಅಂಶಗಳ ಕುರಿತು ನಿಯಮಾನುಸಾರ ಸಕಾಲ ಮಿಷನ್ ವತಿಯಿಂದ ತಯಾರಿಸಲಾಗಿರುವ ಟೆಂಪ್ಲೇಟ್ ಅನ್ನು ಜಿಲ್ಲೆಗಳಲ್ಲಿ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಹಾಗೂ ಅಧೀನ ಕಛೇರಿಗಳಲ್ಲಿ ಮುಂಭಾಗದಲ್ಲಿನ ಫಲಕಗಳಲ್ಲಿ ಅಳವಡಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಷ್ಟಲಿಂಗ ಪೂಜೆಯಿಂದ ಏಕಾಗ್ರತೆ ವೃದ್ಧಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.9:ಪ್ರತಿನಿತ್ಯ ಇಷ್ಟಲಿಂಗ ಪೂಜೆ ಮಾಡಿಕೊಳ್ಳುವುದರಿಂದ

ಏಕಾಗ್ರತೆ ವೃದ್ಧಿಯಾಗಿ ಮನಸ್ಸಿನ ಚಂಚಲತೆ ದೂರಾಗುತ್ತದೆ ಎಂದು ಲಿಂಗಾಯತ ಮಹಾಮಠ ಗೋಟಾ9 ಮತ್ತು ಬಸವಗಿರಿಯ ಪ್ರಭುದೇವ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಹಲಸಿ (ಎಲ್) ಗ್ರಾಮದಲ್ಲಿ ನಡೆದ ಇಷ್ಟಲಿಂಗ ದೀಕ್ಷೆ, ವಚನಾಭಿಷೇಕ, ಯೋಗಾಂಗ ತ್ರಿವಿಧಿ ಪಾರಾಯಣ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಇಷ್ಟಲಿಂಗ ಪೂಜೆಯನ್ನು ಮಾಡಿಕೊಳ್ಳುವುದು ಕೇವಲ ಲಿಂಗಾಯತರಿಗಷ್ಟೇ ಸೀಮಿತವಾಗಿಲ್ಲ. ಇದನ್ನು ಎಲ್ಲರೂ ಮಾಡಿಕೊಳ್ಳಹುದು. ಇಷ್ಟಲಿಂಗ ಪೂಜೆ ಮಾಡಿ ಕೊಳ್ಳುವುದರ ಹಿಂದೆ ಅನೇಕ ವೈಜ್ಞಾನಿಕ ಕಾರಣಗಳಿವೆ ಮತ್ತು ಪ್ರಯೋಜನೆಗಳು ಇವೆ ಎಂದು ತಿಳಿಸಿದರು.

ಇಷ್ಟಲಿಂಗ ಪೂಜೆಯಿಂದ ಆತ್ಮಶಾಂತಿ, ಮಾನಸಿಕ ನೆಮ್ಮದಿ ಸಿಗುತ್ತದೆ. ಇದರಿಂದ ಮನಸ್ಸು ಪರಿವರ್ತನೆ ಆಗುವುದರ ಜತೆಗೆ ಹೊಸ ಚೈತನ್ಯ ಸಿಗುತ್ತದೆ. ದಿನವಿಡಿ ಉತ್ಸಾಹದಿಂದ ಇರಲು ಸಾಧ್ಯ ಎಂದು ಹೇಳಿದರು. ಗ್ರಾಮದ ಪ್ರಮುಖರು ಸೇರಿದಂತೆ ಇತರರು ಇದ್ದರು.

# ಸಿಜೆಐ ಮೇಲೆ ಶೂ ಎಸೆತ: ಆರೋಪಿಗೆ ಕಠಿಣ ಶಿಕ್ಷೆಗೆ ಆಗ್ರಹ




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.9: ಸುಪ್ರೀಮ್ ಕೋರ್ಟ್ ನ್ಯಾಯಮೂರ್ತಿ ಬಿ.ಆರ್.ಗವಾಯಿ ಮೇಲೆ ಶೂ ಎಸೆತ ಪ್ರಕರಣ ಖಂಡಿಸಿ

ಶೂ ಎಸೆದ ಆರೋಪಿಗೆ ಕಠಿಣ ಶಿಕ್ಷೆಗೊಳಪಡಿಸಲು ಆಗ್ರಹಿಸಿ ವಿವಿಧ ದಲಿತ ಪರ ಸಂಘಟನೆಯವರು ಪ್ರತಿಭಟನೆ ನಡೆಸಿ ರಾಷ್ಟ್ರಪತಿಗಳಿಗೆ ಬರೆದ ಮನವಿ ಪತ್ರ ದಲಿತ ಮುಖಂಡ ಪ್ರಶಾಂತ ಕೋಟಗೆರಾ ನೇತೃತ್ವದಲ್ಲಿ ತಹಸೀಲ್ದಾರಿಗೆ ಸಲ್ಲಿಸಿದರು.

ಪಟ್ಟಣದ ಅಂಬೇಡ್ಕರ ವೃತ್ತದಲ್ಲಿ ಮುಂಜಾನೆ ವಿವಿಧ ದಲಿತ ಪರ ಸಂಘಟನೆಯವರು ಸೇರಿ, ಅಲ್ಲಿಂದ ಪ್ರತಿಭಟನೆ ರ‍್ಯಾಲಿ ಆರಂಭಿಸಿ ಮಹಾತ್ಮಾಗಾಂಧಿ ವೃತ್ತ, ಬಸವೇಶ್ವರ ವೃತ್ತ ಮೂಲಕ ತಹಸೀಲ ಕಛೇರಿಗೆ ತಲುಪಿದರು.ರ‍್ಯಾಲಿಯುದ್ದಕ್ಕೂ ಶೂ ಎಸೆದ ಆರೋಪಿ ವಕೀಲ್ ರಾಕೇಶ ಕಿಶೋರ ಧಿಕ್ಕಾರ,

ಧಿಕ್ಕಾರ ಎಂದು ಕೂಗೂತ್ತಾ, ಅವನು ಮಾಡಿದ ಹೇಯ ಕೃತ್ಯ ಭಾರತದ ನ್ಯಾಯಾಂಗ

' ವ್ಯವಸ್ಥೆಯಲ್ಲಿ ಒಂದು ಅಕ್ಷಮ್ಯ ಅಪರಾಧವಾಗಿದೆ. ದೇಶದ ಸಂವಿಧಾನಕ್ಕೆ ಮಾಡಿದ ಅವಮಾನವಾಗಿದೆ.ಕಾರಣ ಹೀನ ಮನಸ್ಸಿನ ಆರೋಪಿಯನ್ನು ಕೂಡಲೇ ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಪ್ರಶಾಂತ ಕೋಟಗೆರಾ ತಿಳಿಸಿದರು.

ಈ ಸಂದರ್ಭದಲ್ಲಿ ಡಿಎಸ್‌ಎಸ್ ಸಂಚಾಲಕ ಶಿವಕುಮಾರ ಮೇತ್ರೆ, ಮುಖಂಡರಾದ ವಿಶ್ವನಾಥ ಮೋರೆ, ಅಶೋಕ ಗಾಯಕವಾಡ, ಮಲ್ಲಿಕಾರ್ಜುನ ನೆಳಗೆ, ರೋಹನ ಶಿಂದೆ, ಗಗನ ಫುಲೆ, ಪ್ರದೀಪ ಮೊರೆ,

ಸಿದ್ಧಾರ್ಥ ಪ್ಯಾಗೆ, ರಾಜಕುಮಾರ ಮೋರೆ, ವಿಲಾಸ ಅರ್ಜುನ, ರಾಜಕುಮಾರ ಭಾಟಸಾಂಗವೆ, ಉತ್ತಮಶಿಂದೆ, ರಾಜಕುಮಾರ ಭಟಾರೆ, ಫಾಳೆಪ್ಪ ಮೈಲಾರೆ, ಸುರೇಶ ಮೋರೆ ಸೇರಿದಂತೆ ಅನೇಕರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಗ್ಯಾರಂಟಿ ಅನುಷ್ಠಾನ ಸಮಿತಿ ವತಿಯಿಂದ ಜಾಗೃತಿ ಅಭಿಯಾನ



ಬೀದರ. ಅ. 09 : ರಾಜ್ಯ ಸರ್ಕಾರದ ಜನಪರ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣ ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚ ಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು ಬೀದರ ದಕ್ಷಿಣ ಕ್ಷೇತ್ರದ ಕಾಡವಾದ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಮಲಿಕ್ ಮರ್ಜಾಪೂರ್ ಗ್ರಾಮದಲ್ಲಿ ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ,

ಗೃಹ ಲಕ್ಷ್ಮಿ ಯೋಜನೆ, ಅನ್ನಭಾಗ್ಯ ಯೋಜನೆ, ಶಕ್ತಿ ಯೋಜನೆ, ಗೃಹ ಜ್ಯೋತಿ,

ಯುವನಿಧಿ : ಅನೀತಾ ರಾಣಿ ಎಂಬ ವಿದ್ಯಾರ್ಥಿನಿಗೆ ಯುವನಿಧಿ ಹಣದಿಂದ ಬಹಳಷ್ಟು ಅನುಕೂಲ ವಾಗುತ್ತಿದೆ, ಎಂದು ತಿಳಿಸಿರುತ್ತಾರೆ, ಮತ್ತು

ಯೋಜನಗಳ ಮಹತ್ವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು.

ಈ ಎಲ್ಲ ಪ್ರಯತ್ನಗಳ ಫಲವಾಗಿ, ಹಲವು ವಂಚಿತ ಫಲಾನುಭವಿಗಳು ಗ್ಯಾರಂಟಿ ಯೋಜನೆಗಳ ಲಾಭ ಪಡೆಯಲು ಸಾಧ್ಯವಾಗಿದೆ. ಸಮಿತಿಯ ಈ ಕಾರ್ಯಕ್ಕೆ ಸ್ಥಳೀಯ ಅಧಿಕಾರಿಗಳು ಮತ್ತು ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದ್ದು, ಈ ಕಾರ್ಯಗಳು ಇತರ ತಾಲ್ಲೂಕುಗಳಿಗೂ ಮಾದರಿಯಾಗಿವೆ.

ಬೀದರ್ ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿಯ ಈ ನಿರಂತರ ಕಾರ್ಯವು, ಸರ್ಕಾರಿ ಯೋಜನೆಗಳು ಕೇವಲ ಘೋಷಣೆಗಳಿಗೆ ಸೀಮಿತವಾಗದೆ, ನಿಜವಾಗಿಯೂ ಅರ್ಹರಿಗೆ ತಲುಪಬೇಕು ಎಂಬ ಆಶಯವನ್ನು ಸಾಕಾರಗೊಳಿಸುತ್ತಿದೆ.

ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಉದಯಕುಮಾರ ಚಟನಳ್ಳಿ, ಶಿವಕುಮಾರ ಕುತ್ತಾಬಬಾದ್, ಸೇವಾದಳ್ ಅಧ್ಯಕ್ಷ ಮೋಹಿನ್

ಪಠಾಣ್, ಗ್ರಾಮ ಪಂಚಾಯತ್ ಸದಸ್ಯರಾದ ರವಿ ರಾಜಗೀರಾ, ಬಂಧೇಅಲಿ, ಮುಖಂಡರಾದ

ದಶರಥ ಹಲಗೆ, ಪವನ್ ಬಾಪೂರೆ ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.

# ಹೊಸ ಜೀವನ ನಡೆಸಲು ಶಿಬಿರ ಸಹಕಾರಿ: ದಿನೇಶ ಪೂಜಾರಿ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.9: ವ್ಯಸನಗಳಿಗೆ ದಾಸರಾದಂತಹವರು ಹೊಸ ಜೀವನ ನಡೆಸಲು ಮಧ್ಯವರ್ಜನ ಶಿಬಿರ ಸಹಕಾರಿಯಾಗಿದೆ ಎಂದು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಪ್ರಾದೇಶಿಕ ನಿರ್ದೇಶಕ ದಿನೇಶ ಪೂಜಾರಿ ಹೇಳಿದರು.



ಪಟ್ಟಣದ ಕುಂಬಾರ ಗುಂಡಯ್ಯಾ ಕಲ್ಯಾಣ ಮಂಟಪದಲ್ಲಿ ಗುರುವಾರ ಆಯೋಜಿಸಿದ್ದ ನವಜೀವನ ಸಮಿತಿ ರಚನೆ ಮತ್ತು ಆತ್ಮಾವಲೋಕನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಶಬಿರಕ್ಕೆ ಆಗಮಿಸಿ ಹೊಸ ಜೀವನ ನಡೆಸಲು ಬಂದಿರುವ ಎಲ್ಲಾ ಶಿಬಿರಾರ್ಥಿಗಳು ಉತ್ತಮ ಜೀವನ ನಡೆಸಲು ಮುನ್ನುಡಿ ಬರೆಯಬೇಕು. ಕುಡಿತ ಎನ್ನುವುದು ಮಾರಕ ರೋಗವಾಗಿದೆ. ಮಾಡಿದ ತಪ್ಪನ್ನು ತಿದ್ದುಕೊಳ್ಳುವುದಕ್ಕೆ ಶಿಬಿರಾಧಿಕಾರಿಗಳು ನೀಡಿದ ಮಾರ್ಗದರ್ಶನ ನಿಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವಿರೆಂದು ನಂಬಿರುವೆ. ಮುಂದೆ ನೀವು ನಿಮ್ಮ ಮನೆಗೆ ಹೋದ ನೊಂತರ ಕುಡಿತ ಬಿಡುತ್ತೇನೆ ಎನ್ನುವ ಗಟ್ಟಿ ನಿರ್ಧಾರ ಕೈಗೊಳ್ಳಬೇಕು ಎಂದು ಹೇಳಿದರು. 1995ನೇ ಮಧ್ಯವರ್ಜನ ಶಿಬಿರದ ವ್ಯವಸ್ಥಾಪನ ಸಮಿತಿ ಅಧ್ಯಕ್ಷ ಸುಬಾಷ ಹುಲಸೂರೆ ಮಾತನಾಡಿ, ನಿಮಗೆ ಯಾವುದೇ ಸಮಸ್ಯೆ ಬಂದರು ಅದಕ್ಕೆ ಪರಿಹಾರ ಕಂಡುಕೊಳ್ಳಿ, ಹೊರತು ಮಧ್ಯಪಾನ ಮಾಡುವುದರಿಂದ ಯಾವುದೇ ಸಮಸ್ಯ ಪರಿಹರಿಸಲು ಸಾಧ್ಯವಿಲ್ಲ ಎನ್ನುವುದು ಅರಿತು ಜೀವನ ಸಾಗಿಸಿ ಎಂದು ಹೇಳಿದರು. ಕೇಂದ್ರ ಕಚೇರಿ ಶುದ್ಧಗಂಗಾ ಯೋಜನಾಧಿಕಾರಿ ಫಕೀರಪ್ಪ ಬೆಲ್ಲಾಮುದ್ದಿ ಮಾತನಾಡಿ, ನಿಮ್ಮ ಪುಣ್ಯದ ಫಲದಿಂದಲೇ ಇಂತಹ ಶಿಬಿರದಲ್ಲಿ ಪಾಲ್ಗೊಳ್ಳಲು ನಿಮಗೆ ಅವಕಾಶ ದೊರೆತಿದೆ. ಹೀಗಾಗಿ ನೀವೆಲ್ಲರೂ ಈ ಶಿಬಿರದ ಸಂಪೂರ್ಣ ಲಾಭ ಪಡೆದುಕೊಳ್ಳಬೇಕು ಎಂದು ಹೇಳಿದರು. ಶಿಬಿರಾಧಿಕಾರಿ ಕುಮಾರ.ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ತಾಲೂಕು ಯೋಜನಾಧಿಕಾರಿ ಸಂತೋಷ ನಾಯಕ, ಪ್ರಮುಖರಾದ ಶಿವಾನಂದ ಲಕಾಟಿ, ರಾಜು.ಪಿ, ಸೇವಾ ಪ್ರತಿನಿಧಿ ಪ್ರೆಸಿಲ್ಲ ಡಿಸೋಜ, ನಿರಂಜಪ್ಪ ಪಾತ್ರೆ, ಸಂತೊಷ ಬಿಜಿಪಾಟೀಲ, ಪಿ.ಕೆ.ಪಲ್ಲವಿ, ಶ್ರೀಕಾಂತ ಸೇಗುಣಸಿ, ವೀರಭದ್ರ ಹಲಬುರ್ಗೆ, ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಜಯರಾಜ ದಾಬಶೆಟ್ಟಿ ಉಪಸ್ಥಿತರಿದ್ದರು. ವೀರೇಶ ಸ್ವಾಗತಿಸಿದರು. ಸಂತೋಷಕುಮಾರ ನಿರೂಪಿಸಿದರು. ಶಿವಾನಂದ ವಂದಿಸಿದರು.

# ಪಶು ಉತ್ಪಾದನೆಯಲ್ಲಿ ನವೀನ ತಂತ್ರಜ್ಞಾನಗಳ ಕುರಿತ ರಾಷ್ಟ್ರೀಯ ಸಮ್ಮೇಳನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 09 : ಕರ್ನಾಟಕ ಪಶುವೈದ್ಯ, ಪ್ರಾಣಿ ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ್ ಹಾಗೂ ಪಶುವೈದ್ಯಕೀಯ ಶರೀರ ಜೀವಶಾಸ್ತ್ರ ಮತ್ತು ಜೈವರಸಾಯನಶಾಸ್ತ್ರ ವಿಭಾಗ ಇವರ ಆಶ್ರಯದಲ್ಲಿ "Next-Generation Physiological Approaches for Climate-AdaptiveLivestockProduction" (ಹವಾಮಾನಕ್ಕೆ ಹೊಂದಿಕೊಳ್ಳುವ ಪಶು ಉತ್ಪಾದನೆಗಾಗಿ ಮುಂದಿನ ಪೀಳಿಗೆಯ ಶರೀರ ಕ್ರಿಯಾಶಾಸ್ತ್ರದ ನವೀನ ವಿಧಾನಗಳು) ಎಂಬ ಶೀರ್ಷಿಕೆಯಡಿ 5ನೇ ವಾರ್ಷಿಕ ಂಕಂ-ಅಔಓ-2025 ರಾಷ್ಟ್ರೀಯ ಸಮ್ಮೇಳನ ಮತ್ತು ಸಿಂಪೋಸಿಯಂ ಉದ್ಘಾಟನಾ ಕಾರ್ಯಕ್ರಮವು 09 ಅಕ್ಟೋಬರ್ 2025 ರಂದು ವಿಶ್ವವಿದ್ಯಾಲಯ ಸಭಾಂಗಣದಲ್ಲಿ ವಿಜೃಂಭಣೆಯಿಂದ ಜರುಗಿತು. ಕಾರ್ಯಕ್ರಮವನ್ನು ವಿಶ್ವವಿದ್ಯಾಲಯದ ಮಾನ್ಯ ಕುಲಪತಿ ಪ್ರೊ. ಕೆ.ಸಿ. ವೀರಣ್ಣ ಅವರು ಉದ್ಘಾಟಿಸಿ ಮಾತನಾಡಿದ ಅವರು ವಿಶ್ವದ ಮಾನವ ಜನಸಂಖ್ಯೆ 2050 ರ ವೇಳೆಗೆ 7.2 ಬಿಲಿಯನ್‌ನಿಂದ 9.6 ಬಿಲಿಯನ್ ವರೆಗೆ ಏರಿಕೆಯಾಗಲಿದೆ ಎಂದು (ಗಓ, 2013) ಉಲ್ಲೇಖಿಸಿದರು. ಈ ಸಮಯದಲ್ಲಿ ಆಹಾರ ಮತ್ತು ಕೃಷಿ ಉತ್ಪನ್ನಗಳ ಬೇಡಿಕೆ 70 ಶೇಕಡಾ ಮಟ್ಟಕ್ಕೆ ಏರಲಿದ್ದು, ಈ ಹಿನ್ನೆಲೆಯಲ್ಲಿ ಪಶುಸಂಪನ್ಮೂಲ ಕ್ಷೇತ್ರವು ದೇಶದ ಆಹಾರ ಭದ್ರತೆ ಮತ್ತು ಆರ್ಥಿಕತೆಯಲ್ಲಿ ನಿರ್ಣಾಯಕ ಪಾತ್ರವಹಿಸಲಿದೆಯೆಂದು ಹೇಳಿದರು. ಅವರು ಹವಾಮಾನ ಬದಲಾವಣೆ, ನೀರು ಭೂಮಿ ಮತ್ತು ಉತ್ಪಾದನಾ ಒತ್ತಡದಿಂದ ಪಶುಸಂಪನ್ಮೂಲ ಕ್ಷೇತ್ರವು ಸವಾಲಿನ ಹಾದಿಯಲ್ಲಿದೆ ಎಂದರು. ಇಂತಹ ಪರಿಸ್ಥಿತಿಯಲ್ಲಿ ಸಂಶೋಧನೆ, ವಿಜ್ಞಾನಾಧಾರಿತ ನಿರ್ವಹಣಾ ಕ್ರಮಗಳು ಮತ್ತು ಸ್ಥಳೀಯ ಸಂಪನ್ಮೂಲಗಳ ಪರಿಣಾಮಕಾರಿ ಬಳಕೆ ಮೂಲಕ ಹವಾಮಾನ ಬದಲಾವಣೆಗಳಿಗೆ ಹೊಂದಿಕೊಳ್ಳುವ ಪಶು ಉತ್ಪಾದನೆ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುವ ಅಗತ್ಯವಿದೆ ಎಂದು ನುಡಿದರು. ಅಲ್ಲದೇ ಸ್ಥಳೀಯ ಹವಾಮಾನಕ್ಕೆ ಹೊಂದಿಕೊಂಡ ಸ್ಥಳೀಯ ಪಶು ಜಾತಿಗಳ ಸಂರಕ್ಷಣೆ ಮತ್ತು ಉತ್ತೇಜನ, ರೈತರಿಗೆ ಹವಾಮಾನ ಸ್ನೇಹಿ ಪಶು ನಿರ್ವಹಣೆಯ ತರಬೇತಿ ಮತ್ತು ಜಾಗೃತಿ ಮತ್ತು ಓಖಅಖಂ ಅಂತಹ

ಮುಂತಾದ ರಾಷ್ಟ್ರೀಯ ಯೋಜನೆಗಳೊಂದಿಗೆ ವಿಶ್ವವಿದ್ಯಾಲಯದ ಕಾರ್ಯಗಳನ್ನು ಸಮ್ಮಿಲನಗೊಳಿಸುವ ಪ್ರಯತ್ನ ಮಾಡಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಶ್ರೀ ಬಸವರಾಜ್ ಪಿ. ಭತಮೂರ್ಗೆ, ಮಾನ್ಯ ಆಡಳಿತ ಮಂಡಳಿ ಸದಸ್ಯರು, ಕಪಪಮೀವಿವಿ, ಬೀದರ ಡಾ. ಗ್ಯಾನೇಂದ್ರ ಸಿಂಗ್, ಅಧ್ಯಕ್ಷರು, ಂಕಂ, ಡಾ. ಪಿ.ಟಿ. ರಾಮೇಶ್, ಕುಲಸಚಿವರು, ಕಪಪಮೀವಿವಿ, ಬೀದರ ಡಾ. ಜಿ. ತರು ಶರ್ಮಾ, ಸಂಸ್ಥಾಪಕ ಅಧ್ಯಕ್ಷರು, APA, ಶ್ರೀ ವಿಷ್ಣುವರ್ಧನ್ ರಾಂಪುರ, DDM-NABARD, ಬೀದರ್ ಮತ್ತು ಡಾ. ಎಸ್.ಜಿ. ಯಲಗೋಡ, ಅಧ್ಯಕ್ಷರು, ಕರ್ನಾಟಕ ಪಶುವೈದ್ಯರ ಸಂಘ ಉಪಸ್ಥಿತರಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ. ಎಂ.ಕೆ. ತಾಂಡಳೆ, ಡೀನ್, ಪಶುವೈದ್ಯಕೀಯ ಮಹಾವಿದ್ಯಾಲಯ, ಬೀದರ್ ಅವರು ವಹಿಸಿದ್ದರು. ಈ ಸಮ್ಮೇಳನವು ಹವಾಮಾನ ಬದಲಾವಣೆ ಎದುರಿಸಲು ಪಶು ಉತ್ಪಾದನಾ ಕ್ಷೇತ್ರದಲ್ಲಿ ತಂತ್ರಜ್ಞಾನ ಮತ್ತು ಜ್ಞಾನ ವಿನಿಮಯಕ್ಕೆ ವೇದಿಕೆಯಾಗಿದೆ ಎಂದು

ಪ್ರಾಸ್ತಾವಿಕ ನುಡಿಯಲ್ಲಿ ಸಮ್ಮೇಳನದ ಆಯೋಜನ ಕಾರ್ಯದರ್ಶಿ\ ಯಾಗಿರುವ ಡಾ. ಶ್ರೀಕಾಂತ್ ಕುಲಕರ್ಣಿ ಪ್ರಾಸ್ತಾವಿಕವಾಗಿ ತಿಳಿಸಿದರು.

### ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರ ಚುನಾವಣೆ:

# ಅರ್ಹ ಮತದಾರರು ಹೆಸರು ನೋಂದಾಯಿಸಿಕೊಳ್ಳಿ: ಬದೋಲೆ



ಮಲ್ಲಮ್ಮ ನುಡಿ ವಾರ್ತೆ

ಬೀದರ,ಅ.09:ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಗೆ ಮತದಾರರ ಪಟ್ಟಿಯಲ್ಲಿ ಕಡ್ಡಾಯವಾಗಿ ಅರ್ಹ ಮತದಾರರು ಹೆಸರು ನೋಂದಾಯಿಸಿಕೊಳ್ಳಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ ತಿಳಿಸಿದರು.

ಅವರು ಗುರುವಾರ ಜಿಲ್ಲಾ ಪಂಚಾಯತ ಕಚೇರಿ ಸಭಾಂಗಣದಲ್ಲಿ 2026ನೇ ಸಾಲಿನಲ್ಲಿ ಜರುಗಲಿರುವ ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಗಾಗಿ ಅರ್ಹ ಮತದಾರರನ್ನು ಮತದಾರರ ಪಟ್ಟಿಗೆ ಹೆಸರು ನೋಂದಾಯಿಸಿಕೊಳ್ಳುವ ಕುರಿತು ಕರೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಚುನಾವಣೆಯು ಪಾರದರ್ಶಕವಾಗಿ, ನ್ಯಾಯಸಮ್ಮತವಾಗಿ, ಯಾವುದೇ ಅಹಿತಕರ ಘಟನೆಗಳು ಶಾಂತಿಯುತವಾಗಿ ಮುಕ್ತಾಯಗೊಳ್ಳಬೇಕಾದಲ್ಲಿ ಪ್ರಪ್ರಥಮವಾಗಿ ದೋಷರಹಿತವಾದಂತಹ ಮತದಾರರ ಪಟ್ಟಿ ಸಿದ್ಧಪಡಿಸಿಕೊಳ್ಳುವು ಅವಶ್ಯಕವಾಗಿರುವುದರಿಂದ ಅರ್ಹ ಮತದಾರರನ್ನು ಗುರುತಿಸುವಲ್ಲಿ ಚುನಾವಣಾ ಆಯೋಗವು ವೇಳಾ ಪಟ್ಟಿಯನ್ನು ಪ್ರಚುರಪಡಿಸಿದ್ದು, ಇದರನ್ವಯ ಮತದಾರರ ಪಟ್ಟಿಯಲ್ಲಿ ಹೆಸರನ್ನು ನೋಂದಾಯಿಸಿಲು ನವೆಂಬರ್.6 ಕೊನೆಯ ದಿನಾಂಕವಾಗಿರುತ್ತದೆಂದು ತಿಳಿಸಿದರು. ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಲು ಭಾರತೀಯ ಪ್ರಜೆಯಾಗಿರಬೇಕು, ಮತಕ್ಷೇತ್ರದಲ್ಲಿ ಸಾಮಾನ್ಯ ನಿವಾಸಿಯಾಗಿರಬೇಕು, ದಿನಾಂಕ: 01–11–2025 ಕ್ಕಿಂತ ಮುಂಚಿನ 6 ವರ್ಷಗಳ ಅವಧಿಯಲ್ಲಿ ಕನಿಷ್ಠ 3 ವರ್ಷ ಅವಧಿಗಾಗಿ ಶಿಕ್ಷಣ ಸಂಸ್ಥೆಗಳಲ್ಲಿ ಪ್ರೌಢ ಶಾಲಾ ಹಂತಕ್ಕಿಂತ ಕಡಿಮೆಯಿಲ್ಲದ ಶಿಕ್ಷಕರಾಗಿ ಕಾರ್ಯನಿರ್ವಹಿಸತಕ್ಕದ್ದು, ಅರ್ಹ ಮತದಾರರು ಮತಪಟ್ಟಿಯಲ್ಲಿ ಸೇರ್ಪಡೆಗಾಗಿ ಅರ್ಜಿ ನಮೂನೆ–19 ರಲ್ಲಿ ಸಲ್ಲಿಸಬೇಕಾಗಿದ್ದು, ಅರ್ಜಿಯೊಂದಿಗೆ ಶಿಕ್ಷಣ ಸಂಸ್ಥೆಯ ಮುಖ್ಯಸ್ಥರಿಂದ ಕಾರ್ಯಾವಧಿಯ ಕುರಿತು ದೃಢೀಕರಣವನ್ನು ಅನುಬಂಧ–2 ರಲ್ಲಿ ಸಲ್ಲಿಸತಕ್ಕದ್ದು ಮತ್ತು ಮತದಾರರ ಗುರುತಿನ ಚೀಟಿ, ಆಧಾರ ಕಾರ್ಡ ಮತ್ತು ಮುಂಭಾಗದಿಂದ ಪೂರ್ಣ ಮುಖವು ಕಾಣುವ ಬಿಳಿ ಬಣ್ಣದ ಹಿನ್ನೆಲೆ ಹೊಂದಿರುವ ಸಹಿ ಮಾಡಿದ ಇತ್ತೀಚಿನ ಬಣ್ಣದ ಪಾಸ್‌ಪೋರ್ಟ ಅಳತೆಯ (4.5 ಸೆ.ಮೀ.ಥ3.5 ಸೆ.ಮೀ. ಭಾವಚಿತ್ರ ಅಂಟಿಸಬೇಕೆಂದು ತಿಳಿಸಿದರು. ಎಲ್ಲಾ ಶಿಕ್ಷಣ ಸಂಸ್ಥೆಯ ಮುಖ್ಯಸ್ಥರು ತಮ್ಮ ಸಂಸ್ಥೆಯಲ್ಲಿ ವ್ಯಾಪಕ ಪ್ರಚಾರ ನಡೆಸಿ ಎಲ್ಲಾ ಅರ್ಹ ಮತದಾರರನ್ನು ನೋಂದಾಯಿಸಿಕೊಳ್ಳುವಂತೆ ಕ್ರಮವಹಿಸಬೇಕು. ಆಯಾ ತಾಲ್ಲೂಕಿನ ತಹಸೀಲ್ ಕಛೇರಿಯ ಗ್ರೇಡ್–2 ತಹಸೀಲ್ದಾರರನ್ನು ಗುರುತಿಸಿದ ಅಧಿಕಾರಿಯನ್ನಾಗಿ ನೇಮಿಸಲಾಗಿದ್ದು, ಅವರನ್ನು ಸಂಪರ್ಕಿಸಿ ಅರ್ಜಿ ನಮೂನೆಗಳನ್ನು ಪಡೆದುಕೊಳ್ಳಬೇಕು ಅಥವಾ ಅನ್‌ಲೈನ್‌ದಲ್ಲಿಯೂ ಅರ್ಜಿ ನಮೂನೆಗಳು ಡೌನಲೋಡ್ ಮಾಡಿಕೊಂಡು ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ತಿಳಿಸಿದರು. ಆಯೋಗ ನಿಗದಿಪಡಿಸಿದ ವೇಳಾಪಟ್ಟಿಯನ್ನು ಪ್ರಚುರಪಡಿಸಿ ಅರ್ಹರನ್ನು ನೋಂದಾಯಿಸಿ ಸಕ್ರೀಯ ಚುನಾವಣಾ ವ್ಯವಸ್ಥೆಯಲ್ಲಿ ಪಾಲ್ಗೊಳ್ಳುವ ನಿಟ್ಟಿನಲ್ಲಿ ಜಿಲ್ಲಾ ಮತ್ತು ತಾಲ್ಲೂಕಾ ಮಟ್ಟದಲ್ಲಿ ಸಮಿತಿಗಳನ್ನು ರಚಿಸಲಾಗಿರುತ್ತದೆ. ಮತದಾರರ ನೋಂದಣಿ ಪ್ರಕ್ರಿಯೆಯ ಮೇಲುಸ್ತುವಾರಿಗಾಗಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ

ಪಂಚಾಯತ ಇವರನ್ನು ಮೇಲ್ವಿಚಾರಣಾಧಿಕಾರಿಗಳಾಗಿ ಮತ್ತು ಸಂಬಂಧಪಟ್ಟ ಇಲಾಖೆಗಳ ಉಪನಿರ್ದೇಶಕರು ಶಿಕ್ಷಣ ಇಲಾಖೆ, ಉಪ ನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ, ಜಂಟಿ ನಿರ್ದೇಶಕರು ಕಾಲೇಜು ಶಿಕ್ಷಣ ಇಲಾಖೆ, ವಿಶ್ವವಿದ್ಯಾಲಯದ ಕುಲಸಚಿವರು (ಆಡಳಿತ), ಉಪಕಾರ್ಯದರ್ಶಿಗಳು, ಜಿಲ್ಲಾ ಪಂಚಾಯತ್ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನೊಳಗೊಂಡ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಕ ಮಾಡಲಾಗಿದೆ.

ಎಲ್ಲಾ ಅರ್ಹ ಮತದಾರರು ತಮ್ಮ ಜವಾಬ್ದಾರಿಯನ್ನು ಅರಿತು ಕಡ್ಡಾಯವಾಗಿ ಮತದಾರರ ಪಟ್ಟಿಯಲ್ಲಿ ಹೆಸರನ್ನು ನೋಂದಾಯಿಸಿಕೊಳ್ಳಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಮಾಸ್ಟರ್ ಟ್ರೇನರ್ ಗೌತಮ ಅರಳಿ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಚಂದ್ರಕಾಂತ ಶಹಬಾದಕರ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಮಂಜುನಾಥ ಸುಳ್ಳೊಳ್ಳಿ, ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳು, ಬೀದರ ವಿಶ್ವವಿದ್ಯಾಲಯದ ಅಧಿಕಾರಿಗಳು, ತಾಲ್ಲೂಕ ಪಂಚಾಯತ ಇಓ, ವಿವಿಧ ಕಾಲೇಜಿನ ಪ್ರಾಂಶುಪಾಲರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಜಿಲ್ಲಾ ಚುನಾವಣಾಧಿಕಾರಿಯಾಗಿ ಶಶಿಕಾಂತ ಶೆಂಬೆಳ್ಳಿ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 09 ; ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬೀದರ್ ಜಿಲ್ಲೆಯ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಚುನಾವಣೆಯ 2025–28ರ ಅವಧಿಗಾಗಿನ ಚುನಾವಣಾ ಅಧಿಕಾರಿಯಾಗಿ ಹಿರಿಯ ಪತ್ರಕರ್ತ ಶಶಿಕಾಂತ್ ಶೆಂಬೆಳ್ಳಿ ನೇಮಗೊಂಡಿದ್ದಾರೆ.

ಈ ಕುರಿತು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಮುಖ್ಯ ಚುನಾವಣಾ ಅಧಿಕಾರಿ ಎನ್. ರವಿಕುಮಾರ್ ಅವರು ಹೊರಡಿಸಿರುವ ಆದೇಶ ಪತ್ರದಲ್ಲಿ ತಿಳಿಸಲಾಗಿದೆ.

ಈ ತಿಂಗಳ 13ರಿಂದ ನವೆಂಬರ್ 9ನೇ ತಾರಿಖಿನ ವರೆಗೆ ಚುನಾವಣಾ ಅಧಿಸೂಚನೆ ಜಾರಿ ಇರಲಿದ್ದು, ಶಿಘ್ರದಲ್ಲಿಯೆ ಚುನಾವಣೆ ಪ್ರಕ್ರಿಯೆಗಳು ನಡೆಯುವವು. ಮೌಖಿಕವಾಗಿ ಚರ್ಚಿಸದೆ ಲಿಖಿತ ರೂಪದಲ್ಲಿ ದೂರು ಸಲ್ಲಿಸಿ

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬೀದರ್ ಜಿಲ್ಲೆಯ ಗೌರವಾನ್ವಿತ ಸದಸ್ಯರು ತಮ್ಮ ಏನಾದರೂ ತಕರಾರು ಅರ್ಜಿಗಳಿದ್ದರೆ ಮೌಖಿಕವಾಗಿ ಷರ್ಚೆ ಮಾಡದೇ ನೇರವಾಗಿ ಚುನಾವಣಾ ಅಧಿಕಾರಿಗಳಿಗೆ ಲಿಖಿತ ರೂಪದಲ್ಲಿ ದೂರು ಸಲ್ಲಿಸಬಹುದು. ಚುನಾವಣೆ ಕಚೇರಿ ಶಿಘ್ರದಲ್ಲಿಯೆ ಕಾರ್ಯಾರಂಭ ಮಾಡಲಿದೆ ಎಂದು ಜಿಲ್ಲಾ ಸಂಘ ಪ್ರಕಟಣೆಗೆ ತಿಳಿಸಿದೆ.

ಆ.11ರಂದು ಸರ್ವ ಸದಸ್ಯರ ತುರ್ತು ಸಭೆ: ಈ ತಿಂಗಳ 11ರಂದು ಶನಿವಾರ ಮಧ್ಯಾಹ್ನ 12.30 ಗಂಟೆಗೆ ಜಿಲ್ಲಾ ಪತ್ರಿಕಾ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಗೌರವಾನ್ವಿತ ಎಲ್ಲಾ ಸದಸ್ಯರ ತುರ್ತು ಸಭೆ ಕರೆಯಲಾಗಿದೆ. ಸಂಘದ ಅಧ್ಯಕ್ಷರಾದಿಯಾಗಿ ಎಲ್ಲ ಪದಾಧಿಕಾರಿಗಳು ಹಾಗೂ ಜಿಲ್ಲಾ ಕಾರ್ಯಕಾರಿಣಿ ಸದಸ್ಯರ ಅವಿರೋಧ ಆಯ್ಕೆ ಕುರಿತು ಚರ್ಚಿಸಲಾಗುವುದು.

ಈ ಹಿಂದೆ ಬಹಳಷ್ಟು ಸಾರಿ ಬೀದರ್ ಜಿಲ್ಲೆಯಲ್ಲಿ ಅವಿರೋಧ ಆಯ್ಕೆ ಪ್ರಕ್ರಿಯೆ ನಡೆದಿದ್ದು, ಈ ಸಾರಿಯೂ ಸೌಹಾರ್ದತೆಯಿಂದ ಪದಾಧಿಕಾರಿಗಳು ಹಾಗೂ ಜಿಲ್ಲಾ ಕಾರ್ಯಕಾರಿಣಿ ಸದಸ್ಯರ ಅವಿರೋಧ ಆಯ್ಕೆ ಕುರಿತು ಮುಕ್ತವಾಗಿ ಚರ್ಚಿಸಲಾಗುವುದು. ಆದ ಕಾರಣ ಜಿಲ್ಲೆಯ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಎಲ್ಲ ಗೌರವಾನ್ವಿತ ಸದಸ್ಯರು ಕಡ್ಡಾಯವಾಗಿ ಈ ಸಭೆಗೆ ಹಾಜರಿದ್ದು, ತಮ್ಮ ಸಲಹೆ, ಸೂಚನೆ ನೀಡಬೇಕೆಂದು ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯಮಟ್ಟದ ಸಭೆ 12 ರಂದು



ಬೀದರ. ಅ. 09 : ಅಖಿಲ ಕರ್ನಾಟಕ ಅನುದಾನ ರಹಿತ ಖಾಸಗಿ ಶಿಕ್ಷಣ ಸಂಸ್ಥೆಗಳ ಸಂಘದ ರಾಜ್ಯಮಟ್ಟದ ವಿಶೇಷ ಸಭೆ ಹುಬ್ಬಳ್ಳಿಯ ಸಿದ್ಧಾರೂಢ ಮಠದ ಆವರಣದಲ್ಲಿ ಇರುವ ರೇವಣಸಿದ್ಧೇಶ್ವರ ಶಾಲಾ ಸಭಾ ಮಂಟಪದಲ್ಲಿ ಅ.12 ರಂದು ಬೆಳಿಗ್ಗೆ 11ಕ್ಕೆ ನಡೆಯಲಿದೆ. ಸಂಘದ ರಾಜ್ಯ ಅಧ್ಯಕ್ಷ ರೇವಣಸಿದ್ದಪ್ಪ ಜಲಾದೆ ಅಧ್ಯಕ್ಷತೆ ವಹಿಸಲಿದ್ದಾರೆ. ರಾಜ್ಯ ಸಂಚಾಲಕ ಜೆ.ಸಿ. ಶಿವಪ್ಪ ಮಂಡ್ಯ ಹಾಗೂ ಇತರ ರಾಜ್ಯ ಪದಾಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ. ಸಂಘ ಆಗಸ್ಟ್‌ನಲ್ಲಿ ನಡೆಸಿದ ಹೋರಾಟದ ಪರಿಣಾಮ ರಾಜ್ಯ ಸರ್ಕಾರ ಸಂಘದ ಬೇಡಿಕೆಗಳ ಈಡೇರಿಕೆ ಭರವಸೆ ನೀಡಿತ್ತು. ಬೇಡಿಕೆ ಈಡೇರಿಕೆಗೆ ಸಂಘ ನ. 1 ರ ಗಡುವು ನೀಡಿತ್ತು. ಹೀಗಾಗಿ ಗಡುವಿನೊಳಗೆ ಸರ್ಕಾರ ಬೇಡಿಕೆ ಈಡೇರಿಸದಿದ್ದರೆ ಮುಂದೆ ಕೈಗೊಳ್ಳಬೇಕಾದ ಹೋರಾಟದ ಕುರಿತು ಸಭೆಯಲ್ಲಿ ಚರ್ಚೆ ನಡೆಯಲಿದೆ. 1995 ರಿಂದ 2015 ರ ವರೆಗಿನ ಕನ್ನಡ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸಬೇಕು. ಬಡವರ ಮಕ್ಕಳಿಗೆ ಆಸರೆಯಾದ ಆರ್.ಟಿ.ಇ. ಅನುದಾನ ರಹಿತ ಖಾಸಗಿ ಶಾಲೆಗಳಿಗೂ ವಿಸ್ತರಿಸಬೇಕು. ಶಾಲಾ ಅನುಮತಿ ನವೀಕರಣ ಸರಳೀಕರಿಸಬೇಕು. ಶಾಲಾ, ಕಾಲೇಜು ಕಟ್ಟಡಗಳಿಗೆ ಕರ ವಿನಾಯಿತಿ, ಉಚಿತ ವಿದ್ಯುತ್ ಕೊಡಬೇಕು. ಸಂವಿಧಾನದ 371(ಜೆ) ಕಲಂ ತಿದ್ದಪಡಿ ಉದ್ದೇಶ ಸಾಕಾರಕ್ಕೆ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯಿಂದ ಅನುದಾನ ಕಲ್ಪಿಸಿ ಖಾಸಗಿ ಶಾಲೆಗಳನ್ನು ಬಲಪಡಿಸಬೇಕು ಎಂಬುದು ಸಂಘದ ಪ್ರಮುಖ ಬೇಡಿಕೆಗಳಾಗಿವೆ.

ಸಭೆಯಲ್ಲಿ ರಾಜ್ಯದ ವಿವಿಧ ಪ್ರಾಂತ, 30 ಜಿಲ್ಲೆಗಳ ಜಿಲ್ಲಾ ಹಾಗೂ ತಾಲ್ಲೂಕು ಘಟಕಗಳ ಪದಾಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ ಎಂದು ಸಂಘದ ರಾಜ್ಯ ಅಧ್ಯಕ್ಷ ರೇವಣಸಿದ್ದಪ್ಪ ಜಲಾದೆ ತಿಳಿಸಿದ್ದಾರೆ.

# ಮತದಾರರ ಮಾಹಿತಿ ಸಲಹಾ ಕೇಂದ್ರ ಆರಂಭ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅ 09 : ಭಾರತ ಚುನಾವಣಾ ಆಯೋಗವು 2025ರ ಸೆಪ್ಟೆಂಬರ್ 12ರ ಪತ್ರದನ್ವಯ ನವೆಂಬರ್ 11ಕ್ಕೆ ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಸದಸ್ಯರ ಪದಾವಧಿಯು ಮುಕ್ತಾಯಗೊಳ್ಳಲಿದ್ದು, 2025ರ ನವೆಂಬರ್ 1ಕ್ಕೆ ಅನ್ವಯಿಸುವಂತೆ ಮತದಾರರ ಪಟ್ಟಿಯನ್ನು ಸಿದ್ದಪಡಿಸಲು ವೇಳಾಪಟ್ಟಿಯನ್ನು ಹೊರಡಿಸಿರುತ್ತದೆ. ಅದರನ್ವಯ 2025ರ ನವೆಂಬರ್ 25 ರಂದು ಕರಡು ಮತದಾರರ ಪಟ್ಟಿ ಪ್ರಚುರಪಡಿಸಿ 2025ರ ನವೆಂಬರ್ 25 ರಿಂದ ಡಿಸೆಂಬರ್ 10ರ ವರೆಗೆ ಆಕ್ಷೇಪಣೆಗಳನ್ನು ಆಹ್ವಾನಿಸಿದ್ದು, 2025ರ ಡಿಸೆಂಬರ್ 30 ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಚೂರಪಡಿಸಲು ವೇಳಾಪಟ್ಟಿಯನ್ನು ಹೊರಡಿಸಿ ನಿರ್ದೇಶಿಸಿರುತ್ತಾರೆ ಎಂದು ಯಾದಗಿರಿ ತಹಸೀಲ್ದಾರರು ಹಾಗೂ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರ ಸಹಾಯಕ ಮತದಾರರ ನೋಂದಣಾಧಿಕಾರಿ ಅವರು ತಿಳಿಸಿದ್ದಾರೆ.

ಯಾವುದೇ ಒಂದು ಚುನಾವಣೆಯು ಪಾರದರ್ಶಕವಾಗಿ ನ್ಯಾಯಸಮ್ಮತವಾಗಿ ಯಾವುದೇ ಅಹಿತಕರ ಘಟನೆಗಳು ಜರುಗದೇ ಶಾಂತಿಯುತವಾಗಿ ಮುಕ್ತಾಯಗೊಳ್ಳಬೇಕಾದಲ್ಲಿ ಪ್ರಪ್ರಥಮವಾಗಿ ದೋಷರಹಿತವಾದಂತಹ ಮತದಾರರ ಪಟ್ಟಿ ಸಿದ್ಧಪಡಿಸಿಕೊಳ್ಳುವುದು ಅತ್ಯವಶ್ಯಕವಾಗಿರುತ್ತದೆ. ಈ ರೀತಿ ಮತದಾರರ ಪಟ್ಟಿ ಸಿದ್ಧಪಡಿಸುವಲ್ಲಿ ಅರ್ಹ ಮತದಾರರನ್ನು ಗುರುತಿಸುವಲ್ಲಿ ಆಯೋಗದ ವೇಳಾಪಟ್ಟಿಯನ್ನು ಪ್ರಚುರಪಡಿಸಿ

ಅರ್ಹರನ್ನು ನೋಂದಾಯಿಸಿ ಸಕ್ರೀಯ ಚುನಾವಣಾ ವ್ಯವಸ್ಥೆಯಲ್ಲಿ ಪಾಲ್ಗೊಳ್ಳುವಲ್ಲಿ ಮುಂಬರುವ ಚುನಾವಣೆಗಳಲ್ಲಿ ತಮ್ಮ ಅತ್ಯಮೂಲ್ಯವಾದ ಮತವನ್ನು ಚಲಾಯಿಸಿ ಅರ್ಹ ಅಭ್ಯರ್ಥಿಯನ್ನು ಆರಿಸಿ ಸುಭದ್ರ ಹಾಗೂ ಪ್ರಜಾಪ್ರಭುತ್ವ

ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಮತದಾರರ ಪ್ರಕ್ರೀಯೆಯು ಅತ್ಯಂತ ಮಹತ್ವ ಪೂರ್ಣ ಹಾಗೂ ಜವಾಬ್ದಾರಿಯುತ ಪ್ರಕ್ರೀಯೆಯಾಗಿರುತ್ತದೆ.

ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಗಳನ್ವಯ ಹೊಸದಾಗಿ ಮತದಾರರ ಪಟ್ಟಿಯನ್ನು ಸಿದ್ಧಪಡಿಸಬೇಕಾಗಿರುವುದರಿಂದ ಈ ಕಾರ್ಯಕ್ಕಾಗಿ ಅರ್ಹ ಮತದಾರರು ನೋಂದಣಿಗಾಗಿ ಮಾಹಿತಿ ಕೋರಿದ್ದಲ್ಲಿ ಸೂಕ್ತ ಮಾಹಿತಿಯನ್ನು ನೀಡಿ, ಅವರ ಹೆಸರನ್ನು ನೋಂದಾಯಿಸಲು ಅಲ್ಲದೇ ಈಗಾಗಲೇ

ನೋಂದಣಿಯಾಗಿದ್ದಲ್ಲಿ ಅವರ ಮತದಾರರ ಪಟ್ಟಿಯ ಭಾಗ ಸಂಖ್ಯೆ ಹಾಗೂ ಕ್ರಮ ಸಂಖ್ಯೆಯ ಮಾಹಿತಿ ನೀಡುವುದು ಇದನ್ನು ಹೊರತುಪಡಿಸಿಯು ಸಹ ಮತದಾರರ ನೋಂದಣಿ ಪ್ರಕ್ರಿಯೆ ಪ್ರಾರಂಭದಿಂದ ಈ ಚುನಾವಣೆಯ ಫಲಿತಾಂಶ ಘೋಷಣೆಯಾಗುವವರೆಗೂ ಲಿಖಿತವಾಗಿ, ಮೌಖಿಕವಾಗಿ ಹಾಗೂ ದೂರವಾಣಿ ಮುಖಾಂತರ ಸ್ವೀಕೃತವಾಗುವಂತಹ ದೂರುಗಳ ಮೇಲೆ ಸಹಾಯಕ ಮತದಾರರ ನೋಂದಣಾಧಿಕಾರಿಗಳು ಹಾಗೂ ಸಹಾಯಕ ಚುನಾವಣಾಧಿಕಾರಿಗಳ ನಿರ್ದೇಶನದ ಮೇರೆಗೆ ಕ್ರಮ ಕೈಗೊಳ್ಳಲು ತಹಸೀಲ್ದಾರರ ಕಾರ್ಯಾಲಯದ ಚುನಾವಣೆ ಕೋಣೆ ಸಂಖ್ಯೆ ರಲ್ಲಿ ದೂರು ಮೇಲ್ವಿಚಾರಣೆ ತಂಡ ಹಾಗೂ ಮತದಾರರ ಮಾಹಿತಿ ಮತ್ತು ಸಲಹಾ ಕೇಂದ್ರ (complaints monitoring cell voters helpdesk) ನೇಮಿಸುವುದು ಅತ್ಯವಶ್ಯಕವಾಗಿರುತ್ತದೆ.

ದೂರು ಮೇಲ್ವಿಚಾರಣೆ ತಂಡ ಹಾಗೂ ಮತದಾರರ ಮಾಹಿತಿ ಸಲಹಾ ಕೇಂದ್ರ ತಕ್ಷಣದಿಂದಲೇ ಕಾರ್ಯನಿರ್ವಹಿಸಿ ಲಿಖಿತವಾಗಿ, ಮೌಖಿಕವಾಗಿ ದೂರವಾಣಿ ಮುಖಾಂತರ ಸ್ವೀಕೃತವಾಗುವಂತಹ ಎಲ್ಲಾ ರೀತಿಯ ಸಲಹೆ ಹಾಗೂ ದೂರುಗಳಿಗೆ ದಾಖಲಾಧಾರಿತವಾದ ವಹಿಯನ್ನು ನಿರ್ವಹಿಸಿ ನಿಯಮಾನುಸಾರ ವಿಲೇಗೊಳಿಸಿ ಕಾಲೋಚಿತಗೊಳಿಸಲು ಸೂಚಿಸಲಾಗಿದ್ದು, ಸಾರ್ವಜನಿಕರು ಈ ತಂಡದ ಮುಖಾಂತರ ಈ ಮತದಾರರ ನೋಂದಣಿ ಹಾಗೂ ಚುನಾವಣೆ ಕುರಿತಾದ ಮಾಹಿತಿ ಹಾಗೂ ದೂರನ್ನು ದಾಖಲಿಸಲು ಸಾರ್ವಜನಿಕರ ಗಮನಕ್ಕೆ ತಿಳಿಸಲಾಗಿದೆ.

ಪ್ರಸ್ತುತ ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ–2026ರ ಈ ಚುನಾವಣೆಗೆ

ಸ್ವೀಕೃತವಾಗುವ ದೂರು ಹಾಗೂ ಮತದಾರರ ಮಾಹಿತಿಗಾಗಿ ತಹಸೀಲ್ದಾರರ ಕಾರ್ಯಾಲಯದ ಚುನಾವಣೆ ಶಾಖೆಯಲ್ಲಿ ದೂರು ಮೇಲ್ವಿಚಾರಣೆ ತಂಡ ಹಾಗೂ ಮತದಾರರ ಮಾಹಿತಿ ಮತ್ತು ಸಲಹಾ ಕೇಂದ್ರ (complaints monitoring cell votershelpdesk) ನೇಮಿಸಿ ಆದೇಶಿಸಿದೆ. ಈ ಸಲಹೆ ಕೇಂದ್ರದ ದೂ.ಸಂ.08473 253611 ಇರುತ್ತದೆ.

ಚುನಾವಣೆ ಶಾಖೆಯಲ್ಲಿ ದೂರು ಮೇಲ್ವಿಚಾರಣೆ ಅಧಿಕಾರಿ, ಸಿಬ್ಬಂದಿಗಳು ನೇಮಕ ಯಾದಗಿರಿ ತಹಸೀಲ್ದಾರರ ಕಛೇರಿ ತಹಸೀಲ್ದಾರ ಗ್ರೇಡ್–2 ಶ್ರೀ ಮೊಹಮ್ಮದ ಶಕೀಲ್ ಮೊ.ನಂ.9886280867, ಯಾದಗಿರಿ

ತಹಸೀಲ್ದಾರರ ಕಛೇರಿ ಶ್ರೀ ಮಲ್ಲಿಕಾರ್ಜುನ ತಂಗಡಗಿ ಮೊ.ನಂ.9900665143, ಯಾದಗಿರಿ ತಹಸೀಲ್ದಾರರ ಕಛೇರಿ ಪ್ರಥಮ ದರ್ಜೆ ಸಹಾಯಕ ಶ್ರೀ ಶರಣಬಸಪ್ಪ ಮೊ.ನಂ.9945585646, ಯಾದಗಿರಿ ತಹಸೀಲ್ದಾರರ ಕಛೇರಿ ದ್ವಿತೀಯ ದರ್ಜೆ ಸಹಾಯಕ ಶ್ರೀ ಚಂದ್ರಶೇಖರ ಮೊ.ನಂ.7975359211ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದಸರಾ ನೃತ್ಯೋತ್ಸವ-ಹಾಸ್ಯೋತ್ಸವ 12ಕ್ಕೆ



ಬೀದರ. ಅ. 09 : ನಾಟ್ಯಶ್ರೀ ನೃತ್ಯಾಲಯ ವತಿಯಿಂದ ನಗರದ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗ ಮಂದಿರದಲ್ಲಿ ಅ. 12 ರಂದು ಮಧ್ಯಾಹ್ನ 3.30ಕ್ಕೆ ದಸರಾ ನೃತ್ಯೋತ್ಸವ ಹಾಗೂ ಹಾಸ್ಯೋತ್ಸವ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವು ಭರತ ನಾಟ್ಯ, ಜಾನಪದ ನೃತ್ಯ, ಸಂಗೀತ ಹಾಗೂ ಹಾಸ್ಯವನ್ನು ಒಳಗೊಳ್ಳಲಿದೆ.

ಧಾರವಾಡದ ಚಲನಚಿತ್ರ ನಟ ಅನಂತಕೃಷ್ಣದೇಶಪಾಂಡೆ (ಬೇಂದ್ರೆ) ಜ್ಯೋತಿ ಪ್ರಜ್ವಲಿಸಿ, ಬೇಂದ್ರೆ ದರ್ಶನ ಕುರಿತು ಉಪನ್ಯಾಸ ನೀಡುವರು. ಖ್ಯಾತ ಸಾಹಿತಿಯೂ ಆದ ಮೈಸೂರಿನ ಹಾಸ್ಯ ಕಲಾವಿದ ಪ್ರೊ. ಕೃಷ್ಣೇಗೌಡ ಕನ್ನಡವೆಂಬ ಸೊಬಗು ಕುರಿತು ಉಪನ್ಯಾಸ ನೀಡುವರು.

ರಾಷ್ಟ್ರೀಯ ಬಸವ ದಳದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಪಾಟೀಲ ಗಾದಗಿ, ವಚನಾಮೃತ ಕನ್ನಡ ಸಂಘದ ಅಧ್ಯಕ್ಷ ಪ್ರೊ. ಸಿದ್ರಾಮಪ್ಪ ಮಾಸಿಮಾಡೆ, ಕರ್ನಾಟಕ ಸಾಹಿತ್ಯ ಸಂಘದ ಅಧ್ಯಕ್ಷ ಡಾ. ಜಗನ್ನಾಥ ಹೆಬ್ಬಾಳೆ, ಜ್ಞಾನಸುಧಾ ಶಿಕ್ಷಣ ಸಂಸ್ಥೆಯ ಅಧ್ಯಕ್ಷೆ ಡಾ. ಪೂರ್ಣಿಮಾ ಜಿ, ಸಮಾಜ ಸೇವಕಿ ನೀತಾ ಎಸ್. ಬೆಲ್ದಾಳೆ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಡಾ. ಸಂಜೀವಕುಮಾರ ಅತಿವಾಳೆ, ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ, ಸಹಾಯಕ ಕೃಷಿ ನಿರ್ದೇಶಕಿ ಡಾ. ಆರತಿ ಪಾಟೀಲ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ನಾಟ್ಯಶ್ರೀ ನೃತ್ಯಾಲಯದ ಅಧ್ಯಕ್ಷೆ ರಾಣಿ ಸತ್ಯಮೂರ್ತಿ ಅಧ್ಯಕ್ಷತೆ ವಹಿಸುವರು.

ಸಂಯುಕ್ತ ಕರ್ನಾಟಕ ಜಿಲ್ಲಾ ಹಿರಿಯ ವರದಿಗಾರ ಸದಾನಂದ ಜೋಶಿ, ಟಾಟಾ ಎಐಎ ಲೈಫ್ ಇನ್ಶುರೆನ್ಸ್‌ನ ಕೆ. ಕಿರಣಮೂರ್ತಿ ಹಾಗೂ ಭರತ ನಾಟ್ಯ ಜೂನಿಯರ್ ಪರೀಕ್ಷೆಯಲ್ಲಿ ಉತ್ತಮ ಅಂಕಗಳೊಂದಿಗೆ ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗುವುದು.

ಬಸವರಾಜ ಮೂಲಗೆ, ರಾಘವೇಂದ್ರ ಅಡಿಗ, ದೇವಿದಾಸ ಜೋಶಿ ಹಾಗೂ ಸ್ವರೂಪರಾಣಿ ನಾಗೂರೆ ನಿರೂಪಿಸುವರು ಎಂದು ನಾಟ್ಯಶ್ರೀ ನೃತ್ಯಾಲಯದ

ಅಧ್ಯಕ್ಷೆ ರಾಣಿ ಸತ್ಯಮೂರ್ತಿ ತಿಳಿಸಿದ್ದಾರೆ.

# ಹೆಚ್‌ಐವಿ/ಏಡ್ಸ್ ಕುರಿತು ಹೆಚ್ಚು ಅರಿವು ಮೂಡಿಸುವ ಕಾರ್ಯಕ್ರಮ ಆಗಲಿ:ಡಾ.ಅನೀಲಕುಮಾರ ಚಿಂತಾಮಣಿ



ಮಲ್ಲಮ್ಮ ನುಡಿ ವಾರ್ತೆ

ಬೀದರ,ಅ.09:ಸಾರ್ವಜನಿಕರಲ್ಲಿ ಮತ್ತು ಯುವಕರಲ್ಲಿ ಹೆಚ್‌ಐವಿ/ಏಡ್ಸ್ ಕುರಿತಂತೆ ಹೆಚ್ಚು ಅರಿವು ಮೂಡಿಸುವ ಕಾರ್ಯಕ್ರಮ ಆಗಬೇಕು ಆಗ ಮಾತ್ರ ನಿಯಂತ್ರಿಸಲು ಸಾಧ್ಯ ಎಂದು ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಅನೀಲಕುಮಾರ ಚಿಂತಾಮಣಿ ತಿಳಿಸಿದರು.

ಅವರು ಗುರುವಾರ ನಗರದ ಬರಿದ್‌ಶಾಹಿ ಉದ್ಯಾನವದಲ್ಲಿ ಹೆಚ್.ಐ.ವಿ/ಏಡ್ಸ್ ಕುರಿತು ಅರಿವು ಮೂಡಿಸಲು ಯುವಜನೋತ್ಸ ಕಾರ್ಯಕ್ರಮ ನಿಮಿತ್ಯ ಕಾಲೇಜು ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಂದ ಹಮ್ಮಿಕೊಂಡಿದ್ದ

ಮ್ಯಾರಾಥಾನ ಕಾರ್ಯಕ್ರಮಕ್ಕೆ ಹಸಿರು ಬಾವುಟ ಹಾರಿಸುವ ಮೂಲಕ ಚಾಲನೆಯನ್ನು ನೀಡಿ ಮಾತನಾಡಿದರು.

ಎಚ್‌ಐವಿ/ಏಡ್ಸ್ ಸೋಂಕು ವ್ಯಾಪಿಸಲು ಆರೋಗ್ಯದ ತಿಳುವಳಿಕೆ ಕೊರತೆ ಮತ್ತು ಕಡೆಗಣಿಸಿರುವುದೆ ಪ್ರಮುಖ ಕಾರಣವಾಗಿದೆ. ಇದು ಮುಂದಿನ ಪೀಳಿಗೆಗೆ ಹರಡದಂತೆ ಜಾಗೃತರಾಗುವುದು ಅಗತ್ಯವಾಗಿದೆ ಎಂದರು.

ಪ್ರಾಸ್ತಾವಿಕವಾಗಿ ಜಿಲ್ಲಾ ಐಸಿಟಿಸಿ ಮೇಲ್ವಿಚಾರಕ ಸೂರ್ಯಕಾಂತರವರು ಹೆಚ್.ಐ.ವಿ/ಏಡ್ಸ್ ಮತ್ತು ಎಸ್‌ಟಿಐ ತಡೆಗಟ್ಟಲು ಅರಿವು ಮಾಸಾಚರಣೆಯ ಕುರಿತು ಮಾಹಿತಿಯನ್ನು ನೀಡಿದರು.

ಒಟ್ಟು 110 ಜನ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಮ್ಯಾರಾಥನದಲ್ಲಿ ಭಾಗವಹಿಸಿದರು. ಈ ಮ್ಯಾರಾಥನ ನಗರದ ಬರಿದ್‌ಶಾಹಿ ಉದ್ಯಾನವನದಿಂದ ಮಡಿವಾಳ ವೃತ್ತ, ಬಿರಾದರ ಆಸ್ಪತ್ರೆ ಮಾರ್ಗವಾಗಿ ಸಿದ್ಧಾರ್ಥ ಕಾಲೇಜು ಎದುರುಗಡೆಯಿಂದ, ರಾಜೀವಗಾಂಧಿ ವೃತ್ತ ಮಾರ್ಗವಾಗಿ ತೆರಳಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಾಲಯದವರೆಗೆ ನಡೆಯಿತು.

ಕಾರ್ಯಕ್ರಮದಲ್ಲಿ ಮ್ಯಾರಾಥಾನನಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಮತ್ತು ವಿದ್ಯಾರ್ಥಿನಿಯರಿಗೆ ಮೆಡಲ್,

ಪ್ರಶಸ್ತಿ ಪತ್ರವನ್ನು ಮತ್ತು ನಗದು ಬಹುಮಾನವನ್ನು ನೀಡಿ ಸನ್ಮಾನಿಸಲಾಯಿತ್ತು.

ಈ ಕಾರ್ಯಕ್ರಮದಲ್ಲಿ ಟ್ರಾಫಿಕ್ ಪೊಲೀಸ್ ಎಎಸ್‌ಐ

ವಿಜಯಕುಮಾರ, ಬ್ರಿಮ್ಸ್ ಜಿಲ್ಲಾ ಆಸ್ಪತ್ರೆಯಲ್ಲಿರುವ ಐಸಿಟಿಸಿ(ಎ) ಕೇಂದ್ರದ ಪ್ರಯೋಗ ಶಾಲಾ ತಂತ್ರಜ್ಞಾರಾದ ಅರವಿಂದ, ಡ್ಯಾಪ್ಕು, ಐಸಿಟಿಸಿ,

ಪಿಪಿಟಿಸಿಟಿ, ಎಆರ್‌ಟಿ, ಎಸ್.ಆರ್.ಎಲ್, ಡಿಎಸ್‌ಆರ್‌ಸಿ, ಶರಣ ತತ್ವ, ಪ್ರವರ್ಧ, ಎಲ್‌ಬಿಇಎಸ್ ಮತ್ತು ಬೆಳದಿಂಗಳು ನೆಟವರ್ಕ ಸಿಬ್ಬಂದಿಯವರು ಮತ್ತು ಕಾಲೇಜಿನ ಉಪನ್ಯಾಸಕರು ಪಾಲ್ಗೊಂಡಿದರು.

# ಅ.14 ರಂದು ಒಂದು ದಿನದ ಅರಿವು ಜಾಗೃತಿ

ಯಾದಗಿರಿ : ಅ 09 : ಯಾದಗಿರಿ ಜಿಲ್ಲೆಯ ಒಂದು ದಿನದ ಅರಿವು ಜಾಗೃತಿ 2025ರ ಅಕ್ಟೋಬರ್ 14 ರಂದು ಬೆಳಿಗ್ಗೆ 10.30 ಗಂಟೆಗೆ ಯಾದಗಿರಿ ಕಡೇಚೂರು–ಬಾಡಿಯಾಳ ಪ್ಲಾಟ ನಂ.486 ಕೈಗಾರಿಕಾ ಪ್ರದೇಶ ಸರಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಯಾದಗಿರಿ ಜಿಲ್ಲಾ ಕೈಗಾರಿಕಾ ಕೇಂದ್ರ ಜಂಟಿ ನಿರ್ದೇಶಕರು ಅವರು ತಿಳಿಸಿದ್ದಾರೆ.

ಎಂ.ಎಸ್.ಎಂ.ಇಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸುವುದು ಆರ್‌ಎಎಮ್‌ಪಿ ಯೋಜನೆಯಡಿಯಲ್ಲಿ ಕುರಿತು ಜರುಗುವ ಒಂದು ದಿನದ ಅರಿವು ಮೂಡಿಸುವ ಕಾರ್ಯಗಾರ ಏರ್ಪಡಿಸಲಾಗಿದೆ. ಈ ಕಾರ್ಯಗಾರದಲ್ಲಿ ಆಸಕ್ತಿಯುಳ್ಳ ಇಂಜಿನೀಯರಿಂಗ್, ಎಂಬಿಎ, ವಾಣಿಜ್ಯ ಪದವಿದಾರರು, ಡಿಪ್ಲೋಮಾ ಹೊಂದಿದ ಯುವಕ, ಯುವತಿಯರು ಭಾಗವಹಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಧಿಕಾರಿಗಳು ವಿಪತ್ತು ನಿರ್ವಹಣಾ ಪ್ರಾಧಿಕಾರದ ಮಹತ್ವ ಅರಿಯಬೇಕು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.09:ವಿಪತ್ತು ನಿರ್ವಹಣಾ ಪ್ರಾಧಿಕಾರದ ಸದಸ್ಯರೂ ಆಗಿರುವ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಪ್ರಾಧಿಕಾರದ ಮಹತ್ವ ಅರಿತುಕೊಂಡಾಗ ಮಾತ್ರ ಅನಿರೀಕ್ಷಿತವಾಗಿ ಸಂಭವಿಸುವ ಎಂತಹ ವಿಪತ್ತನ್ನು ಎದುರಿಸಲು ಸಾಧ್ಯ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಆಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ 2025–26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ ಉಂಟಾಗಿರುವ ಹಾನಿಯ ಕುರಿತು ಹಾಗೂ ಮಳೆ, ಪ್ರವಾಹ ಪರಿಸ್ಥಿತಿ ನಿಭಾಯಿಸಲು ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ಚರ್ಚಿಸಲು ಗುರುವಾರ ಏರ್ಪಡಿಸಿದ್ದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿಪತ್ತು ಎನ್ನುವುದು ಸಾರ್ವಜನಿಕ ಜೀವನಕ್ಕೆ ಅನಿರೀಕ್ಷಿತ ಮತ್ತು ಗಂಭೀರವಾದದ್ದು. ಹಾಗಾಗಿ ಪ್ರಾಧಿಕಾರದ ಸದಸ್ಯರಾಗಿರುವ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳಿಗೆ ನಿಯಮಿತವಾಗಿ ಅಣಕು ಪ್ರದರ್ಶನ ಮತ್ತು ತರಬೇತಿ ಹೊಂದಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಕೃಷಿ ಮತ್ತು ತೋಟಗಾರಿಕೆ ಕ್ಷೇತ್ರಕ್ಕೆ ಸಂಬಂಧಿಸಿದಂತೆ, ಯಾವುದೇ ರೀತಿಯ ಗಂಭೀರ ಹಾನಿಯಾಗಿರುವುದು ಕಂಡುಬಂದಿಲ್ಲ. ಆದರೆ, ಜಿಲ್ಲೆಯಲ್ಲಿ ವಿವಿಧೆಡೆ ಭತ್ತದ ಬೆಳೆಗೆ ದುಂಡಾಣು ಮಚ್ಚೆ ರೋಗ ಕಂಡುಬಂದಿದ್ದು, ಈ ಕುರಿತು ರೈತರಿಗೆ ಸೂಕ್ತ ಕ್ರಮವಹಿಸಲು ನಿರ್ದೇಶನ ನೀಡಬೇಕು. 1 ಎಕರೆಯಾದರೂ ಅಥವಾ 100 ಎಕರೆಯದರೂ ಸಹ ಬೆಳೆ ಹಾನಿಯಾದಲ್ಲಿ ಯಾವುದನ್ನು ನಿರ್ಲ್ಯಕ್ಷಿಸುವಂತಿಲ್ಲ, ಗಣತಿ ಮಾಡಿ ವರದಿ ಮಾಡಬೇಕು ಎಂದು ಕೃಷಿ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯಲ್ಲಿ ಮಳೆಯಿಂದಾಗಿ ರಾಜ್ಯ ಹೆದ್ದಾರಿ, ಗ್ರಾಮೀಣ ಭಾಗದ ರಸ್ತೆಗಳಲ್ಲಿ ತಗ್ಗು–ಗುಂಡಿ ಆಗಿದ್ದಲ್ಲಿ ಕೂಡಲೇ ಮುಚ್ಚಬೇಕು ಮತ್ತು ನಿರ್ವಹಣೆ ಕಾಮಗಾರಿ ಕೈಗೆತ್ತಿಕೊಳ್ಳಬೇಕು ಎಂದು ಲೋಕೋಪಯೋಗಿ, ಪಂಚಾಯತ್ ರಾಜ್ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬೆಳೆಹಾನಿ, ಸಾರ್ವಜನಿಕ ಕಟ್ಟಡ, ರಸ್ತೆ ಹಾನಿ, ಕುಡಿಯುವ ನೀರು ಮತ್ತು ಆರೋಗ್ಯ ಸೌಲಭ್ಯ ಸೇರಿದಂತೆ ಯಾವುದೇ ರೀತಿಯ ಸಮಸ್ಯೆಗಳ ಕುರಿತು ಪತ್ರಿಕೆಗಳಲ್ಲಿ ವರದಿಯಾದಲ್ಲಿ ಅಂತಹವುಗಳನ್ನು ಆದ್ಯತೆಯಾಗಿ ಪರಿಗಣನೆಗೆ ತೆಗೆದುಕೊಂಡು ಸರಿಪಡಿಸಲು ಕ್ರಮವಹಿಸಬೇಕು ಎಂದು ಅಧಿಕಾರಿಗಳಿಗೆ ಕಿವಿಮಾತು ಹೇಳಿದರು.

ಜಿಲ್ಲೆಯಲ್ಲಿ ಈವರೆಗೆ ಶಾಲೆ ಮತ್ತು ಅಂಗನವಾಡಿ ಕೊಠಡಿಗಳು ಬೀಳುವ ಹಂತದಲ್ಲಿ ಅಥವಾ ದುರಸ್ತಿಯಿರುವ ಕಟ್ಟಡಗಳನ್ನು ಗುರುತಿಸಿ ಮಾಹಿತಿ ನೀಡಬೇಕು. ದುರಸ್ತಿ ವಿದ್ಯುತ್ ಕಂಬಗಳಿದ್ದಲ್ಲಿ ಗುರುತಿಸಬೇಕು ಎಂದು ಡಿಡಿಪಿಐ, ಜೆಸ್ಕಾಂ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಸಾಂಕ್ರಾಮಿಕ ರೋಗಗಳು ಹರಡದಂತೆ ಮತ್ತು ಅಗತ್ಯ ಔಷಧಿಗಳ ದಾಸ್ತಾನು ಇಟ್ಟುಕೊಳ್ಳುವಂತೆ ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಎಸ್‌ಡಿಆರ್‌ಎಫ್ ಅಡಿ ಬಾಕಿ ಇರುವ ಕಾಮಗಾರಿಗಳನ್ನು ಶೀಘ್ರವೇ ಪೂರ್ಣಗೊಳಿಸಬೇಕು. ಅಗ್ನಿಶಾಮಕ ಅಧಿಕಾರಿಗಳು ನಿಯಮಿತವಾಗಿ ಪೂರ್ವ ತಯಾರಿ ಹೊಂದುವ ಮೂಲಕ ವಿಪತ್ತು ಸಂದರ್ಭದಲ್ಲಿ ಸಿದ್ಧರಿರಬೇಕು ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮ್ಮೈರ್, ಸಹಾಯಕ ಆಯುಕ್ತ ಪಿ.ಪ್ರಮೋದ್, ಕೃಷಿ ಜಂಟಿ ನಿರ್ದೇಶಕ ಸೋಮಸುಂದರ್, ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಹನುಮನಗೌಡ ಪೊಲೀಸ್ ಪಾಟೀಲ್ ಸೇರಿದಂತೆ ತೋಟಗಾರಿಕೆ, ಡಿಯುಡಿಸಿ, ಜೆಸ್ಕಾಂ, ಡಿಡಿಪಿಐ, ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಅಕ್ಟೋಬರ್ 10ರಂದು ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯಿಂದ ರಾಯಚೂರು ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 09–20 ಜನ ಶಾಸಕರು ಇರುವ ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯು ಅಕ್ಟೋಬರ್ 10ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದೆ. ವಿಧಾನಸಭಾ ಸದಸ್ಯರು ಆಗಿರುವ ಹಾಗೂ ಸಮಿತಿಯ ಅಧ್ಯಕ್ಷರಾದ ಎನ್.ಹೆಚ್.ಕೋನರಡ್ಡಿ ಅವರ ನೇತೃತ್ವದ ಸಮಿತಿಯು ಅಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಭೆ ನಡೆಸಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಡಿಯಲ್ಲಿನ ಎಲ್ಲಾ ಯೋಜನೆಗಳ/ಕಾರ್ಯಕ್ರಮಗಳು ಅನುಷ್ಠಾನಗೊಂಡಿರುವ/ಅನುಷ್ಠಾನಗೊಳ್ಳುತ್ತಿರುವ ಬಗ್ಗೆ ಹಾಗೂ ಇಲಾಖೆಗೆ ಸಂಬಂಧಪಟ್ಟಂತೆ ಇನ್ನಿತರ ವಿಷಯಗಳ ಕುರಿತು ಚರ್ಚಿಸಲಿದೆ. ಮಧ್ಯಾಹ್ನ 1.30ಕ್ಕೆ ಭೋಜನ ವಿರಾಮ ಇರುತ್ತದೆ. ಸಂಜೆ 4 ಗಂಟೆಗೆ ರಾಯಚೂರಿನಿಂದ ನಿರ್ಗಮಿಸಿ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದೆ.

ವಿಧಾನಸಭಾ ಸದಸ್ಯರಾದ ಉಮಾನಾಥ್ ಎ. ಕೋಟ್ಯಾನ್, ಡಾ.ವೈ.ಭರತ್ ಶೆಟ್ಟಿ, ಉದಯ ಬಿ. ಗರುಡಾಚಾರ್, ಹೆಚ್.ಎ. ಇಕ್ಬಾಲ್ ಹುಸೇನ್, ಅಶೋಕ್ ಮಲ್ಲಪ್ಪ ಮನಗೂಳಿ, ಕೊತ್ತೂರು ಜಿ. ಮಂಜುನಾಥ, ನಯನ ಮೋಟಮ್ಮ, ಮಹೇಂದ್ರ ಕಲ್ಲಪ್ಪ ತಮ್ಮಣ್ಣನವರ್, ಪ್ರದೀಪ್ ಈಶ್ವರ್, ಡಿ. ರವಿಶಂಕರ್, ಹೆಚ್.ಕೆ. ಸುರೇಶ್ (ಹುಲ್ಲಳ್ಳಿ ಸುರೇಶ್), ಮಂಜುಳಾ ಅರವಿಂದ ಲಿಂಬಾವಳಿ, ಕರೆಮ್ಮ ನಾಯಕ, ಶರಣಗೌಡ ಕಂದಕೂರ ಹಾಗೂ ವಿಧಾನ ಪರಿಷತ್ತಿನ ಸದಸ್ಯರಾದ ಡಾ. ಚಂದ್ರಶೇಖರ ಬಸವರಾಜ ಪಾಟೀಲ, ಶಾಂತಾರಾಮ್ ಬುಡ್ನಸಿದ್ದಿ, ವೈ.ಎಂ. ಸತೀಶ್, ಶರಣಗೌಡ ಬಯ್ಯಪುರ, ಕೆ. ವಿವೇಕಾನಂದ ಅವರು ಸೇರಿದಂತೆ 20 ಜನ ಶಾಸಕರು ಸಮಿತಿಯಲ್ಲಿ ಸದಸ್ಯರಾಗಿದ್ದಾರೆ ಎಂದು ಕರ್ನಾಟಕ ವಿಧಾನಸಭೆ ಸಚಿವಾಲಯದ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅತಿಥಿ ಶಿಕ್ಷಕರ ಆಯ್ಕೆ: ಅರ್ಜಿ ಸಲ್ಲಿಕೆ ಅವಧಿ ನವಂಬರ್ 13ರವರೆಗೆ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 09– ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ 2025–26ನೇ ಶೈಕ್ಷಣಿಕ ಸಾಲಿನಲ್ಲಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಜೀಂ ಪ್ರೇಮ್ ಜೀ ಫೌಂಡೇಶನ್ ಆಯ್ಕೆ ಮಾಡಿರುವ ಮದರಸಾಗಳಲ್ಲಿ ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯ ಅವಧಿಯನ್ನು ನವಂಬರ್ 13ರವರೆಗೆ ವಿಸ್ತರಿಸಲಾಗಿದೆ.

ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಬಾಗಲಕೋಟೆ, ವಿಜಯಪುರ, ಕಲಬುರ್ಗಿ, ಬೆಂಗಳೂರು ನಗರ, ರಾಯಚೂರು ಮತ್ತು ಯಾದಗಿರಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಆಯ್ದ ಮದರಸಾಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಧಾರ್ಮಿಕ ಶಿಕ್ಷಣದೊಂದಿಗೆ ಎನ್‌ಐಒಎಸ್ ಮುಖಾಂತರ ಔಪಚಾರಿಕ ಶಿಕ್ಷಣವನ್ನು ನೀಡುವುದರ ಮೂಲಕ ಅವರ ಭವಿಷ್ಯವನ್ನು ರೂಪಿಸುವ ನಿಟ್ಟಿನಲ್ಲಿ ಅಜೀಂ ಪ್ರೇಮ್ ಜೀ ಫೌಂಡೇಶನ್ ಅವರ ಸಹಯೋಗದೊಂದಿಗೆ ಔಪಚಾರಿಕ ಶಿಕ್ಷಣ ವಿಷಯಗಳಾದ ಕನ್ನಡ, ಇಂಗ್ಲೀಷ್, ವಿಜ್ಞಾನ ಮತ್ತು ಗಣಿತ ವಿಷಯಗಳನ್ನು ಬೋಧಿಸಲು ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ಜಿಲ್ಲಾ ಹಂತದಲ್ಲಿ ಆಯ್ಕೆ ಮಾಡಿಕೊಳ್ಳಲು ಉದ್ದೇಶಿಸಲಾಗಿದೆ.

ಅರ್ಹತೆ: ಅಭ್ಯರ್ಥಿಗಳು, ಡಿಇಡಿ ಅಥವಾ ಬಿಇಡಿ ವಿದ್ಯಾರ್ಹತೆಯನ್ನು ಹೊಂದಿರಬೇಕು. ಉರ್ದು ಭಾಷೆಯಲ್ಲಿ ಕುಶಲತೆಯನ್ನು ಹೊಂದಿರಬೇಕು. ಟಿಇಟಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ಅಲ್ಪಸಂಖ್ಯಾತರ ನಿರ್ದೇಶನಾಲಯದ ವೆಬ್‌ಸೈಟ್ ವಿಳಾಸ:ಣಣಣಥಿ://ಜಒಟ.ಇಚಿಡಿ–ಟಚಿಣಚಿಕಾಚಿ.ರಂತ.ಎಟ. ಇಲ್ಲಿ ಲಭ್ಯವಿರುವ ಅರ್ಜಿ ನಮೂನೆಯನ್ನು ಪಡೆದು ಹಾಗೂ https://docs. google.com/forms/d/1xIEm6-RFzb6–2DaMhr-FITR8LSc-GU0iuwplQElElErI/editಈ ಲಿಂಕ್ ನ ಮೂಲಕ ಮಾರ್ಗಸೂಚಿಗಳನ್ವಯ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಉತ್ತಮ ಸಾಧನೆಗೆ ಪ್ರಾಮಾಣಿಕತೆ ಅಗತ್ಯ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಉತ್ತಮ ಸಾಧನೆ ಮಾಡಬೇಕಾದರೆ ಕಠಿಣವಾದ ಪರಿಶ್ರಮ ಮತ್ತು ಪ್ರಾಮಾಣಿಕ ಪ್ರಯತ್ನ ಅಗತ್ಯವಾಗಿದೆ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ಹೇಳಿದರು.

ತಾಲೂಕಿನ ಹಳ್ಳಿಖೇಡ (ಬಿ) ಪಟ್ಟಣದ ಬೆಲ್ ಸ್ಟಾರ್ ಮೈಕ್ರೊ ಫೈನಾನ್ಸ್ ನೂತನ ಕಚೇರಿ ಉದ್ಘಾಟನೆ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಹೊಸ ಯೋಜನೆಯೊಂದಿಗೆ ಹಳ್ಳಿಖೇಡ ಪಟ್ಟಣದಲ್ಲಿ ಬೆಲ್ ಸ್ಟಾರ್ ಮೈಕ್ರೊ ಫೈನಾನ್ಸ್ ಸಂಸ್ಥೆಯವರು ಉತ್ತಮ ಯಶಸ್ಸು ಗಳಿಸಿ ಉತ್ತಮ ಸಾಧನೆ ಮಾಡುವ ಮೂಲಕ ಸಾಮಾಜಿಕ ಕ್ಷೇತ್ರಕ್ಕೂ ಕೂಡಾ ಕೊಡುಗೆ ನೀಡುವಂತೆ ಹೆಮ್ಮರವಾಗಿ ಬೆಳೆಯಲಿ ಎಂದು ಹಾರೈಸಿದರು. ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷೆ ಜಗದೇವಿ ಶಂಕೆ, ಪುರಸಭೆ ಉಪಾಧ್ಯಕ್ಷೆ ನಾಸರೀನ್ ಬೇಗಂ, ಪುರಸಭೆ ಮುಖ್ಯಾಧಿಕಾರಿ ಶಿವಶಂಕರ ಪಾಟೀಲ್, ಪಿಎಸ್ಐ ವಿಜಯಕುಮಾರ ನಾಯಕ ಬೆಲ್ ಸ್ಟಾರ್ ಪ್ರಾದೇಶಿಕ ವ್ಯವಸ್ಥಾಪಕ ರಂಜೀತ ಪಿಲಕಲ, ಸಂಸ್ಥೆ ಕ್ಲಸ್ಟರ್ ವ್ಯವಸ್ಥಾಪಕ ಮಲ್ಲಪ್ಪ ನಿಪ್ಪಾಣಿ, ಶಾಖಾ ವ್ಯವಸ್ಥಾಪಕ ಕುಮಾರ ಹಂಡೆ, ಮಾಂತಯ್ಯಾ ತೀರ್ಥಾ, ಕೇಶವರಾವ ಮಹಾರಾಜ, ಯೂಸುಫ್ ಸೌದಾಗರ್, ಸಂದೀಪ ಪ್ರಭಾ, ಡಾ. ಹಸನ್, ಡಾ. ಹಸನ್, ವಿಜಯಕುಮಾರ ಶಹಾಪೂರಕರ್, ಸಾಜೀದ್ ಪಟೇಲ್, ಆರೀಫ ಬಾವಗಿ, ಗೌಸ್ ರಾಜಾಭಾಯ್, ಪ್ರವೀಣ ಶಂಕೆ, ಸಚೀನ್ ತೀರ್ಥಾ ಇದ್ದರು.

## ಜಿಲ್ಲಾ ಮಟ್ಟದ ಯುವಜನೋತ್ಸವ: ಅಕ್ಟೋಬರ್ 17ರಂದು ಆಯ್ಕೆ ಪ್ರಕ್ರಿಯೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 09–:ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 2025–26ನೇ ಸಾಲಿನ ರಾಯಚೂರು ಜಿಲ್ಲಾ ಮಟ್ಟದ ಯುವಜನೋತ್ಸವ ಆಯ್ಕೆ ಪ್ರಕ್ರಿಯೆಯನ್ನು ಅಕ್ಟೋಬರ್ 17ರ ಬೆಳಿಗ್ಗೆ 10 ಗಂಟೆಗೆ ನಗರದ ಕೃಷಿ ವಿಶ್ವವಿದ್ಯಾಲಯದ ಆಡಿಟೋರಿಯಂ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಎಲ್ಲಾ ತಾಲೂಕುಗಳ ಶಾಲಾ ಕಾಲೇಜು ವಿದ್ಯಾರ್ಥಿಗಳು, ಸಂಘ ಸಂಸ್ಥೆಗಳು, ಯುವಕ/ಯುವತಿ ಮಂಡಳಿಗಳು ಸೇರಿದಂತೆ ಇನ್ನಿತರೆ ಸಂಸ್ಥೆಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಸ್ಪರ್ಧಾಳುಗಳು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿರೇಶ್ ನಾಯಕ ಅವರು ತಿಳಿಸಿದ್ದಾರೆ.

ನಿಗದಿಪಡಿಸಿದ ದಿನಾಂಕ ಹಾಗೂ ಸ್ಥಳದಲ್ಲಿ ಬೆಳಿಗ್ಗೆ 9 ಗಂಟೆಯ ಒಳಗಾಗಿ ಸ್ಪರ್ಧಾಳುಗಳು ತಮ್ಮ ಹೆಸರನ್ನು ನೋದಾಯಿಸಕೊಳ್ಳತಕ್ಕದ್ದು. ವಯಸ್ಸಿನ ದೃಢೀಕರಣಕ್ಕೆ ಆಧಾರ ಕಾರ್ಡ್ ಅಥವಾ ಜನ್ಮ ದಿನಾಂಕ ಇರುವ ಸರಕಾರಿ ಪ್ರಮಾಣ ಪತ್ರವನ್ನು ಹಾಗೂ ಸ್ವಯಂ ಬ್ಯಾಂಕ್ ಖಾತೆಯ ಝುರಾಕ್ಸ ಪ್ರತಿಯನ್ನು ಕಡ್ಡಾಯವಾಗಿ ಸಲ್ಲಿಸಬಹುದಾಗಿದೆ.


ಸಾಂಸ್ಕೃತಿಕ ವಿಭಾಗದಲ್ಲಿ ಜಾನಪದ ನೃತ್ಯ (ತಂಡ) 10 ಜನ ಭಾಗವಹಿಸಬಹುದಾಗಿದೆ. 15 ನಿಮಿಷಗಳನ್ನು ಸ್ಪರ್ಧಾ ಸಮಯವನ್ನು ನಿಗದಿಪಡಿಸಲಾಗಿದೆ. ಜನಪದಗೀತೆ (ತಂಡ) ಪ್ರಾದೇಶಿಕ ಭಾಷೆಯಲ್ಲಿ 10 ಜನ ಭಾಗವಹಿಸಬಹುದಾಗಿದೆ. 07 ನಿಮಿಷಗಳನ್ನು ಸ್ಪರ್ಧಾ ಸಮಯವನ್ನು ನಿಗದಿಪಡಿಸಲಾಗಿದೆ. ಕಥೆ ಬರೆಯುವುದು (ವೈಯಕ್ತಿಕ) (1000 ಪದಗಳಿಗೆ ಮೀರದಂತೆ) ಹಿಂದಿ/ಆಂಗ್ಲ / ಪ್ರಾದೇಶಿಕ ಭಾಷೆಗೆ 60 ನಿಮಿಷಗಳನ್ನು ನಿಗದಿಪಡಿಸಲಾಗಿದೆ. ಚಿತ್ರಕಲೆ (ವೈಯಕ್ತಿಕ) 11.7”ಥ16.5” 90 ನಿಮಿಷಗಳನ್ನು ನಿಗದಿಪಡಿಸಲಾಗಿದೆ. ಭಾಷಣಕ್ಕೆ (ಹಿಂದಿ ಮತ್ತು ಆಂಗ್ಲ ಭಾಷೆಯಲ್ಲಿ ಇರಬೇಕು) 07 ನಿಮಿಷಗಳನ್ನು ನಿಗದಿಪಡಿಸಲಾಗಿದೆ. ಕವಿತೆ ಬರೆಯುವುದು (ವೈಯಕ್ತಿಕ) ಹಿಂದಿ /ಆಂಗ್ಲ / ಪ್ರಾದೇಶಿಕ ಭಾಷೆಯಲ್ಲಿ ಇರಬೇಕು. 90 ನಿಮಿಷಗಳನ್ನು ನಿಗದಿಪಡಿಸಲಾಗಿದ್ದು, ಸ್ಪರ್ಧಾಳುಗಳು ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾಧಿಕಾರಿಗಳು, ರಾಯಚೂರು ಇವರನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಪ್ರಯುಕ್ತ ಶಾಸಕರ ಭವನದ ಮುಂಭಾಗ ಶ್ರೀ ಮಹರ್ಷಿ ವಾಲ್ಮೀಕಿ ತಪೋವನದ ಬಳಿ ಇರುವ ವಾಲ್ಮೀಕಿ ಪ್ರತಿಮೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇಂದು ಮಾಲಾರ್ಪಣೆ ಮಾಡಿದರು. ಸಚಿವ ಕೆ.ಎಚ್. ಮುನಿಯಪ್ಪ, ಶಾಸಕ ರಿಜ್ವಾನ್ ಅರ್ಷದ್, ಮಾಜಿ ಸಂಸದ ವಿ.ಎಸ್. ಉಗ್ರಪ್ಪ, ಮಾಜಿ ಸಚಿವ ಹೆಚ್. ಆಂಜನೇಯ, ಶಾಸಕರಾದ ಅಶೋಕ್ ಪಟ್ಟಣ್, ಡಾ. ಅಜಯ್‌ಸಿಂಗ್ ಮತ್ತಿತರರು ಇದ್ದಾರೆ.

## ರಾಷ್ಟ್ರಪತಿ ಅವರಿಗೆ ಬರೆದ ಮನವಿ ಪತ್ರ ಗ್ರೇಡ್–2 ತಹಸೀಲ್ದಾರ್ ಗೀತಾ ರವರಿಗೆ ಗಣಪತಿ ಅಷ್ಟೋರೆ ಮನವಿ ಪತ್ರ ಸಲ್ಲಿಕೆ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ನ್ಯಾಯಮೂರ್ತಿ ಬಿ.ಆರ್.ಗವಾಯಿ ಅವರ ಮೇಲೆ ಹಲ್ಲೆಗೆ ಮುಂದಾದ ವಕೀಲನ ವಿರುದ್ಧ ಸೂಕ್ತ ಕ್ರಮ ಹಾಗೂ ಉತ್ತರ ಪ್ರದೇಶದ ಹರಿ ಓಂ ವಾಲ್ಮೀಕಿ ಕೊಲೆಗೈದ ಆರೋಪಿಗಳ ಬಂಧನಕ್ಕೆ ಆಗ್ರಹಿಸಿ, ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಭಾರತೀಯ ದಲಿತ ಪ್ಯಾಂತರ ಸಂಘಟನೆಯಿಂದ ಪ್ರತಿಭಟನೆ ನಡೆಸಿ, ರಾಷ್ಟ್ರಪತಿ ಅವರಿಗೆ ಬರೆದ ಮನವಿ ಪತ್ರ ಗ್ರೇಡ್–2 ತಹಸೀಲ್ದಾರ್ ಗೀತಾ ಅವರಲ್ಲಿ ಸಲ್ಲಿಸಲಾಯಿತು.

ಭಾರತೀಯ ದಲಿತ ಪ್ಯಾಂಥರ್ ಸಂಘಟನೆ ಅಧ್ಯಕ್ಷ ಗಣಪತಿ ಅಷ್ಟೋರೆ ಮಾತನಾಡಿ, ಸಂವಿಧಾನದ ಘನತೆ ಹೆಚ್ಚಿಸುವ ನಾಗರಿಕ ಸಮಾಜದ ವಕೀಲನೊಬ್ಬ ಅನಾಗರಿಕನಂತೆ ವರ್ತಿಸಿ, ನ್ಯಾಯಮೂರ್ತಿಗಳಿಗೆ ಅಪಮಾನ ಮಾಡುವ ಕೆಲಸ ಮಾಡಿದ್ದಾನೆ. ಹೀಗಾಗಿ ವಕೀಲನ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಭೀಮ್ ಆರ್ಮಿ ಸಂಘಟನೆ ತಾಲೂಕ ಅಧ್ಯಕ್ಷ ಮನೋಜ ಜಾನವೀರ ಮಾತನಾಡಿ, ಉತ್ತರ ಪ್ರದೇಶದಲ್ಲಿ ಹರಿ ಓಂ ವಾಲ್ಮೀಕಿ ಎನ್ನುವರು ಇತ್ತಿಚೆಗೆ ಕೊಲೆಯಾಗಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಕೂಡಲೇ ಆರೋಪಿಗಳನ್ನು ಬಂಧಿಸಿ, ಕಾನೂನು ಚೌಕಟ್ಟಿನಲ್ಲಿ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಭಾರತೀಯ ದಲಿತ ಪ್ಯಾಂಥರ್ ಜಿಲ್ಲಾಧ್ಯಕ್ಷ ವೈಜಿನಾಥ ಸಿಂಧೆ, ಭಾರತೀಯ ದಲಿತ ಪ್ಯಾಂತರ್ ಉಪಾಧ್ಯಕ್ಷ ಸಿದ್ಧಾರ್ಥ ಜಾನವೀರ, ಅನಂತ ಮಾಳಗೆ, ವಿಶಾಲ ಸಿಂಧನಕೇರಾ, ಶೇಖ್ ಫಿರದೋಸ್, ಎಂ.ಡಿ. ಬಾಬಾ ಪಟೇಲ್, ತೈಯಬ್ ನಂದನ್, ಲಕ್ಷ್ಮಣರಾವ ಜಾನವೀರ, ರಾಹುಲ್ ಓತಗಿ, ವಿಠಲ್ ಶಿವನಾಯಕ, ಆಕಾಶ ಮೇಟಿ, ಸಿದ್ಧಾರ್ಥ ಡಾಂಗೆ, ಶಿವಾಜಿ, ಆಕಾಶ ಭಾಗ್ಯಕರ್, ರಾಹುಲ್ ಚಿಟಗುಪ್ಪಕರ್, ಧಶರಥ ದಂಡೆಕರ್, ರಾಹುಲ್ ಬೋತಗಿ ಸೇರಿ ಅನೇಕರಿದ್ದರು.

## ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಗೆ ಸೇರಲು ನಮೂನೆ 19ರಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಿ: ಸುರೇಶ ವರ್ಮಾ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 09– ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಸಿದ್ದಪಡಿಸಲಾಗುತ್ತಿರುವ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಇರುವ ಮತದಾರರು ಸಹ ನಮೂನೆ 19ರಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಬೇಕಿರುತ್ತದೆ ಎಂದು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಸಹಾಯಕ ಮತದಾರರ ನೋಂದಣಾಧಿಕಾರಿಗಳು ಆಗಿರುವ ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ತಿಳಿಸಿದ್ದಾರೆ.

ಅರ್ಜಿ ನಮೂನೆ 19ರಲ್ಲಿ ಅರ್ಜಿ ಸ್ವೀಕರಿಸಲು 2025ರ ನವಂಬರ್ 06 ಕೊನೆಯ ದಿನಾಂಕ ಆಗಿರುತ್ತದೆ. 2025ರ ನವಂಬರ್ 25ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು. ಹಕ್ಕು ಮತ್ತು ಆಕ್ಷೇಪಣೆಗಳಿಗೆ 2025ರ ನವಂಬರ್ 25ರಿಂದ 2025ರ ಡಿಸೆಂಬರ್ 10ರವರೆಗೆ ಕಾಲಾವಕಾಶ ನೀಡಲಾಗಿದೆ. 2025ರ ಡಿಸೆಂಬರ್ 30ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಣೆ ಮಾಡಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

ಭಾರತದ ಪ್ರಜೇಯಾಗಿರುವ ಆಯಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಾಮಾನ್ಯ ನಿವಾಸಿಯಾಗಿರುವ ಹಾಗೂ ದಿನಾಂಕ:01–11–2025 ಮೊದಲ 6 ವರ್ಷಗಳ ಅವಧಿಯಲ್ಲಿ ಸೆಕೆಂಡರಿ ದರ್ಜೆಯಲ್ಲಿ ಪ್ರೌಢ ಶಾಲೆಗಿಂತ ಕಡಿಮೆ ಇಲ್ಲದ ನಿರ್ಧಿಷ್ಟಪಡಿಸಿದಂತಹ ರಾಜ್ಯದೊಳಗಿನ ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದ ಶೈಕ್ಷಣಿಕ ಸಂಸ್ಥೆಗಳಲ್ಲಿ ಒಟ್ಟು ಕನಿಷ್ಟ 03 ವರ್ಷ ಬೋಧನಾ ವೃತ್ತಿಯಲ್ಲಿ ನಿರತವಾಗಿರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹನಾಗಿರುತ್ತಾನೆ. ಹಾಗೆ ನಿರ್ಧಿಷ್ಟಪಡಿಸಿದ ಶೈಕ್ಷಣಿಕ ಸಂಸ್ಥೆಗಳ ಪಟ್ಟಿಯು ಮೊದಲನೇ ಅನುಸೂಚಿಯಲ್ಲಿ ತಿಳಿಸಲಾದ ಅಧಿಕಾರಿಗಳ ಬಳಿ ಇರುತ್ತದೆ.

ಖುದ್ದಾಗಿ ಅಥವಾ ಅಂಚೆ ಮುಖಾಂತರ ಒಟ್ಟಾರೆಯಾಗಿ ಸಲ್ಲಿಸಿದ ಅರ್ಜಿಗಳನ್ನು ಮತದಾರರ ನೋಂದಣಾಧಿಕಾರಿಯು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗಾಗಿ ಪರಿಗಣಿಸತಕ್ಕದ್ದಲ್ಲ. ಆದರೆ ಸಂಸ್ಥೆಯ ಮುಖ್ಯಸ್ಥರು ಅವರ ಸಿಬ್ಬಂದಿಯವರ ಎಲ್ಲಾ ಅರ್ಜಿಗಳನ್ನು ಒಟ್ಟಾಗಿ ಮತದಾರರ ನೋಂದಣಾಧಿಕಾರಿಗಳಿಗೆ ಕಳುಹಿಸಬಹುದು. ಒಂದೇ ಕುಟುಂಬದ ಎಲ್ಲಾ ಸದಸ್ಯರು ನಮೂನೆ 19 ರಲ್ಲಿ ಅರ್ಜಿಗಳನ್ನು ಕುಟುಂಬ ಯಾವುದಾದರೂ ಸದಸ್ಯರು ಸಲ್ಲಿಸಬಹುದು ಹಾಗೂ ಪ್ರತಿ ಸದಸ್ಯನಿಗೆ ಸಂಬಧಿಸಿದಂತೆ ಸಂಸ್ಥೆ ಮೂಲ ಪ್ರಮಾಣ ಪತ್ರಗಳನ್ನು ಒದಗಿಸಿ. ಪ್ರಮಾಣ ಪತ್ರವನ್ನು ಪರಿಶೀಲಿಸಿಕೊಳ್ಳಬೇಕು. ಅರ್ಜಿಯಲ್ಲಿನ ತಪ್ಪು ಅಥವಾ ತಪ್ಪೆಂದು ಅವನು ತಿಳಿದಿರುವ ಅಥವಾ ನಂಬುವಂತಹ ಅಥವಾ ಸತ್ಯವೆಂದು ನಂಬಲಾಗದಿರುವಂತಹ ಹೇಳಿಕೆಗಳನ್ನು ಅಥವಾ ಘೋಷಣೆಗಳನ್ನು ಮಾಡುವ ಯಾವುದೇ ವ್ಯಕ್ತಿಯನ್ನು ಪ್ರಜಾಪ್ರಾತಿನಿಧ್ಯ ಅಧಿನಿಯಮ 1950 ರ 31 ನೇ ಪ್ರಕರಣದ ಮೇರೆಗೆ ಶಿಕ್ಷೆಗೆ ಗುರಿಪಡಿಸಲಾಗುವುದು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಬಯಸುವ ಪ್ರತಿಯೊಬ್ಬರು ಅರ್ಜಿ ನಮೂನೆ 19 ನ್ನು ಭರ್ತಿಮಾಡಿ ಅದರೊಂದಿಗೆ ಶೈಕ್ಷಣಿಕ ಸಂಸ್ಥೆಗಳಲ್ಲಿ 1 ನೇ ನವೋಂಬರ್ 2025ಕ್ಕೆ ಮೊದಲು 6 ವರ್ಷಗಳ ಅವಧಿಯಲ್ಲಿ ಒಟ್ಟು ಕನಿಷ್ಟ 3 ವರ್ಷ ಭೋದನಾ ವೃತ್ತಿಯಲ್ಲಿ ನಿತವಾಗಿರುವ ಬಗ್ಗೆ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ – 2 ರಲ್ಲಿ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.

ಯಾವುದೇ ವ್ಯಕ್ತಿ ಅಂಚೆ ಮೂಲಕ ಮತದಾರರ ನೋಂದಣಾಧಿಕಾರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿಗಳು. ಗೊತ್ತುಪಡಿಸಿದ ಅಧಿಕಾರಿಗೆ ಸಲ್ಲಿಸಿದಲ್ಲಿ ಅಂತಹ ಅರ್ಜಿದಾರರಿಗೆ ಗೊತ್ತುಪಡಿಸಿದ ಅಧಿಕಾರಿಯು ವಿಚಾರಣೆಗೆ ಹಾಜರಾಗಲು ನೋಟಿಸ್ ನೀಡುತ್ತಾರೆ. ವಿಚಾರಣೆಗೆ ಹಾಜರಾಗದೇ ಅಥವಾ ದಾಖಲೆಗಳನ್ನು ಹಾಜರು ಪಡಿಸದಿದ್ದಲ್ಲಿ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ.

ಬಲ್ಕ (ಗುಚ್ಛಗಳಲ್ಲಿ) ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.

ಕರ್ನಾಟಕ ಈಶಾನ್ಯ ಶಿಕ್ಷಕರ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳು ಇದ್ದಲ್ಲಿ ಮತದಾರರ ನೊಂದಣಾಧಿಕಾರಿಗಳು ಹಾಗೂ ಸಹಾಯಕ ಮತದಾರರ ನೊಂದಣಾಧಿಕಾರಿಗಳ ಕಚೇರಿಯಲ್ಲಿ ಮತ್ತು ಸಂಬಂಧಪಟ್ಟ ವಿಧಾನಸಭಾ ಮತಕ್ಷೇತ್ರದ ಸಹಾಯಕ ಮತದಾರರ ನೊಂದಣಾಧಿಕಾರಿಗಳ ಕಾರ್ಯಾಲಯದಲ್ಲಿ (ಮಹಾನಗರ ಪಾಲಿಕೆ ಹಾಗೂ ತಹಸೀಲ ಕಾರ್ಯಾಲಯದಲ್ಲಿ) ನಿಗದಿಪಡಿಸಿದ ಕಾಲಮಿತಿಯೊಳಗ ಸಲ್ಲಿಸತಕ್ಕದ್ದು. ಅರ್ಹ ಶಿಕ್ಷಕರು ಹೆಚ್ಚಿನ ಆಸಕ್ತಿ ವಹಿಸಿ ಈ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡು ಸುಭದ್ರ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕೆಂದು ಅರ್ಹ ಮತದಾರರಲ್ಲಿ ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪೆಟ್ರೋಲ್ ಬಂಕ್ ಕೆಲಸಗಾರನ ಕೊಲೆಗೆ ಯತ್ನ: ಮೂವರು ಆರೋಪಿಗಳ ಬಂಧನ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.9–ನಗರದ ಆಳಂದ ರಸ್ತೆಯ ವಿಶ್ವಾರಾಧ್ಯ ಗುಡಿ ಹತ್ತಿರವಿರುವ ಪೆಟ್ರೋಲ್ ಬಂಕ್‌ನಲ್ಲಿ ಪೆಟ್ರೋಲ್ ತುಂಬಿಸಿಕೊಳ್ಳುವ ನೆಪದಲ್ಲಿ ಐವರು ಅಲ್ಲಿ ಕೆಲಸ ಮಾಡುತ್ತಿದ್ದ ಯುವಕನೊಂದಿಗೆ ಜಗಳ ತೆಗೆದು ಚಾಕುವಿನಿಂದ ಇರಿದು ಕೊಲೆಗೆ ಯತ್ನಿಸಿದ ಪ್ರಕರಣ–ಕ್ಕೆ ಸಂಬಂಧಿಸಿದಂತೆ ಸಬ್–ಅರ್ಬನ್ ಪೊಲೀಸರು ಮೂವರು ಆರೋಪಿಗಳನ್ನು ಬಂಧಿಸಿದ್ದಾರೆ. ನಗರದ ನ್ಯೂ ರಾಘವೇಂದ್ರ ಕಾಲೋನಿಯ ವಿನೋದ ಅಲಿಯಾಸ್ ಚಾಕಲೇಟ್ ವಿನ್ಯಾ ತಂದೆ ಬಾಪು ಪಾಟೀಲ (18), ಭೂಪಾಲ್ ತೆಗನೂರ ಗ್ರಾಮದ ನಾಗೇಶ್ ತಂದೆ ವಿಠ್ಠಲರಾವ ಕಟ್ಟಿಮನಿ (19), ರಾಮತೀರ್ಥ ನಗರದ ವಿನೋದ ಅಲಿಯಾಸ್ ಟೈಗರ್ ವಿನೋದ ತಂದೆ ತಾಯಪ್ಪ ದಂಡಗುಲೆ (19) ಎಂಬುವವರನ್ನು ಬಂಧಿಸಿ ಕೃತ್ಯಕ್ಕೆ ಉಪಯೋಗಿಸಿದ ಆಯುಧ, 2 ಬೈಕ್ ಜಪ್ತಿ ಮಾಡಿ ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ತಲೆ ಮರೆಸಿಕೊಂಡಿರುವ ಇನ್ನಿಬ್ಬರು ಆರೋಪಿಗಳ ಪತ್ತೆಗೆ ಜಾಲ ಬೀಸಿದ್ದಾರೆ. ಇತ್ತೀಚೆಗೆ ನಗರದ ಆಳಂದ ರಸ್ತೆಯ ವಿಶ್ವಾರಾಧ್ಯ ಗುಡಿ ಹತ್ತಿರವಿರುವ ಪೆಟ್ರೋಲ್ ಬಂಕ್‌ನಲ್ಲಿ ಪೆಟ್ರೋಲ್ ತುಂಬಿಸಿಕೊಳ್ಳುವ ನೆಪದಲ್ಲಿ ಐವರು ಅಲ್ಲಿ ಕೆಲಸ ಮಾಡುತ್ತಿದ್ದ ಯುವಕನೊಂದಿಗೆ ಜಗಳ ತೆಗೆದು ಚಾಕುವಿನಿಂದ ಇರಿದು ಕೊಲೆಗೆ ಯತ್ನಿಸಿದ್ದರು. ಈ ಸಂಬಂಧ ಸಬ್–ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಆರೋಪಿಗಳ ಪತ್ತೆಗೆ ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್.ನಾಯಕ್ ಅವರ ಮಾರ್ಗದರ್ಶನದಲ್ಲಿ ಸಬ್–ಅರ್ಬನ್ ಉಪ ವಿಭಾಗದ ಎಸಿಪಿ ಡಿ.ಜಿ.ರಾಜಣ್ಣ, ಪಿಐ ಸಂತೋಷ ಎಲ್.ತಟ್ಟೆಪಳ್ಳಿ, ಸಿಸಿಬಿ ಘಟಕದ ಪಿಐ ದಿಲೀಪ್ ಸಾಗರ್ ನೇತೃತ್ವದಲ್ಲಿ ಮತ್ತು ಪಿಎಸ್ಐ ಬಸವರಾಜ, ಸಿಬ್ಬಂದಿಗಳಾದ ಭೀಮ ನಾಯಕ, ಮಂಜುನಾಥ, ಅಶೋಕ, ಪ್ರಭಾಕರ, ಶಿವಲಿಂಗ, ಯಲ್ಲಪ್ಪ ಪೂಜಾರಿ ಅವರನ್ನು ಒಳಗೊಂಡ ಪ್ರತ್ಯೇಕ ತಂಡಗಳನ್ನು ರಚಿಸಲಾಗಿತ್ತು. ಈ ತಂಡಗಳು ತನಿಖೆ ನಡೆಸಿ ಮೂವರು ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸುವಲ್ಲಿ ಯಶಸ್ವಿಯಾಗಿವೆ. ಆರೋಪಿಗಳನ್ನು ಪತ್ತೆ ಹಚ್ಚುವಲ್ಲಿ ಯಶಸ್ವಿಯಾಗಿರುವ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯವನ್ನು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ಶ್ಲಾಘಿಸಿದ್ದಾರೆ.

## ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಕಾರ್ಯಕ್ರಮ ಅ.13ಕ್ಕೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 09: ಕಾರ್ಮಿಕ ಇಲಾಖೆಯಿಂದ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಹಾಗೂ ಸಾರಿಗೆ ಇಲಾಖೆ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ, ರಾಯಚೂರು ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲೆಯ ವಿವಿಧ ವರ್ಗದ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ವಿವಿಧ ಯೋಜನೆಗಳ ಕುರಿತು ಅರಿವು ಕಾರ್ಯಕ್ರಮವನ್ನು ಅಕ್ಟೋಬರ್ 13ರ ಬೆಳಿಗ್ಗೆ 11 ಗಂಟೆಗೆ ನಗರದ ಗಂಜ್ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಕಾರ್ಮಿಕ ಸಚಿವರು ಮತ್ತು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರು ಘನ ಉಪಸ್ಥಿತಿ ವಹಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಗೌರವ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಾರ್ಮಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ಮೊಹಮ್ಮದ್ ಮೊಹಸಿನ್, ಕಾರ್ಮಿಕ ಆಯುಕ್ತರು ಹಾಗೂ ರಾಜ್ಯ ವಿಮಾ ಯೋಜನಾ ವೈದ್ಯಕೀಯ ಸೇವೆಗಳು ಆಯುಕ್ತರಾದ ಡಾ.ಎಚ್. ಎನ್. ಗೋಪಾಲಕೃಷ್ಣ, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಭಾರತಿ ಡಿ, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ ಎಂದು ಕಾರ್ಮಿಕ ಇಲಾಖೆಯ ಪ್ರಕಟಣೆಯಲ್ಲಿ ತಿಳಿಸಿದೆ.

# ಬಳ್ಳಾರಿ: ಬೆಂಬಲ ಯೋಜನೆಯಡಿ ಸೂರ್ಯಕಾಂತಿ, ಶೇಂಗಾ ಉತ್ಪನ್ನ ಖರೀದಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.09-ಜಿಲ್ಲೆಯಲ್ಲಿ ಬೆಂಬಲ ಬೆಲೆ ಯೋಜನೆಯಡಿ 2025-26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಬೆಳೆದ ಸೂರ್ಯಕಾಂತಿ ಮತ್ತು ಶೇಂಗಾ ಉತ್ಪನ್ನ ಖರೀದಿಸಲಾಗುವುದು ಎಂದು ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿಯ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ನಾಗೇಂದ್ರಪ್ರಸಾದ್.ಕೆ ಅವರು ತಿಳಿಸಿದ್ದಾರೆ.



**ಸೂರ್ಯಕಾಂತಿ:**

ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿ ಉತ್ಪನ್ನವನ್ನು ಕೇಂದ್ರಸರ್ಕಾರ ನಿಗಧಿಪಡಿಸಿದ ಬೆಂಬಲ ಬೆಲೆ ಪ್ರತಿ ಕ್ವಿಂಟಾಲ್‌ಗೆ ರೂ.7,721 ರಂತೆ ರೈತರಿಂದ ಖರೀದಿಸಲಾಗುವುದು.

ನಗರದ ಎಪಿಎಂಸಿ ಯಾರ್ಡ್‌ನ ಎಪಿಎಂಸಿ ಆಡಳಿತ ಕಚೇರಿಯಲ್ಲಿ ಖರೀದಿ ಕೇಂದ್ರ ಆರಂಭಿಸಲಾಗಿದ್ದು, ಕರ್ನಾಟಕ ಸಹಕಾರ ಎಣ್ಣೇ ಬೀಜ ಬೆಳೆಗಾರರ ಮಾರಾಟ ಮಹಾ ಮಂಡಳಿ ನಿಯಮಿತ ಬಳ್ಳಾರಿ ಶಾಖೆಯು ಖರೀದಿ ಏಜೆನ್ಸಿಯಾಗಿದೆ.

**ಶೇಂಗಾ:**

ಎಫ್.ಎ.ಕ್ಯೂ ಗುಣಮಟ್ಟದ ಶೇಂಗಾ ಉತ್ಪನ್ನವನ್ನು ಕೇಂದ್ರ ಸರ್ಕಾರ ನಿಗಧಿಪಡಿಸಿದ ಬೆಂಬಲ ಬೆಲೆ ಪ್ರತಿ ಕ್ವಿಂಟಾಲ್ ಗೆ ರೂ.7,263 ರಂತೆ ರೈತರಿಂದ ಖರೀದಿಸಲಾಗುವುದು.

ನಗರದ ಎಪಿಎಂಸಿ ಯಾರ್ಡ್‌ನ ಎಪಿಎಂಸಿ ಆಡಳಿತ ಕಚೇರಿ ಮತ್ತು ಸಂಡೂರು ಪಟ್ಟಣದ ವಿಜಯ ವೃತ್ತದ ರೈತರ ಸೇವಾ ಸಹಕಾರ ಬ್ಯಾಂಕ್ ಇಲ್ಲಿ ಖರೀದಿ ಕೇಂದ್ರ ಆರಂಭಿಸಲಾಗಿದ್ದು, ಕರ್ನಾಟಕ ಸಹಕಾರ ಎಣ್ಣೇ ಬೀಜ ಬೆಳೆಗಾರರ ಮಾರಾಟ ಮಹಾ ಮಂಡಳಿ ನಿಯಮಿತ ಬಳ್ಳಾರಿ ಶಾಖೆಯು ಖರೀದಿ ಏಜೆನ್ಸಿಯಾಗಿದೆ.

ಮಾಹಿತಿಗಾಗಿ ಶಿವಮೂರ್ತಿ ಡಿ.ಹೆಚ್-ಮೊ.8722047273 ಗೆ ಸಂಪರ್ಕಿಸಬಹುದು.

*ಬೇಕಾದ ದಾಖಲೆ:*

2025-26ನೇ ಸಾಲಿನ ಪಹಣಿ ಪತ್ರ. ರೈತರು ತಮ್ಮ ಹೆಸರನ್ನು ಫ್ರೂಟ್ಸ್ ತಂತ್ರಾಂಶದಲ್ಲಿ ನೋಂದಾಯಿಸಿರಬೇಕು ಹಾಗೂ ಎಫ್‌ಐಡಿ ಪಡೆಯುವುದು ಕಡ್ಡಾಯ. ರೈತರಲ್ಲಿ ಫ್ರೂಟ್ಸ್ ಐಡಿ ಇಲ್ಲದೇ ಇದ್ದಲ್ಲಿ ಅಥವಾ ಫ್ರೂಟ್ಸ್ ನಲ್ಲಿ ಯಾವುದಾದರು ತಾಂತ್ರಿಕ ದೋಷವಿದ್ದಲ್ಲಿ ರೈತರು ಕೃಷಿ ಇಲಾಖೆ ಕಚೇರಿಗೆ ಸಂಪರ್ಕಿಸಿ ಅವಶ್ಯಕ ಮಾಹಿತಿ ಪಡೆದು ಸಲ್ಲಿಸಬೇಕು.

ಆಧಾರ್ ಕಾರ್ಡ್ (ಮೂಲ ಪ್ರತಿ). ಬ್ಯಾಂಕ್ ಖಾತೆ (ಆಧಾರ್ ಕಾರ್ಡ್ ನೊಂದಿಗೆ ಜೋಡಣೆಗೊಂಡ) ಪುಸ್ತಕದ ನಕಲು ಪ್ರತಿ. ಒಣಗಿದ ಹಾಗೂ ಸ್ವಚ್ಛ ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿ ಮತ್ತು ಶೇಂಗಾ ಉತ್ಪನ್ನವನ್ನು ಮಾರಾಟಕ್ಕಾಗಿ ಕೇಂದ್ರಕ್ಕೆ ತರುವುದು. ಖರೀದಿ ಕೇಂದ್ರಗಳಲ್ಲಿ ರೈತರು ತಮ್ಮ ಹೆಸರುಗಳನ್ನು 80 ದಿನಗಳೊಳಗಾಗಿ ನೋಂದಾಯಿಸಿಕೊಳ್ಳಬೇಕು.

ನಿಗಧಿತ ಅವಧಿಯೊಳಗೆ ನೋಂದಣಿಗೊಂಡ ರೈತರಿಂದ ಪ್ರತಿ ಎಕರೆಗೆ 04 ಕ್ವಿಂಟಾಲ್ ಸೂರ್ಯಕಾಂತಿ ಉತ್ಪನ್ನವನ್ನು ಗರಿಷ್ಠ 20 ಕ್ವಿಂಟಾಲ್ ವರೆಗೆ ಖರೀದಿಸಲಾಗುವುದು ಮತ್ತು ಪ್ರತಿ ಎಕರೆಗೆ 03 ಕ್ವಿಂಟಾಲ್ ಶೇಂಗಾ ಉತ್ಪನ್ನವನ್ನು ಗರಿಷ್ಠ 15 ಕ್ವಿಂಟಾಲ್ ವರೆಗೆ ಮಾತ್ರ 90 ದಿನಗಳವರೆಗೆ ಖರೀದಿಸಲಾಗುವುದು.

ಕಚೇರಿ ಕೆಲಸದ ವೇಳೆಯಲ್ಲಿ ಮಾತ್ರ ಖರೀದಿಸಲಾಗುವುದು. ಸರ್ಕಾರಿ ರಜೆ ದಿನಗಳನ್ನು ಹೊರತುಪಡಿಸಿ ಉಳಿದ ದಿನಗಳಲ್ಲಿ ಖರೀದಿಸಲಾಗುವುದು.

ಯಾವುದೇ ಸಂದರ್ಭದಲ್ಲಿ ರೈತರು ಮಧ್ಯವರ್ತಿಗಳ ಮೊರೆ ಹೋಗಬಾರದು. ರೈತರೇ ನೇರವಾಗಿ ಇದರ ಸದುಪಯೋಗ ಪಡೆಯಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರಾದ ಈಶ್ವರ ಬಿ.ಖಂಡ್ರೆ ಬಳ್ಳಾರಿಗೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.09-ಅರಣ್ಯ,ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಅ.10 ರಂದು ಬಳ್ಳಾರಿಗೆ ಆಗಮಿಸಲಿದ್ದಾರೆ.



ಅ.10 ರಂದು ಬೆಂಗಳೂರಿನಿಂದ ರಸ್ತೆ ಮೂಲಕ ಬಳ್ಳಾರಿಗೆ ಆಗಮಿಸಿ, ಬೆಳಿಗ್ಗೆ 10 ಗಂಟೆಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸರ್ಕಾರಿ (ಮಾ.ಪು) ಪದವಿಪೂರ್ವ ಕಾಲೇಜು ಮೈದಾನದಲ್ಲಿ ಏರ್ಪಡಿಸಿರುವ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ 50ನೇ ವರ್ಷದ "ಸುವರ್ಣ ಮಹೋತ್ಸವ"ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಬಳಿಕ ಮಧ್ಯಾಹ್ನ 01 ಗಂಟೆಗೆ ಬಳ್ಳಾರಿಯಿಂದ ರಸ್ತೆ ಮೂಲಕ ಪ್ರಯಾಣ ಹೊಸಪೇಟೆಗೆ ತೆರಳಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

# ಅ.13 ರಂದು ತಾಲ್ಲೂಕು ಮಟ್ಟದ ಸಮನ್ವಯ ಮತ್ತು ಪ್ರಗತಿ ಪರಿಶೀಲನಾ ಸಮಿತಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.09-ಬಳ್ಳಾರಿ ತಾಲ್ಲೂಕಿನಲ್ಲಿ ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ-2005ರ ಪರಿಣಾಮಕಾರಿ ಅನುಷ್ಠಾನ ಕುರಿತು ಬಳ್ಳಾರಿ ತಾಲ್ಲೂಕು ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ಅ.13 ರಂದು ಸಂಜೆ 04 ಗಂಟೆಗೆ ಬಳ್ಳಾರಿ ತಾಲ್ಲೂಕು ತಹಶೀಲ್ದಾರರ ಕಚೇರಿ ಸಭಾಂಗಣದಲ್ಲಿ ತಾಲ್ಲೂಕು ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿ ಸಭೆ ಏರ್ಪಡಿಸಲಾಗಿದೆ ಎಂದು ಕೌಟುಂಬಿಕ ದೌರ್ಜನ್ಯ ತಡೆ ಕಾಯ್ದೆ ಸಮಿತಿಯ ಸದಸ್ಯ ಕಾರ್ಯದರ್ಶಿಯೂ ಆದ ಬಳ್ಳಾರಿ ಗ್ರಾಮಾಂತರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ತಿಳಿಸಿದ್ದಾರೆ.

# ಶೂ ಎಸೆದ ಘಟನೆ ತಪ್ಪಿತಸ್ಥ ವಕೀಲನಿಗೆ ಉಗ್ರ ಶಿಕ್ಷೆಗೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.09:ಸುಪ್ರೀಂಕೋರ್ಟಿನ ಮುಖ್ಯ ನ್ಯಾಯಾಧೀಶರಾದ ಬಿ ಅರ್ ಗವಾಯಿ ಇವರಿಗೆ ಶೂ ಎಸೆಯಲಿಕ್ಕೆ ಪ್ರಯತ್ನಿಸಿದಂತ ವಕೀಲನ ಮೇಲೆ ಸ್ವಯಂ ಪ್ರೇರಿತವಾಗಿ ರಾಷ್ಟ್ರ ದ್ರೋಹಿ ಪ್ರಕರಣ ದಾಖಲಿಸಿಕೊಂಡು ಜೀವಾವಧಿ ಶಿಕ್ಷೆಗೆ ಒಳಪಡಿಸುವಂತೆ ಛಲವಾದಿ ಮಹಾಸಭಾ (ರಿ) ಬಳ್ಳಾರಿ ಜಿಲ್ಲಾ ಸಮಿತಿ ಆಗ್ರಹಿಸಿದ್ದು, ಈ ಕುರಿತು ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿಗಳಿಗೆ ಮನವಿಪತ್ರ ಸಲ್ಲಿಸಿದೆ.

ಸುಪ್ರೀಂ ಕೋರ್ಟಿನ ಮುಖ್ಯ ನ್ಯಾಯಮೂರ್ತಿ ಬಿ.ಆರ್ ಗವಾಯಿ ಅವರ ಮೇಲೆ ನಾಲಾಯಕ ಕಿಶೋರ್ ರಾಕೇಶ್ ಶೂ ಎಸೆತದಂಹ ಈ ಘಟನೆಯಿಂದ ಇಡೀ ಭಾರತ ದೇಶದ ನಾಗರಿಕರಿಗೆ ಎಸೆದಂತೆ ಆದ್ದರಿಂದ ಭಾರತೀಯರಾದ ನಾವುಗಳು ಇದನ್ನು ಪ್ರಬಲವಾಗಿ ವಿರೋಧಿಸಬೇಕಾಗಿದೆ ಭಾರತ ಸರ್ಕಾರ ತಕ್ಷಣವೇ ಆರೋಪಿ ವಕೀಲ ಕಿಶೋರ ರಾಕೇಶ ಇತನನ್ನು ದೇಶ ದ್ರೋಹಿ ಎಂದು ಘೋಷಿಸಿ ಸ್ವಯಂ ಪ್ರೇರಿತವಾಗಿ ಪ್ರಕರಣ ದಾಖಲಿಸಿಕೊಂಡು ಜೀವವಾದಿ ಶಿಕ್ಷೆವಿಧಿಸಬೇಕೆಂದು ಒತ್ತಾಯಿಸಿದೆ. ಮನವಿಪತ್ರ ಸಲ್ಲಿಸಿದ ಸಂದರ್ಭದಲ್ಲಿ ಛಲವಾದಿ ಮಹಾಸಭಾ (ರಿ) ಬಳ್ಳಾರಿ ಜಿಲ್ಲಾ ಸಮಿತಿ ಅಧ್ಯಕ್ಷ ಸಿ ಶಿವಕುಮಾರ, ಕರ್ನಾಟಕ ದಲಿತ ರಕ್ಷಣಾ ವೇದಿಕೆ ಜಿಲ್ಲಾ ಕಾರ್ಯಾಧ್ಯಕ್ಷ ಸಿ ಹನುಮೇಶ್ ಕಟ್ಟಿಮನಿ ,ಕರ್ನಾಟಕ ದಲಿತ ರಕ್ಷಣಾ ವೇದಿಕೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆಶಂಕರ್ ನಂದಿಹಾಳ, ಛಲವಾದಿ ಮಹಾಸಭಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ

ಛಲವಾದಿ ಲೋಕೇಶ್ ಕಪಗಲ್, ಛಲವಾದಿ ಮಹಾಸಭಾ ಜಿಲ್ಲಾ ಉಪಾಧ್ಯಕ್ಷರು ಮಾನಯ್ಯ ಬಿ ಗೋನಾಳ,ಛಲವಾದಿ ಮುಖಂಡ ಮಲ್ಲಿಕಾರ್ಜುನ ಡಿ ಗೋನಾಳ, ರವಿ ಯುವ ಮುಖಂಡರು ಉಪಸ್ಥಿತರಿದ್ದರು.

# ಅ.14 ರಂದು ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕುರಿತು ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.09-ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ಅ.23 ರಂದು ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಆಚರಣೆ ಕುರಿತು ಚರ್ಚಿಸಲು ಅ.14 ರಂದು ಸಂಜೆ 4.30 ಗಂಟೆಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಏರ್ಪಡಿಸಲಾಗಿದೆ.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಅಧ್ಯಕ್ಷತೆ ವಹಿಸುವರು.

ಸಭೆಗೆ ಸಮುದಾಯದ ಮುಖಂಡರು, ಜಿಲ್ಲಾ ಮಟ್ಟದ ಅಧಿಕಾರಿಗಳು ತಪ್ಪದೇ ಹಾಜರಾಗಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

# ಶಾಂತಿ ಮಾತುಕತೆ ಚುರುಕಿಗೆ ಟ್ರಂಪ್ ಸಲಹೆ

ಮಲ್ಲಮ್ಮ ನುಡಿ ವಾರ್ತೆ



ವಾಷಿಂಗ್ಟನ್,-ಇಸ್ರೇಲ್-ಗಾಜಾ ನಡುವೆ ಶಾಂತಿ ಮಾತುಕತೆಗಳು ಪ್ರಾರಂಭವಾಗುತ್ತಿದ್ದಂತೆ ಮಧ್ಯವರ್ತಿಗಳು ವೇಗವಾಗಿ ಕಾರ್ಯಪ್ರವೃತ್ತರಾಗಬೇಕು ಎಂದು ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

# ಕಲ್ಯಾಣ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಪ್ರತಿನಿಧಿ ಮಂಡಳಿಯು ಕಲಬುರಗಿ ಜಿಲ್ಲಾ ಲೀಡ್ ಬ್ಯಾಂಕ್ ಮ್ಯಾನೇಜರ್ ಅವರನ್ನು ಭೇಟಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಹೊಸ 'ಸೇಮ್ ಡೇ ಚೆಕ್ ಕ್ಲಿಯರಿಂಗ್ ಸಿಸ್ಟಮ್' ಅಡಿಯಲ್ಲಿ ಚೆಕ್‌ಗಳ ಕ್ಲಿಯರಿಂಗ್‌ನಲ್ಲಿ ಆಗುತ್ತಿರುವ ವಿಳಂಬದ ಬಗ್ಗೆ ಕೆಕೆಸಿಸಿಐ ಚಿಂತೆಯನ್ನು ವ್ಯಕ್ತಪಡಿಸಿದೆ ಟ್ಯಾಗ್‌ಲೈನ್: "ಕೆಕೆಸಿಸಿಐ 'ಸೇಮ್ ಡೇ ಚೆಕ್ ಕ್ಲಿಯರಿಂಗ್' ಕ್ರಮವನ್ನು ಬೆಂಬಲಿಸಿ, ಭೂಮಿಯ ಮಟ್ಟದಲ್ಲಿ ಪರಿಣಾಮಕಾರಿ ಜಾರಿಗೆ ಒತ್ತಾಯಿಸಿದೆ."

ಕಲ್ಯಾಣ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಂಡಳಿ (ಏಏಅಅಖ)ಯ ಪ್ರತಿನಿಧಿ ಮಂಡಳಿಯು ಕಲಬುರಗಿ ಜಿಲ್ಲಾ ಲೀಡ್ ಬ್ಯಾಂಕ್ ಮ್ಯಾನೇಜರ್ ಅವರನ್ನು ಭೇಟಿ ಮಾಡಿ, ಹೊಸದಾಗಿ ಜಾರಿಗೆ ಬಂದಿರುವ ಸೇಮ್ ಡೇ ಚೆಕ್ ಕ್ಲಿಯರಿಂಗ್ ಸಿಸ್ಟಮ್ ಅಡಿಯಲ್ಲಿ ಚೆಕ್‌ಗಳ ಕ್ಲಿಯರಿಂಗ್‌ನಲ್ಲಿ ಆಗುತ್ತಿರುವ ವಿಳಂಬದ ಕುರಿತು ಚರ್ಚೆ ನಡೆಸಿತು.

ಕೆಕೆಸಿಸಿಐ ತಿಳಿಸಿರುವುದೇನೆಂದರೆ, ಈ ಹೊಸ ವ್ಯವಸ್ಥೆಯು ಬ್ಯಾಂಕಿಂಗ್ ದಕ್ಷತೆಯನ್ನು ಹೆಚ್ಚಿಸಲು ಹಾಗೂ ವೇಗವಾದ ಪಾವತಿಗಳಿಗಾಗಿ ಕೈಗೊಂಡಿರುವ ಸ್ವಾಗತಾರ್ಹ ಮತ್ತು ಪ್ರಗತಿಪರ ಕ್ರಮವಾದರೂ, ಪ್ರಾಯೋಗಿಕವಾಗಿ ಚೆಕ್‌ಗಳು ಒಂದೇ ದಿನದಲ್ಲಿ ಕ್ಲಿಯರ್ ಆಗಬೇಕಾದರೆ, ಪ್ರಸ್ತುತ ಮೂರುರಿಂದ ನಾಲ್ಕು ದಿನಗಳ ನಂತರ ಮಾತ್ರ ಕ್ಲಿಯರ್ ಆಗುತ್ತಿವೆ ಎಂದು ವ್ಯಾಪಾರ ವಲಯದಿಂದ ಅನೇಕ ದೂರುಗಳು ಬಂದಿವೆ.

ಮಂಡಳಿಯು ಸ್ಪಷ್ಟಪಡಿಸಿರುವುದೇನೆಂದರೆ, ಹಿಂದಿನ ವ್ಯವಸ್ಥೆಯಲ್ಲಿ ಚೆಕ್‌ಗಳು ಸಾಮಾನ್ಯವಾಗಿ ಮುಂದಿನ ಕಾರ್ಯದಿನದಲ್ಲೇ ಕ್ಲಿಯರ್ ಆಗುತ್ತಿದವು, ಆದರೆ ಹೊಸ ವ್ಯವಸ್ಥೆಯ ಬಳಿಕ ವಿಳಂಬವು ಹೆಚ್ಚಾಗಿ ವ್ಯಾಪಾರಿಗಳು, ಉದ್ಯಮಿಗಳು ಹಾಗೂ ಎಂಎಸ್‌ಎಂಇ ಘಟಕಗಳು ದಿನನಿತ್ಯದ ವ್ಯವಹಾರಗಳಲ್ಲಿ ಆರ್ಥಿಕ ಒತ್ತಡ ಮತ್ತು ಅಡಚಣೆ ಅನುಭವಿಸುತ್ತಿದ್ದಾರೆ.

ಈ ಬಗ್ಗೆ ಲೀಡ್ ಬ್ಯಾಂಕ್ ಮ್ಯಾನೇಜರ್ ಅವರು ಮಂಡಳಿಯ ಪ್ರತಿನಿಧಿಗಳಿಗೆ ಸ್ಪಷ್ಟನೆ ನೀಡಿದ್ದು, ಪ್ರಸ್ತುತ ಈ ಪ್ರಕ್ರಿಯೆ "ಚೆಕ್ ಪ್ರೊಸೆಸಿಂಗ್ ಸೆಲ್ (ಅಕಅ)" ವ್ಯಾಪ್ತಿಯಲ್ಲಿದೆ ಎಂದು ತಿಳಿಸಿದರು. ಅವರು ಈಗಾಗಲೇ ಮೇಲಾಧಿಕಾರಿಗಳೊಂದಿಗೆ ಚರ್ಚಿಸಿದ್ದು, ಈ ಸಮಸ್ಯೆಯನ್ನು ಸಂಬಂಧಿತ ಅಕಅ ಸೆಲ್‌ಗೆ ತಕ್ಷಣ ಮುಂದಿರಿಸಲಾಗುವುದು ಎಂದು ಭರವಸೆ ನೀಡಿದರು.

ಅದೇ ರೀತಿ ಅವರು ತಿಳಿಸಿದ್ದಾರೆ ಹೊಸ ಸಾಫ್ಟ್‌ವೇರ್ ವ್ಯವಸ್ಥೆಯು ಇನ್ನೂ ಸ್ಥಿರಗೊಳ್ಳುವ ಹಂತದಲ್ಲಿದ್ದು, ಸಂಪೂರ್ಣ ಕಾರ್ಯಕ್ಷಮವಾಗಲು ಸ್ವಲ್ಪ ಸಮಯ ಬೇಕಾಗುತ್ತದೆ. ಈ ನಡುವಿನ ಅವಧಿಯಲ್ಲಿ ವ್ಯಾಪಾರಿಗಳು ಮತ್ತು ಕೈಗಾರಿಕೋದ್ಯಮಿಗಳು ಖಿಊಉಖ ಹಾಗೂ ಓಇಈಖ ನಂತಹ ಎಲೆಕ್ಟ್ರಾನಿಕ್ ಪಾವತಿ ವಿಧಾನಗಳನ್ನು ತಾತ್ಕಾಲಿಕವಾಗಿ ಬಳಸಿಕೊಳ್ಳುವುದು ಸೂಕ್ತ ಎಂದು ಸಲಹೆ ನೀಡಿದರು.

ಕೆಕೆಸಿಸಿಐ ಅಭಿಪ್ರಾಯಪಟ್ಟಿರುವುದೇನೆಂದರೆ, ಸಮಯಕ್ಕೆ ಸರಿಯಾಗಿ ಚೆಕ್‌ಗಳ ಕ್ಲಿಯರಿಂಗ್ ಆಗುವುದು ವ್ಯಾಪಾರ ವಿಶ್ವಾಸ ಮತ್ತು ದ್ರವ್ಯಪ್ರವಾಹವನ್ನು ಕಾಪಾಡಿಕೊಳ್ಳಲು ಅತ್ಯಂತ ಅಗತ್ಯ, ವಿಶೇಷವಾಗಿ ಕಲಬುರಗಿ ಜಿಲ್ಲೆ ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶದ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಇದು ಅತ್ಯಂತ ಮುಖ್ಯವಾಗಿದೆ.

ಈ ಸಭೆಯಲ್ಲಿ ಕೆಕೆಸಿಸಿಐ ಗೌರವ ಕಾರ್ಯದರ್ಶಿ ಶಿವರಾಜ್ ವಿ. ಇಂಗಿನಶೆಟ್ಟಿ ಹಾಗೂ ಎಂಎಸ್‌ಎಂಇ ಉಪಸಮಿತಿ ಅಧ್ಯಕ್ಷ ಅಭಿಜೀತ್ ಪಾಡಶೆಟ್ಟಿ ಉಪಸ್ಥಿತರಿದ್ದರು.

# ವಿಶ್ವಕೌಶಲ್ಯ ರಾಜ್ಯಮಟ್ಟ ಸ್ಪರ್ಧೆಯಲ್ಲಿ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.9:ಕೌಶಲ್ಯಾಭಿವೃದ್ಧಿ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಕಲಬುರಗಿಯ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ, (ಜಿಟಿಟಿಸಿ) ದಲ್ಲಿ 5ನೇ ಸೇಮಸ್ಟರನಲ್ಲಿ ತರಬೇತಿ ಪಡೆಯುತ್ತಿರುವ ಅಂಕಿತಾ ಅಳಂದ ಅವರು ವಿಶ್ವಕೌಶಲ್ಯ (ಮೆಕಾನಿಕಲ್ ಕ್ಯಾಡ್) ರಾಜ್ಯಮಟ್ಟ ಸ್ಪರ್ಧೆಯಲ್ಲಿ ಆಯ್ಕೆಯಾಗಿದ್ದಾರೆ.

ಅಂಕಿತಾ ಅಳಂದ ಅವರ ಯಶಸ್ಸು ಮತ್ತು ರಾಜ್ಯ ಮಟ್ಟದ ಸಾಧನೆಗಾಗಿ ಜಿಟಿಟಿಸಿ ಕಾಲೇಜಿನ ಪ್ರಾಂಶುಪಾಲರಾದ ಸುಧಾರಾಣಿ ಎಸ್ ಅಟ್ಟೂರ್, ಅಫಜಲಪುರ ಸರ್ಕಾರಿ ಪಾಲಿಟೆಕ್ನಿಕ್ ಪ್ರಾಂಶುಪಾಲ ಡಾ.ಪ್ರಭುದೇವ ಎಮ್.ಎಸ್, ತರಬೇತಿದಾರ ಅರುಣ ಸೂರ್ಯವಂಶಿ, ಮತ್ತು ಕಾಲೇಜಿನ ಎಲ್ಲ ಸಿಬ್ಬಂದಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.

# ಡಯಟ್: ಬಿ.ಇಡಿ ಕೋರ್ಸ್ ದಾಖಲಾತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.09-ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ 2025-26ನೇ ಸಾಲಿನ ಎರಡು ವರ್ಷದ ಬಿ.ಇಡಿ ಕೋರ್ಸ್ ವ್ಯಾಸಂಗಕ್ಕಾಗಿ ರಾಜ್ಯ ಸರ್ಕಾರಿ ಮಾನ್ಯತೆ ಪಡೆದ ಅನುದಾನಿತ ಹಾಗೂ ಅನುದಾನರಹಿತ ಬಿ.ಇಡಿ ಕಾಲೇಜುಗಳಲ್ಲಿ ಸರ್ಕಾರಿ ಕೋಟಾದ ಅಡಿ ಸೀಟುಗಳ ದಾಖಲಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆನ್‌ಲೈನ್ ನಲ್ಲಿ ಇಲಾಖಾ ವೆಬ್‌ಸೈಟ್ https://schooleducation.karnataka.gov.in ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ನವೆಂಬರ್ 03 ಕೊನೆಯ ದಿನ.

ಅರ್ಜಿಯನ್ನು ಅಧಿಸೂಚನೆಯಲ್ಲಿ ದಾಖಲಾದ ವೇಳಾಪಟ್ಟಿ, ಅರ್ಹತೆ, ಮೀಸಲಾತಿ, ಶುಲ್ಕದ ವಿವರ ಮತ್ತು ಜಿಲ್ಲಾವಾರು ಬಿ.ಇಡಿ ಸಂಸ್ಥೆಗಳ ಪಟ್ಟಿಯನ್ನು ನೀಡಲಾಗಿದೆ ಹಾಗೂ ಅಭ್ಯರ್ಥಿಗಳು ಅಧಿಸೂಚನೆಯಂತೆ ಅರ್ಜಿಯನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ನಗರದ ರೇಡಿಯೋ ಪಾರ್ಕ್ ನ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಅಥವಾ ಮೊ.9980448860, 9886416363, 9916768108 ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಡಯಟ್ ನ ಪ್ರಾಂಶುಪಾಲರು ಹಾಗೂ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




ಕಲಬುರಗಿ: ಧರ್ಮಸ್ಥಳದಲ್ಲಿ ಸೌಜನ್ಯ ಕೊಲೆ ಪ್ರಕಟಣದ ಆರೋಪಿಯನ್ನು ಬಂಧಿಸುವಂತೆ ಹಾಗೂ ವಿವಿದ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ, ಧರ್ಮಸ್ಥಳ ದೌರ್ಜನ್ಯ ವಿರೋಧಿ ವೇದಿಕೆಯಿಂದ ರಾಜ್ಯವ್ಯಾಪಿ ಹಮ್ಮಿಕೊಂಡಿರುವ 'ನ್ಯಾಯಕ್ಕಾಗಿ ಜನಾಗ್ರಹ'ದ ಭಾಗವಾಗಿ ನಗರದ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿದರು. ಈ ಸಂದರ್ಭದಲ್ಲಿ ಕೆ. ನೀಲಾ, ಡಾ. ಪ್ರಭು ಖಾನಾಪೂರೆ, ಲವಿತ್ರಾ ವಸ್ತ್ರದ, ಪದ್ಮಾ ಮಾಲೀಪಾಟೀಲ್, ಸರ್ವೇಶ, ಕೊದಂಡರಾಮ, ಪುಟ್ಟಮ್ಮ, ಪದ್ಮನಿ ಸೇರಿದಂತೆ ಇನ್ನಿತರರಿದ್ದರು.

## ಬಳ್ಳಾರಿ: ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ನ್ಯಾ.ರಾಜೇಶ್ ಎನ್.ಹೊಸಮನೆ ಅಭಿಪ್ರಾಯ

# ದೇಶದ ಅಭಿವೃದ್ಧಿಗೆ ಹಿರಿಯ ನಾಗರಿಕರ ಮಾರ್ಗದರ್ಶನ ಅವಶ್ಯಕ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.09-ಹಿರಿಯ ನಾಗರಿಕರು ಸಮಾಜದ ಬೇರುಗಳು. ಒಂದು ದೇಶ, ರಾಜ್ಯ ಅಭಿವೃದ್ಧಿಯಾಗಲು ಹಿರಿಯ ನಾಗರಿಕರ ಮಾರ್ಗದರ್ಶನ ಅವಶ್ಯಕವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಹಿರಿಯ ನಾಗರಿಕರಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ "ಹಿರಿಯ ನಾಗರಿಕರು: ನಮ್ಮ ಆಶೋತ್ತರಗಳು ನಮ್ಮ ಯೋಗಕ್ಷೇಮ ಮತ್ತು ನಮ್ಮ ಹಕ್ಕುಗಳನ್ನು ಸ್ಥಳೀಯ ಮತ್ತು ಜಾಗತಿಕಮಟ್ಟಕ್ಕೆ ಕೊಂಡೊಯ್ಯಬಲ್ಲ ಸಶಕ್ತರು" ಎಂಬ ವಿಶ್ವಸಂಸ್ಥೆಯ ಘೋಷವಾಕ್ಯದಡಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಗುರುವಾರ ಏರ್ಪಡಿಸಿದ್ದ "ವಿಶ್ವ ಹಿರಿಯ ನಾಗರಿಕರ ದಿನಾಚರಣೆ" ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.




ಇತ್ತೀಚಿನ ದಿನಗಳಲ್ಲಿ ಹಿರಿಯ ನಾಗರಿಕರನ್ನು ಕಡೆಗಣಿಸುತ್ತಿರುವುದು ಕಂಡುಬರುತ್ತಿದ್ದು, ವಿಷಾಧನೀಯ ಸಂಗತಿಯಾಗಿದೆ. ಹಿರಿಯ ನಾಗರಿಕರನ್ನು ಗೌರವದಿಂದ ಕಾಣಬೇಕು. ಅವರನ್ನು ಕಡೆಗಣಿಸದೇ ಕಾಳಜಿ ವಹಿಸಿ ಒಂಟಿತನ ಕಾಡದೇ ಹಾಗೆ ನೋಡಿಕೊಳ್ಳಬೇಕು ಎಂದರು.

ಸಮಾಜದಲ್ಲಿ ಹಿರಿಯ ನಾಗರಿಕರಿಗೆ ಬೇಕಾದ ಗೌರವ, ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿಕೊಡಬೇಕು. ಹಿರಿಯ ನಾಗರಿಕರು ನಿಮ್ಮಲ್ಲಿರುವ ಯಾವುದೇ ಕಾನೂನಾತ್ಮಕ ಸಮಸ್ಯೆಗಳಿದ್ದರೆ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ದೂರು ಸಲ್ಲಿಸಿ ನಿಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು ಎಂದು ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ಹಿರಿಯ ನಾಗರಿಕರ ಅನುಭವದಿಂದ ದೇಶವು ಅಭಿವೃದ್ಧಿಯಲ್ಲಿ ಸಾಗುತ್ತಿದೆ. ನಮ್ಮ ದೇಶದ ಪ್ರಧಾನಿ ಹಾಗೂ ರಾಜ್ಯದ ಮುಖ್ಯಮಂತ್ರಿಗಳು ಸಹ ಹಿರಿಯ ನಾಗರಿಕರಾಗಿದ್ದು, ದೇಶವನ್ನು ಅಭಿವೃದ್ಧಿಯ ಕಡೆ ಮುನ್ನೆಡೆಸುವಲ್ಲಿ ಅವರ ಮಾರ್ಗದರ್ಶನವು ಅತ್ಯಂತ ಮಹತ್ತರವಾಗಿದೆ ಎಂದು ಹೇಳಿದರು.

ರಾಜ್ಯ ಸರ್ಕಾರವು ಹಿರಿಯ ನಾಗರಿಕರ ಆರ್ಥಿಕ ಸಬಲತೆಯ ದೃಷ್ಠಿಯಿಂದ 60-65 ವರ್ಷ ಮೇಲ್ಪಟ್ಟವರಿಗೆ ವೃದ್ಧಾಪ್ಯ ವೇತನ ಹಾಗೂ ಇತರೆ ಯೋಜನೆಗಳನ್ನು ಜಾರಿಗೊಳಿಸಿದ್ದು, ಹಿರಿಯ ನಾಗರಿಕರು ಇದರ ಸದುಪಯೋಗಪಡೆದುಕೊಳ್ಳಬೇಕು ಎಂದರು. ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್ ಅವರು ಮಾತನಾಡಿ, ಮಕ್ಕಳು ತಮ್ಮ ಪೋಷಕರನ್ನು ಆರೈಕೆ ಮಾಡದೇ ಇರುವುದು, ವೃದ್ಧಾಶ್ರಮಕ್ಕೆ ಸೇರಿಸುವುದು, ಆಸ್ತಿ ಕಲಹ ಇನ್ನಿತರೆ ಸಮಸ್ಯೆಗಳು ಇದ್ದಲ್ಲಿ ಸಹಾಯಕ ಆಯುಕ್ತರ ಅಧ್ಯಕ್ಷತೆಯಲ್ಲಿ ನ್ಯಾಯಮಂಡಳಿ ಇದ್ದು, ಹಿರಿಯ ನಾಗರಿಕರ ಕಾಯ್ದೆ-2007 ರಡಿ ದೂರು ಸಲ್ಲಿಸಿ ವಿಚಾರಣೆ ನಡೆಸಬಹುದಾಗಿದೆ ಎಂದು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ನಾಯಕ್ ಅವರು ಮಾತನಾಡಿ, ಒಂದು ದೇಶವು ಸುಭೀಕ್ಷೆಯಿಂದ ಇರಲು ಮಕ್ಕಳು, ಮಹಿಳೆಯರು, ಹಿರಿಯ ನಾಗರಿಕರು ತುಂಬಾ ಅವಶ್ಯಕ. ಹಿರಿಯ ನಾಗರಿಕರು ನೈತಿಕ ಮೌಲ್ಯಗಳನ್ನು ಮತ್ತು ಜೀವನದ ರೂಪುರೇಷೆಗಳನ್ನು ಇಂದಿನ ಪೀಳಿಗೆಯಲ್ಲಿ ಆಳವಾಗಿ ಬಿತ್ತುವ ಕೆಲಸವಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಶತಾಯುಶಿಗಳಿಗೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಹಿರಿಯ ನಾಗರಿಕರಿಗೆ ಸನ್ಮಾನಿಸಲಾಯಿತು. ಬಳಿಕ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಜೇತರಾದ ಹಿರಿಯ ನಾಗರಿಕರಿಗೆ ಬಹುಮಾನ ವಿತರಿಸಲಾಯಿತು. ವಿವಿಧ ರೀತಿಯ ಸಲಕರಣೆ ವಿತರಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣಾಧಿಕಾರಿ ಗೋವಿಂದಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರೂಪಣಾಧಿಕಾರಿ ಸವಿತಾ, ನಿವೃತ್ತ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಎಂ.ಟಿ.ಮಲ್ಲೇಶ್, ಹಿರಿಯ ಸಾಹಿತಿ ಡಿ.ವೆಂಕಮ್ಮ, ಸ್ಟ್ರೆಲ್ ಸಂಸ್ಥೆಯ ಸಿಬ್ಬಂದಿ ಸೇರಿದಂತೆ ಹಿರಿಯ ನಾಗರಿಕರು ಹಾಗೂ ಇತರರು ಉಪಸ್ಥಿತರಿದ್ದರು.

‘ಗಾಡ್ ಇಸ್ ನಾಟ್ ರೀಚಬಲ್’ ಕಾದಂಬರಿ ಲೋಕಾರ್ಪಣೆ

# ಸಾಹಿತ್ಯ ಪರಂಪರೆಯ ಬೇರುಗಳು ಗಟ್ಟಿಗೊಳ್ಳಬೇಕು-ಪ್ರಕಾಶ ಖಾಡೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.9-ಭಾರತೀಯ ಪರಂಪರೆಯ ಬೇರುಗಳನ್ನು ಯುವ ಕಥೆಗಾರರು ಈ ಕಾಲದ ಸಂದರ್ಭಕ್ಕೆ ತೆರೆದು ತೋರುವಲ್ಲಿ ಸಾಹಿತ್ಯದ ಮೂಲಕ ಸಾಧ್ಯಮಾಡುತ್ತಿರುವುದು ಒಳ್ಳೆಯ ಬೆಳವಣಿಗೆ ಎಂದು ಕಥೆಗಾರ ಡಾ.ಪ್ರಕಾಶ ಖಾಡೆ ಹೇಳಿದರು.

ಪಕ್ವಾನ್ ಗ್ರೂಪ್ ವಿದ್ಯಾಗಿರಿಯ ಪಕ್ವಾನ್ ರೆಸ್ಟೋರೆಂಟ್ ಸಭಾಂಗಣದಲ್ಲಿ ಆಯೋಜಿಸಿದ್ದ ಪತ್ರಕರ್ತ ರವೀಂದ್ರ ಮುದ್ದಿ ಅವರ ‘ಗಾಡ್ ಇಸ್ ನಾಟ್ ರೀಚಬಲ್’ ಕಾದಂಬರಿ ಲೋಕಾರ್ಪಣೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಭಾರತ ಪ್ರದೇಶಗಳು ವಿಶಾಲವಾದ ಸಮೃದ್ಧ ಬರವಣಿಗೆಗೆ ತೆರೆದುಕೊಂಡಿವೆ. ಇಲ್ಲಿನ ಕಾಡು, ಬೆಟ್ಟ, ನದಿ, ಸರೋವರ, ಸಮುದ್ರ ತೀರ ಪ್ರದೇಶಗಳು ಸೃಜನಶೀಲ ಸಾಹಿತಿಗಳಿಗೆ ಬಹುದೊಡ್ಡ ಕ್ಯಾನವಾಸ್ ಒದಗಿಸಿವೆ. ಕಥೆಗಾರ ಮುದ್ದಿ ಅವರು ಕಾದಂಬರಿಯಲ್ಲಿ ವಿಷಯ ವಸ್ತುವಿಗೆ ಪೂರಕವಾಗಿ ಕುಂದಾಪುರ, ಮುಂಬಯಿ, ಗಂಗೊಳ್ಳಿ, ಕಾಶಿ ಪ್ರದೇಶಗಳ ವರ್ಣನೆ, ಆಚರಣೆ, ನಂಬುಗೆ ನಡಾವಳಿ, ಭಾಷೆ ಮತ್ತು ಅಸ್ಮಿತೆಗಳನ್ನು ಸೊಗಸಾಗಿ ಚಿತ್ರಿಸಿರುವುದು ಕಾದಂಬರಿ ಓದುಗರಲ್ಲಿ ಕುತೂಹಲ ಹುಟ್ಟಿಸುತ್ತಾ ಸಾಗುತ್ತದೆ ಎಂದು ಖಾಡೆ ಹೇಳಿದರು.

ಕವಿ ಡಾ.ಸತ್ಯಾನಂದ ಪಾತ್ರೋಟ ಮಾತನಾಡಿ, ಮುದ್ದಿ ಅವರ ಕಾದಂಬರಿಯಲ್ಲಿ ಸಾಹಿತ್ಯದ ಗಟ್ಟಿತನವಿದೆ. ಕಾದಂಬರಿಯ ಸಾರಾಂಶ ಜಗತ್ತು ಪ್ರೀತಿ ಮೇಲೆ ನಿಂತಿದೆ ಎಂಬುದನ್ನು ಸಾರಿದೆ. ಇಲ್ಲಿನ ಗೌತಮ, ಅಹಲ್ಯೆ ಪಾತ್ರಗಳು ಮನಸ್ಸಿನಲ್ಲಿ ಉಳಿಯುತ್ತವೆ. ಅನ್ವೇಷಣೆ ಸುತ್ತ ಸಾಗುವ ಕಾದಂಬರಿಯಲ್ಲಿ ಪುರಾಣ ಇತಿಹಾಸವಿದೆ, ಬೇರೆ ಬೇರೆ ದಿಕ್ಕುಗಳಲ್ಲಿ ಸಾಗುವ ಪಾತ್ರಗಳು ಕೊನೆಯಲ್ಲಿ ಒಂದಾಗುತ್ತವೆ ಎಂದರು.

ಲೇಖಕ ರವೀಂದ್ರ ಮುದ್ದಿ ತಮ್ಮ ಬರವಣಿಗೆಯ ಅನುಭವ ಹಂಚಿಕೊಂಡು ‘ಗಾಡ್ ಇಸ್ ನಾಟ್ ರೀಚಬಲ್ ಬರವಣಿಗೆಯು ನನ್ನೊಳಗಿನ ಹುಡುಕಾಟ, ಕಡಲ ಬಗೆಗಿನ ಮೋಹ, ಗೊತ್ತಿಲ್ಲದ ಊರುಗಳು, ಜಗತ್ತಿನಲ್ಲಿ ತಾಯಿ ಮಾಡುವ ತ್ಯಾಗ, ಆಕಸ್ಮಿಕವಾಗಿ ಹುಟ್ಟುವ ಪ್ರೀತಿ, ಹೃದಯ ಚೂರು ಮಾಡುವ ಘಟನೆಗಳು, ಜೀವನದಲ್ಲಿ ನಡೆವ ಚಮತ್ಕಾರ, ನಮಗರಿವಿಲ್ಲದೇ ದೇವರಿಗೆ ಶರಣಾಗುವ ನಾವು ಹೀಗೆ ಹುಡುಕುತ್ತಾ ಹೋದ ನನಗೆ ದಕ್ಕಿದ್ದು ಈ ಕಾದಂಬರಿ ಎಂದರು.

ಕಥೆಗಾರರಾದ ಅನಿಲ ಗುನ್ನಾಪುರ, ಮಲ್ಲಿಕಾರ್ಜುನ ಶೆಲ್ಲಿಕೇರಿ ಕಾದಂಬರಿ ಕುರಿತು ಮಾತನಾಡಿದರು. ಚಲನಚಿತ್ರ ನಿರ್ದೇಶಕ ಹಯವದನ, ಉದ್ಯಮಿ ಪವನ ಸೀಮಿಕೇರಿ, ಸಾಹಿತಿಗಳಾದ ಮಹಾಂತೇಶ ಹೊದ್ಲೂರ, ಶಿವಾನಂದ ಆದಾಪುರ, ರಾಜು ಯಾದವ, ಎಚ್.ಎಂ.ಜುಟ್ಟಲ, ಗುಡಿ, ಸಚಿನ್ ದೇಸಾಯಿ ಮೊದಲಾದವರು ಉಪಸ್ಥಿತರಿದ್ದರು.

# ಪೋಷಣ ಅಭಿಯಾನದಡಿ ದೊರೆಯುವ ಸವಲತ್ತುಗಳು ಸಮರ್ಪಕವಾಗಿ ಬಳಸಿಕೊಳ್ಳಿ: ಅಶ್ವಿನಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಸದೃಢ ಮತ್ತು ಆರೋಗ್ಯವಂತ ಸಮಾಜ ಕಟ್ಟಬೇಕಾದರೆ ಗರ್ಭಿಣಿಯರು, ಬಾಣಂತಿಯರು ಪೌಷ್ಟಿಕ ಆಹಾರ ಬಳಸುವ ಮೂಲಕ ತಮ್ಮ ಮತ್ತು ಮಕ್ಕಳ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಅಂಗನವಾಡಿ ವಲಯ ಮೇಲ್ವಿಚಾರಕಿ ಅಶ್ವಿನಿ ಹೇಳಿದರು.
ತಾಲೂಕಿನ ಮಂಗಲಗಿ ಗ್ರಾಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿ ಇಲಾಖೆ ಹುಮನಾಬಾದ ವತಿಯಿಂದ ರಾಷ್ಟ್ರೀಯ ಪೋಷಣ ಅಭಿಯಾನ ಮಾಸಾಚಾರಣೆ ಹಾಗೂ ಪೌಷ್ಟಿಕ ಆಹಾರ ಸಪ್ತಾಹ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಅಪೌಷ್ಟಿಕತೆ ನಿವಾರಿಸುವಲ್ಲಿ ಕೇಂದ್ರ ಸರ್ಕಾರ ಆಯೋಜಿಸಿರುವ ರಾಷ್ಟ್ರೀಯ ಪೋಷಣ್ ಅಭಿಯಾನ ಒಂದು ಮಹತ್ತರ ಕಾರ್ಯಕ್ರಮ. ಕಿಶೋರಿ ಬಾಲಕಿಯರಿಂದ ಹಿಡಿದು ಗರ್ಭಿಣಿಯರು ಸೇರಿದಂತೆ ಮಹಿಳೆಯರು ಮತ್ತು ಮಕ್ಕಳನ್ನು ಅಪೌಷ್ಟಿಕತೆಯಿಂದ ಮುಕ್ತಗೊಳಿಸುವ ಕಾರ್ಯಕ್ರಮ ಎಂದರು. ಮಹಿಳೆಯರು ಪೋಷಣ ಅಭಿಯಾನದಡಿ ದೊರೆಯುವ ಸವಲತ್ತುಗಳನ್ನು ಸಮರ್ಪಕವಾಗಿ ಬಳಸಿಕೊಂಡು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದರು. ಒಂದೇ ರೀತಿಯ ಆಹಾರ ಪದಾರ್ಥಗಳನ್ನು ಸೇವನೆ ಮಾಡದೆ ವಿವಿಧ ರೀತಿಯ ಆಹಾರ ಪದಾರ್ಥಗಳನ್ನು ಮತ್ತು ಸೊಪ್ಪು, ತರಕಾರಿಗಳು, ಮೊಳಕೆ ಕಾಳು ಹಾಗೂ ಎಲ್ಲಾ ತರಕಾರಿಗಳನ್ನು ಸೇವನೆ ಮಾಡಬೇಕು. ಗರ್ಭಿಣಿಯರು ಆದಷ್ಟು ದಿನಾಲು ಮೊಟ್ಟೆ ಮತ್ತು ಹಾಲು ಸೇವನೆ ಮಾಡುವ ಮೂಲಕ ತಮ್ಮ ಮತ್ತು ಮಕ್ಕಳ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು ಎಂದರು. ಆಯುರ್ವೇದಿಕ್ ವೈದ್ಯಾಧಿಕಾರಿ ಜ್ಯೋತಿ ಮಾತನಾಡಿ, ಆಯುರ್ವೇದದಲ್ಲಿ ಪ್ರತಿಯೊಂದು ಸಮಸ್ಯೆಗೂ ಪರಿಹಾರವಿದೆ. ಅದೇ ಬಾಣಂತಿಯರಲ್ಲಿ ಹಾಲಿನ ಉತ್ಪತ್ತಿ ಹೆಚ್ಚಿಸಲು ಕೆಲವು ವಿಧಾನಗಳಿವೆ. ತಾಯಿಯ ಎದೆಹಾಲು ಮಗುವಿಗೆ ಅಮೃತಕ್ಕೆ ಸಮಾನ. ನವಜಾತ ಶಿಶುವಿಗೆ ಎದೆಹಾಲು ಎನ್ನುವುದು ಹೊಟ್ಟೆಗೆ ಆಹಾರ ಮಾತ್ರವಲ್ಲದೆ, ಹಲವಾರು ರೀತಿಯ ಪೋಷಕಾಂಶಗಳು ಹಾಗೂ ದೇಹದಲ್ಲಿ ರೋಗದ ವಿರುದ್ಧ ಹೋರಾಡುವಂತಹ ಪ್ರತಿರೋಧಕ ಶಕ್ತಿ ಒದಗಿಸಿಕೊಡುವುದು. ಎದೆಹಾಲನ್ನು ಮಗುವಿಗೆ ತಪ್ಪದೆ ನೀಡಬೇಕೆಂದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷ ಪುಂಡಲೀಕ ಅರ್ಕಿ, ಉಪಾಧ್ಯಕ್ಷೆ ಪವಿತ್ರಾ, ಸದಸ್ಯರಾದ ಮಕಬುಲ್ ಪಾಶಾ, ಗುಂಡಪ್ಪ, ಕಾಶಪ್ಪ, ಹಣಮಂತ, ವಿಮಲಾಬಾಯಿ ಸೇರಿದಂತೆ ಆರೋಗ್ಯ ಇಲಾಖೆ, ಗ್ರಾಮ ಪಂಚಾಯತ್ ಸಿಬ್ಬಂದಿ ವರ್ಗದವರು, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ಹಾಗೂ ಗರ್ಭಿಣಿ ಬಾಣಂತಿಯರು ಉಪಸ್ಥಿತರಿದ್ದರು.

ಸರಕಾರಿ ಕಾಲೇಜಿನಲ್ಲಿ ಗ್ರಂಥಾಲಯ ಕಟ್ಟಡಕ್ಕೆ ಶಂಕು ಸ್ಥಾಪನೆ

# ಸಮಾಜ ಸುಧಾರಣೆಗೆ ಗುಣಮಟ್ಟದ ಶಿಕ್ಷಣ ಅಗತ್ಯ: ಶಾಸಕ ಮೇಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.9- ಪದವಿ ವಿದ್ಯಾರ್ಥಿಗಳು ಸಾಮಾಜಿಕ ಪರಿಸರದ ಜ್ಞಾನವನ್ನು ಅರಿತುಕೊಳ್ಳಬೇಕಾಗಿದೆ. ಸಮಾಜದ ಸುಧಾರಣೆಗೆ ಗುಣಮಟ್ಟದ ಶಿಕ್ಷಣ ಅಗತ್ಯವಿದೆ ಎಂದು ಶಾಸಕ ಎಚ್.ವೈ.ಮೇಟಿ ಹೇಳಿದರು.

ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಬಾಗಲಕೋಟೆ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಅಡಿಯಲ್ಲಿ ನಡೆದ ತರಗತಿಗಳ ಕೊಠಡಿಗಳು ಹಾಗೂ ಗ್ರಂಥಾಲಯ ಕಟ್ಟಡ ನಿರ್ಮಾಣದ ಶಂಕುಸ್ಥಾಪನೆ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಕಾಲೇಜನಲ್ಲಿ ಓದುವ ಎಲ್ಲಾ ಮಕ್ಕಳಿಗೆ ಉತ್ತಮ ಸಂಸ್ಕೃತಿ, ಸಂಸ್ಕಾರ ಮತ್ತು ಮಾನವೀಯ ಸಂಬಂಧಗಳ ಮೌಲ್ಯವನ್ನು ತಿಳಿಸುವ ಗುಣಮಟ್ಟದ ಶಿಕ್ಷಣವನ್ನು ನೀಡಲಾಗುತ್ತಿದೆ. ಈ ಕಾಲೇಜು ರಾಜ್ಯದಲ್ಲಿಯೇ ನೋಡಲ್ ಮತ್ತು ಮಾಡಲ್ ಕಾಲೇಜಾಗಿ ಹೊರಹೊಮ್ಮಿದ್ದು ಹೆಮ್ಮೆಯ ಸಂಗತಿ ಎಂದ ಶಾಸಕ ಮೇಟಿ, ತರಗತಿಗಳ ಅನುಕೂಲಕ್ಕಾಗಿ ಕೊಠಡಿಗಳನ್ನು ಹಾಗೂ ಗ್ರಂಥಾಲಯದ ನೂತನ ಕಟ್ಟಡ ನಿರ್ಮಾಣಗೊಳ್ಳಲಿದ್ದು, ಇದರ ಉಪಯೋಗವನ್ನು ಎಲ್ಲಾ ವಿದ್ಯಾರ್ಥಿಗಳು ಪಡೆಯಬೇಕು ಎಂದು ಹೇಳಿದರು.

ಪ್ರಾಂಶುಪಾಲ ಡಾ.ಅರುಣಕುಮಾರ ಗಾಳಿ ಪ್ರಾಸ್ತಾವಿಕವಾಗಿ ಮಾತನಾಡಿ, ರಾಜ್ಯಮಟ್ಟದಲ್ಲಿ ಉತ್ತಮ ಹೆಸರು ಮಾಡಿರುವ ಕಾಲೇಜಿನಲ್ಲಿ 3 ಸಾವಿರದಷ್ಟು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಈ ಕಾಲೇಜು ಅಭಿವೃದ್ಧಿಯಲ್ಲಿ ಶಾಸಕರ ಸಹಕಾರ ಮತ್ತು ಕೊಡುಗೆ ಅಪಾರವಿದೆ ಎಂದರು.

ನಗರಸಭೆಯ ಅಧ್ಯಕೆ ಸವಿತಾ ಲೆಂಕೆಣ್ಣವರ, ಜಿ.ಪಂ ಮಾಜಿ ಅಧ್ಯಕ್ಷೆ ಬಾಯಕ್ಕ ಮೇಟಿ, ಮುಖಂಡರಾದ ಮಾರೇಶ ಯಮನಾಳ, ದಂಡಿನ, ನಂದಿಕೋಲಮಠ, ಧರ್ಮಣ್ಣ, ಬೂಡಾ ಸದಸ್ಯರಾದ ಮಜ್ಜಿಗಿ ವೇದಿಕೆ ಮೇಲೆ ಉಪಸ್ಥಿತರಿದ್ದರು.

ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರಾಗಿರುವ ಶಾಸಕ ಎಚ್.ವೈ. ಮೇಟಿ ಅವರನ್ನು ಹುಟ್ಟು ಹಬ್ಬದ ಪ್ರಯುಕ್ತ ಕಾಲೇಜಿನ ಪರವಾಗಿ ಸನ್ಮಾನಿಸಿ ಗೌರವಿಸಲಾಯಿತು. ಡಾ.ಚಂದ್ರಶೇಖರ ಕಾಳನ್ನವರ ನಿರೂಪಿಸಿದರು, ಪ್ರೊ.ಸಂಪತ್ ಲಮಾಣಿ ವಂದಿಸಿದರು. ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿವರ್ಗದವರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಕುರುಬ ಸಮಾಜ ಎಸ್.ಟಿ.ಗೆ ಸೇರ್ಪಡೆಗೆ ಸಿಎಂ ಕೊಡುಗೆ ಶೂನ್ಯ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.9-ಕುರುಬ ಸಮಾಜವನ್ನು ಎಸ್ ಟಿ ಗೆ ಸೇರ್ಪಡೆಗೊಳಿಸುವ ವಿಚಾರದಲ್ಲಿ ಸಿಎಂ ಸಿದ್ದರಾಮಯ್ಯ ಕೊಡುಗೆ ಶೂನ್ಯ ಎಂದು ಸಂಗೊಳ್ಳಿ ರಾಯಣ್ಣ ಬ್ರಿಗೇಡ್ ರಾಜ್ಯ ಕಾರ್ಯಾಧ್ಯಕ್ಷ ವೀರಣ್ಣ ಹಳೇಗೌಡರ ಹೇಳಿದರು. ನಗರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕುರುಬ ಸಮಾಜ ಸಿದ್ದರಾಮಯ್ಯ ಅವರನ್ನು ನಂಬಿ ಸಾಕಷ್ಟು ಪ್ರಮಾಣದಲ್ಲಿ ರಾಜಕೀಯವಾಗಿ ಶಕ್ತಿ ನೀಡಿದೆ. ಸಿಎಂ ಸ್ಥಾನ ಅಲಂಕರಿಸಲು ಬೆನ್ನೆಲುಬಾಗಿ ನಿಂತಿದೆ. ಆದರೆ ಅವರು ಅದೆಲ್ಲವನ್ನೂ ಮರೆತಿದ್ದಾರೆ ಎಂದರು. ಕುರುಬ ಸಮಾಜವನ್ನು ಎಸ್ಟಿಗೆ ಸೇರ್ಪಡೆಗೊಳಿಸಲು ಕೆ.ಎಸ್. ಈಶ್ವರಪ್ಪ ಪ್ರಯತ್ನ ಮಾಡಿದ್ದರು. ಅಂದಿನ ಸಿಎಂ ಬಸವರಾಜ ಬೊಮ್ಮಾಯಿ ಸಮಾಜದ ಬೇಡಿಕೆಗೆ ಸ್ಪಂದಿಸಿದ ಕೇಂದ್ರಕ್ಕೆ ಶಿಫಾರಸ್ಸು ಮಾಡಿದ್ದಾರೆ. ಇದೀಗ ಕೇಂದ್ರ ಕುಲ ಶಾಸ್ತ್ರೀಯ ಅಧ್ಯಯನ ಮಾಡಿ ವಿವರಣೆ ನೀಡುವಂತೆ ಕೋರಿದೆ. ಈ ವಿಚಾರದಲ್ಲಿ ದ್ವಂದ್ವ ನಿಲುವು ತಾಳಬಾರದು. ಮೀಸಲಾತಿ ಪ್ರಮಾಣ ಹೆಚ್ಚಳ ಮಾಡಬೇಕು ಎಂದು ಹೇಳಿದರು. ಕುರುಬ ಸಮಾಜ ಯಾರದೇ ಅನ್ನ ಕಸಿದುಕೊಳ್ಳುವ ಜಾಯಮಾನ ಹೊಂದಿಲ್ಲ. ತನ್ನ ಪಾಲಿನ ಹಕ್ಕನ್ನು ಸಂವಿಧಾನ ಬದ್ಧವಾಗಿ ಕೇಳುತ್ತಿದೆ ಎಂದು ಹಳೇಗೌಡರ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಮಲ್ಲು ಹುನಗುಂಡಿ, ಚಂದ್ರಶೇಖರ ನಕ್ಕರಗುಂದಿ, ಮೌನಪ್ಪ ಅಡಗಲ್, ಗಂಗಪ್ಪ ಧರಗೊಂಡ, ಸೋಮು ಖೈರವಾಡಗಿ ಇದ್ದರು.

# ವಕೀಲ ಕಿಶೋರ ರಾಕೇಶ ವಿರುದ್ಧ ಕಠಿಣ ಶಿಕ್ಷೆ ಆಗಬೇಕೆಂದು ರಾಜು ಎಸ್ ಕಟ್ಟಿಮನಿ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಸುಪ್ರೀಂಕೋರ್ಟ ಮುಖ್ಯನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರ ಮೇಲೆ ಶೂ ಎಸೆಯಲು ಯತ್ನಿಸಿದ ಆರೋಪಿ ವಕೀಲ ಕಿಶೋರ ರಾಕೇಶ ಅವರಿಗೆ ಅತ್ಯಂತ ಕಠಿಣ ಶಿಕ್ಷೆ ಆಗಬೇಕೆಂದು ಮಾದಿಗ ಸಮಾಜದ ಯುವ ಹೋರಾಟಗಾರರಾದ ರಾಜು ಎಸ್ ಕಟ್ಟಿಮನಿ ಅವರು ಹೇಳಿದರು.

ಸನಾತನ ಧರ್ಮಕ್ಕೆ ಅಪಮಾನ ಮಾಡಿದ್ದಾರೆ ಎಂದು ಆರೋಪಿಸಿ ಸುಪ್ರೀಂಕೋರ್ಟನಲ್ಲಿ ವಕೀಲರೊಬ್ಬರು ಮುಖ್ಯ ನ್ಯಾಯಮೂರ್ತಿಗಳ ಮೇಲೆಯೇ "ಶೂ" ಎಸೆದಿರುವ ಘಟನೆ ಖಂಡನೀಯವಾಗಿದ್ದು ನಾಗರೀಕ ಸಮಾಜ ತಲೆ ತಗ್ಗಿಸುವಂತಾಗಿದೆ.

ಇತಿಹಾಸದಲ್ಲಿಯೇ ಇದು ಮೊದಲ ಘಟನೆಯಾಗಿದ್ದು ಮನುವಾದದ ಪ್ರವರ್ತಕರು ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿಗಳ ಮೇಲೆಯೇ ತನ್ನ "ಶೂ" ಎಸೆದಿದ್ದಾರೆ. ಇದು ಪ್ರತಿಯೊಬ್ಬರ ಮೇಲೆ ನಡೆದ ದಾಳಿಯಲ್ಲ ನ್ಯಾಯದ ಮೇಲಿನ ದಾಳಿ, ಸಂವಿಧಾನದ ಮೇಲಿನ ದಾಳಿ ಮನುವಾದಿಗಳ ಈ ಮನಸ್ಥಿತಿಯ ಪ್ರೋತ್ಸಾಹಕರು ಯಾರು ಎನ್ನುವುದನ್ನು ಬಿಡಿಸಿ ಹೇಳಬೇಕಾಗಿಲ್ಲ. ಇದು ಕೇವಲ "ಶೂ" ದಾಳಿಯಲ್ಲ ಮನುವಾದಿಗಳ ಮತಾಂಧರ ನಡೆಸಿದ ಸಂವಿಧಾನದ ಮೌಲ್ಯಗಳ ಮೇಲಿನ ಭಯೋತ್ಪಾದಕ ದಾಳಿ, ಸಂವಿಧಾನದ ಮೇಲೆ ಮನುವಾದಿಗಳಿಗಿರುವ ಅಸಹನೆಗೆ ಹಾಗೂ ದೇಶದ ಅತ್ಯುನ್ನತ ಸ್ಥಾನದಲ್ಲಿದ್ದರೂ ಶೋಷಿತರ ಶೋಷಣೆ ತಪ್ಪಿದ್ದಲ್ಲ ಎನ್ನುವುದಕ್ಕೆ ಈ ಘಟನೆ ಸಾಕ್ಷಿಯಾಗಿದೆ ಆದ್ದರಿಂದ ಈ ಘಟನೆಯನ್ನು ನಾನು ಅಲ್ಲದೇ ಇಡೀ ದೇಶವೇ ಖಂಡಿಸುವಂತಾಗಿದೆ ಎಂದು ರಾಜು ಎಸ್ ಕಟ್ಟಿಮನಿ ಅವರು ತೀವ್ರವಾಗಿ ಪ್ರಕಟಣೆ ಮೂಲಕ ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ರಿಯಲ್‌ಮಿ ಹಾಗೂ ಸ್ಟಾರ್‌ಲೈಟ್ ಕಂಪನಿಯಿಂದ ಮೇರಾಜ್ ಅವರಿಗೆ ಅಭಿನಂದನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: 10 ಲಕ್ಷ ಮೌಲ್ಯದ ಹೊಚ್ಚ ಹೊಸ ಪ್ರೀಮಿಯಂ ಕಾರನ್ನು ಗ್ರಾಹಕ ಮೆರಾಜ್ ಅವರು ರಿಯಲ್‌ಮಿ ಹಾಗೂ ಸ್ಟಾರ್‌ಲೈಟ್ ಕಂಪನಿಯಿಂದ ರಿಯಲ್‌ಮಿ ಮೋಬೈಲ್ ಅನ್ನು ಕರಿದಿಸಿದ ಅವರಿಗೆ ಶ್ರೀ ಸಿದ್ಧಿ ಗಣೇಶ ಟೆಲಿಕಾಂ ಲಕ್ಕಿ ಡ್ರಾದಲ್ಲಿ ಮೆರಾಜ್‌ಗೆ ಕಾರನ್ನು ಬಹುಮಾನವಾಗಿ ನೀಡಲಾಯಿತು.

ಬಹುಮಾನವನ್ನು ಗೆದ್ದ ಮೆರಾಜ್ ಅವರನ್ನು ಅಭಿನಂದಿಸಲು ಸ್ಟಾರ್‌ಲೈಟ್ ಮತ್ತು ರಿಯಲ್‌ಮಿ ಉತ್ಸುಕವಾಗಿವೆ ಶ್ರೀ ಸಿದ್ಧಿ ಗಣೇಶ ಟೆಲಿಕಾಂ ಲಕ್ಕಿ ಡ್ರಾದಲ್ಲಿ ಪ್ರವೇಶಿಸುವ ಮೂಲಕ, ಶ್ರೀ ಮೆರಾಜ್ ಈ ಜೀವನವನ್ನು ಬದಲಾಯಿಸುವ ಬಹುಮಾನವನ್ನು ಅನ್‌ಲಾಕ್ ಮಾಡಿದರು.

ಇದು ಅವರ ಕುಟುಂಬದ ನಗುವನ್ನು ಎಂದಿಗಿಂತಲೂ ವಿಶಾಲವಾಗಿಸಿತು. ಗೆಲ್ಲುವ ನಿಮ್ಮ ಅವಕಾಶ ಇನ್ನೂ ಇಲ್ಲಿದೆ ತಪ್ಪಿಸಿಕೊಳ್ಳಬೇಡಿ ರಿಯಲ್‌ಮಿ ಲಕ್ಕಿ ಡ್ರಾ ಅಕ್ಟೋಬರ್ 31, 2025 ರವರೆಗೆ ಮುಂದುವರಿಯುತ್ತದೆ.

ಕಲಬುರಗಿ ವಿಭಾಗದ ಗ್ರಾಹಕರು ರಿಯಲ್ ಮಿ ಮೊಬೈಲ್ಸ್ ಖರಿದಿಸಿ ಲಕ್ಕಿ ಡ್ರಾ ನಲ್ಲಿ ಪಾಲ್ಗೊಂಡು ಹೆಚ್ಚಿನ ಬಹುಮಾನ ಗೆಲ್ಲುವಂತಾಗಲಿ ಎಂದು ಕಲಬುರಗಿ ವಿಭಾಗೀಯ ಎಬಿಎಂ ಸಂತೋಷ್ ಬಿರಾದರ್ ಮತ್ತು ಎಎಸ್‌ಎಂ ಭೀಮರಾವ್ ಪೂಜಾರಿ ಅವರು ಹಾರೈಸಿದ್ದಾರೆ.

# ಪ್ರಗತಿಪರ ಸಂಘಟನೆಗಳ ಒಕ್ಕೂಟದ ಖಂಡನೆ



ಮಲ್ಲಮ್ಮ ನುಡಿ ವಾರ್ತೆ

ಮೈಸೂರು: ಅ.09:-ಪ್ರಗತಿಪರ ಸಂಘಟನೆಗಳು, ದಲಿತ ಸಂಘಟನೆಗಳ ಒಕ್ಕೂಟದವತಿಯಿಂದ ನ್ಯಾಯಾಲಯದ ಎದುರಿನ ಗಾಂಧಿ ಪುತ್ಥಳಿ ಮುಂಭಾಗ ಪ್ರತಿಭಟನೆ ನಡೆಸುವ ಮೂಲಕ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಾಧೀಶ ಬಿ.ಆರ್.ಗವಾಯಿ ಅವರ ಮೇಲೆ ಶೂ ಎಸೆಯಲು ಯತ್ನಿಸಿದ ವಕೀಲ ರಾಕೇಶ್ ಕಿಶೋರ್ ಅವರ ನಡೆಯನ್ನು ಖಂಡಿಸಿದರು.

# ಹದಗೆಟ್ಟ ರಸ್ತೆ ರಿಪೇರಿಗೆ ಒತ್ತಾಯ




(ವರದಿ.ಡಿ.ಕೆ. ಪ್ರಹ್ಲಾದ.)

ಬಸವಕಲ್ಯಾಣ :- ತಾಲೂಕಿನ ಗೋಕುಳ ಗ್ರಾಮದಿಂದ ತಾಂಡಾದವರೆಗೆ ಹೋಗುವ ಮುಖ್ಯ ರಸ್ತೆ ಹದಗೆಟ್ಟು ಹೋಗಿವೆ ಈ ರಸ್ತೆಯಲ್ಲಿ ಬಹಳಷ್ಟು ತಗು ಗುಂಡಿಗಳು ಬಿದ್ದಿರುವುದರಿಂದ ರಸ್ತೆಯ ಮೇಲೆ ಓಡಾಡುವ ಬೈಕ್ ಸವಾರರು ಬಿದ್ದು ಸಣ್ಣಪುಟ್ಟ ಗಾಯಗಳಾಗಿವೆ ಎಂದು ಸಚಿನ್ ರೆಡ್ಡಿ ಯವರು ತಿಳಿಸಿದ್ದಾರೆ. ಈ ಮುಖ್ಯ ರಸ್ತೆಯು ಬಸವಕಲ್ಯಾಣ ಹಾಗೂ ಹುಮನಾಬಾದ ಎರಡು ತಾಲೂಕಿನ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆ ಇದಾಗಿದೆ ರಸ್ತೆಯು ಅಲ್ಲ ಅಲ್ಲಿ ಹದಗೆಟ್ಟು ಹೋಗಿವೆ ಇವುಗಳ ರಿಪೇರಿ ಮಾಡುವುದು ಬಹಳ ಅವಶ್ಯಕತೆ ಇದೆ. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಇತ ಕಡೆ ಗಮನ ಹರಿಸುತ್ತಿಲ್ಲ ಎಂದು ದೂರಿದ್ದಾರೆ. ಈ ಮಾರ್ಗವಾಗಿ ಬಹಳಷ್ಟು ವಾಹನ ಸಂಚರಿಸುತ್ತವೆ ದ್ವಿಚಕ್ರವಾಹನ ಅಟು ಬಸು. ಲಾರಿ ಸೇರಿದಂತೆ ಅನೇಕ ವಾಹನಗಳು ಇಲ್ಲಿಂದಲೆ ಅನೇಕ ಗ್ರಾಮಗಳಿಗೆ ಸಂಚರಿಸುತ್ತವೆ ಎಂದರು. ಈ ಭಾಗದ ಜನರು ರಸ್ತೆಯ ಮೇಲೆ ಓಡಾಡುವ ಬೈಕ್ ಸವಾರರು ಬಿದ್ದು ಸಣ್ಣಪುಟ್ಟ ಗಾಯಗಳಾಗಿವೆ ಎಂದು ತಿಳಿಸಿದರು.

ಇನ್ನುಮುಂದೆ ಯಾದರು ಸಂಬಂಧಿಸಿದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಇತ ಕಡೆ ಗಮನ ಹರಿಸಿ ಆದಷ್ಟು ಬೇಗ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ಘಾಟಬೋರಾಳ ಗ್ರಾಮದ ಸಚಿನ್ ರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನ್ಯಾಯಮೂರ್ತಿಗಳಿಗೆ ಶೂ ಎಸೆತ- ವಕೀಲನ ಬಂಧನಕ್ಕೆ ಆಗ್ರಹ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.9-ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರ ಮೇಲೆ ವಕೀಲರೊಬ್ಬರು ಶೂ ಎಸೆದು ಹಲ್ಲೆ ನಡೆಸಲು ಯತ್ನಿಸಿದ ಘಟನೆಯನ್ನು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ, ಜೈ ಭೀಮ ಸಂಘಟನೆ ತೀವ್ರವಾಗಿ ಖಂಡಿಸಿ ಗುರುವಾರ ಪ್ರತಿಭಟನೆ ನಡೆಸಿತು. ನವನಗರದ ಜಿಲ್ಲಾಡಳಿತ ಭವನ ಎದುರು ಸಂಘಟನೆಯ ಕಾರ್ಯಕರ್ತರು ಪ್ರತಿಭಟನೆ ನಡೆಸಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಟೀಕೆ ಟಿಪ್ಪಣಿಗಳನ್ನು ಗೌರವಯುತವಾಗಿ ಸ್ವೀಕರಿಸಬೇಕು. ಅದುವೇ ಪ್ರಜಾಪ್ರಭುತ್ವ. ಸಂವಿಧಾನ ಮತ್ತು ನ್ಯಾಯಾಂಗ ವ್ಯವಸ್ಥೆಯನ್ನು ಗೌರವಿಸಬೇಕಾದ ವಕೀಲರ ಅನುಚಿತ ವರ್ತನೆಯನ್ನು ಯಾರೂ ಸಮರ್ಥನೆ ಮಾಡಿಕೊಳ್ಳಲು ಸಾಧ್ಯವಿಲ್ಲ ಎಂದಿರುವ ಪ್ರತಿಭಟನಾಕಾರರು, ಅನುಚಿತವಾಗಿ ನಡೆದುಕೊಂಡಿರುವ ವಕೀಲರನ್ನು ಕೂಡಲೇ ಬಂಧಿಸಬೇಕೆಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಹಣಮಂತ ಚಿಮ್ಮಲಗಿ, ಶಂಕ್ರಪ್ಪ ದೊಡಮನಿ, ಮಾರುತಿ ಮರೆಗುದ್ದಿ, ಮಾರುತಿ ಬಾವಿಕಟ್ಟಿ, ಲಕ್ಷ್ಮಣ ದೊಡಮನಿ, ನಾಗಪ್ಪ ದೊಡಮನಿ, ರಮೇಶ ಪೂಜಾರಿ, ಮೌನೇಶ ಜೈಮುನಿ, ಪರಶುರಾಮ ಮಾಂಗ ಸೇರಿದಂತೆ ಸಂಘಟನೆಯ ಕಾರ್ಯಕರ್ತರು ಪಾಲ್ಗೊಂಡಿದ್ದರು.

# ಕಲಬುರಗಿ ಕೇಂದ್ರ ಕಾರಾಗೃಹದ ಬಂದಿಗಳಿಗೆ ಚಿತ್ರ ಬಿಡಿಸುವ ಸ್ಪರ್ಧೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.09--ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ-2025ರ ದಿನಾಚರಣೆ ನಿಮಿತ್ತ ಕಲಬುರಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದವತಿಯಿಂದ ಬಂದಿಗಳಿಗೆ “Justice for All: Through the Lens of Legal Aid” ಥೀಮ್ ಅಡಿಯಲ್ಲಿ (ದಿನಾಂಕ: 08-10-2025) ಬುಧವಾರ ಕಾರಾಗೃಹದ ಬಂದಿಗಳಿಗೆ ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಚಿತ್ರಗಳನ್ನು ಬಿಡುಸುವ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಯಿತು.

ಈ ಚಿತ್ರ ಬಿಡಿಸುವ ಸ್ಪರ್ಧೆಯಲ್ಲಿ ಕಾರಾಗೃಹದ ಬಂದಿಗಳು ಪೇಂಟಿಂಗ್, ವಿಡಿಯೋ, ಸ್ಕೇಚ್‌ಗಳ ಮೂಲಕ ಚಿತ್ರಗಳನ್ನು ಬಿಡಿಸಿದರು. ಈ ಸಂಸ್ಥೆಯ ಮುಖ್ಯಸ್ಥರಾದ ಡಾ॥ ಅನಿತಾ ಆರ್, ಸಹಾಯಕ ಅಧೀಕ್ಷಕ ಚನ್ನಪ್ಪ ಯಟಗಾರ, ಶಿಕ್ಷಕರಾದ ನಾಗರಾಜ ಮೂಲಗೆ ಅವರು ಚಿತ್ರಗಳನ್ನು ಅಂತಿಮವಾಗಿ ಪರಿಶೀಲಿಸಿ ಮೂರು ಬಂದಿಗಳಾದ ವಿಜಯ್ ಮೋಹನ್ ಸಿಂಗ್, ಅಮೃತ ಹಾಗೂ ಸತೀಶ್ ಅವರು ಬಿಡಿಸಿದ ಚಿತ್ರಗಳನ್ನು ಆಯ್ಕೆ ಮಾಡಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಮುಖ್ಯಸ್ಥರಾದ ಡಾ॥ ಅನಿತಾ ಆರ್. ಅವರು ಮಾತನಾಡಿ, ಕೇಂದ್ರ ಕಾರಾಗೃಹದ ಬಂದಿಗಳು ಬಿಡಿಸಿದ ಚಿತ್ರಗಳನ್ನು ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ದಿನಾಚರಣೆ ನವದೆಹಲಿಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಪ್ರದರ್ಶಿಸಲಾಗುತ್ತದೆ. ಅಲ್ಲಿಯೂ ಕೂಡ ಈ ಚಿತ್ರಗಳು ಪ್ರದರ್ಶನದಲ್ಲಿ ಆಯ್ಕೆಯಾಗಲಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಜೈಲರ್‌ಗಳಾದ ಸುನಂದಾ ವಿ., ಸಾಗರ ಪಾಟೀಲ್, ಶ್ರೀಮಂತಗೌಡ ಪಾಟೀಲ್, ಮುಖ್ಯ ವೀಕ್ಷಕರಾದ ಮಹೇಶ್ ಪಾಟೀಲ್ ಹಾಗೂ ಬಂಡೆಪ್ಪ ಅವರು ಉಪಸ್ಥಿತರಿದ್ದರು.

# ಇಂದಿರಾ ಕ್ಯಾಂಟಿನ್ ಬಡವರ ಪಾಲಿಗೆ ವರದಾನ:ಶಾಸಕ ಮೇಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.9–ಇಂದಿರಾ ಕ್ಯಾಂಟಿನ ತೆರೆಯುವ ಮೂಲಕ ಸರ್ಕಾರ ಬಡವರು ಮತ್ತು ಮಧ್ಯಮ ವರ್ಗದವರ ಹಸಿವು ನೀಗಿಸಲು ಮುಂದಾಗಿದೆ ಎಂದು ಶಾಸಕ ಎಚ್.ವಾಯ್.ಮೇಟಿ ಹೇಳಿದರು.

ತಾಲೂಕಿನ ಶಿರೂರ ಪಟ್ಟಣದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ಬಳಿ ನಿರ್ಮಿಸಲಾಗಿರುವ ಇಂದಿರಾ ಕ್ಯಾಂಟಿನ ಕಟ್ಟಡವನ್ನು ಗುರುವಾರ ಉದ್ಘಾಟಿಸಿ ಮಾತನಾಡಿದ ಅವರು, ಬಡವರು, ಮಧ್ಯಮ ವರ್ಗದವರು, ಕಾರ್ಮಿಕರು, ಬಡ ಶಾಲಾ ಮಕ್ಕಳಿಗೆ ಕೈಗೆಟುಕುವ ದರದಲ್ಲಿ ಉಪಹಾರ ಹಾಗೂ ಊಟ ನೀಡಲಾಗುತ್ತಿದ್ದು, ಜನ ಇದರ ಪ್ರಯೋಜನವನ್ನು ಪಡೆದುಕೊಳ್ಳಬೇಕು ಎಂದರು.

ಹಸಿವು ಮುಕ್ತ ಕರ್ನಾಟಕ ಮಾಡಬೇಕೆಂಬುದು ಸಿಎಂ ಸಿದ್ದರಾಮಯ್ಯ ಕನಸಾಗಿದ್ದು, ಈ ಮೂಲಕ ಅದನ್ನು ಸಾಕಾರಗೊಳಿಸಲಾಗುತ್ತಿದೆ. ಇಂದಿರಾ ಕ್ಯಾಂಟಿನ ಯೋಜನೆ ಬಡವರ ಪಾಲಿಗೆ ವರದಾನವಾಗಿದೆ ಎಂದು ಶಾಸಕ ಮೇಟಿ ಹೇಳಿದರು.

ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ಎಂ.ರೇಣುಕಾ ಮಾತನಾಡಿ, ಜಿಲ್ಲೆಯಲ್ಲಿ ಇನ್ನೂ ಅನೇಕ ಕಡೆಗಳಲ್ಲಿ ಇಂದಿರಾ ಕ್ಯಾಂಟಿನ ತೆರೆಯಲಾಗುತ್ತಿದ್ದು, ಹಂತ ಹಂತವಾಗಿ ಪ್ರಾರಂಭಿಸಲಾಗುವುದು ಎಂದರು.

ಸಾನಿಧ್ಯವಹಿಸಿದ್ದ ಶಿವಯೋಗಾಶ್ರಮದ ಸಿದ್ದಲಿಂಗ ಸ್ವಾಮೀಜಿ ಮಾತನಾಡಿ, ಪ್ರತಿ ವ್ಯಕ್ತಿಗೆ ಅನ್ನ, ನೀರು, ಗಾಳಿ ಹಾಗೂ ಉತ್ತಮ ಮಾತು ಅತ್ಯಂತ ಅವಶ್ಯಕ. ಅದರಲ್ಲೂ ಅನ್ನದಾನ ಶ್ರೇಷ್ಠವಾಗಿದ್ದು, ಸರ್ಕಾರ ಬಡವರು, ಕೂಲಿ ಕಾರ್ಮಿಕರು, ಬಡ ವಿದ್ಯಾರ್ಥಿಗಳಿಗೆ ಕಡಿಮೆ ಬೆಲೆಯಲ್ಲಿ ಉಪಹಾರ, ಊಟ ಸಿಗಬೇಕು ಎಂಬ ಉದ್ದೇಶದಿಂದ ಇಂದಿರಾ ಕ್ಯಾಂಟಿನ ತೆರೆದಿರುವುದು ಶ್ಲಾಘನೀಯ ಕಾರ್ಯ. ಇದರ ಪ್ರಯೋಜನ ಅಗತ್ಯವುಳ್ಳವರಿಗೆ ದೊರೆಯಲಿ ಎಂದು ಹೇಳಿದರು.

ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ಶಿವಾನಂದ ಆಲೂರ ಪ್ರಾಸ್ತಾವಿಕವಾಗಿ ಮಾತನಾಡಿ, 1.50 ಕೋಟಿ ರೂ. ಗಳ ವೆಚ್ಚದಲ್ಲಿ ಇಂದಿರಾ ಕ್ಯಾಂಟಿನ ನಿರ್ಮಿಸಲಾಗಿದೆ. ಗುಣಮಟ್ಟದ ಉಪಹಾರ, ಊಟ ನೀಡುವಂತೆ ಗುತ್ತಿಗೆದಾರರಿಗೆ ಸೂಚಿಸಲಾಗಿದೆ ಎಂದರು.

ಜಿಪಂ ಮಾಜಿ ಅಧ್ಯಕ್ಷೆ ಬಾಯಕ್ಕ ಮೇಟಿ, ಗ್ರಾಪಂ ಮಾಜಿ ಅಧ್ಯಕ್ಷ ರಂಗಪ್ಪ ಮಳ್ಳಿ, ಎಸ್.ಬಿ.ಮಾಚಾ, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ತಾಲ್ಲೂಕು ಅಧ್ಯಕ್ಷ ಎಸ್.ಎನ್.ರಾಂಪುರ, ಪಟ್ಟಣ ಪಂಚಾಯತಿ ನಾಮ ನಿರ್ದೇಶಿತ ಸದಸ್ಯರಾದ ಹನಮಂತ ಆಡಿನ, ಸಿದ್ದಪ್ಪ ಗಾಳಿ, ಜಗದೀಶ ದೇಸಾನಿ, ತಹಸೀಲ್ದಾರ ವಾಸುದೇವ ಸ್ವಾಮಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಕಾರ್ಯಪಾಲಕ ಅಭಿಯಂತರ ವೆಂಕಟೇಶ ಹುಣಸಿಗಿಡದ, ಸಹಾಯಕ ಕಾರ್ಯಪಾಲಕ ಅಭಿಯಂತರ ವಿಠ್ಠಲ ಮಾಶ್ಯಾಳ, ಪಟ್ಟಣ ಪಂಚಾಯತಿ ಕಿರಿಯ ಅಭಿಯಂತರ ವಿರುಪಾಕ್ಷ ಚವಡಿ, ವ್ಯವಸ್ಥಾಪಕ ಪಿ.ಪಿ.ವರದಪ್ಪನವರ, ಸಂಜಯ ನಡುವಿನಮನಿ ಮತ್ತಿತರರು ಇದ್ದರು.

# ಡಾ. ಅಬ್ದುಲ್ ಖದೀರ್‌ಗೆ ರಾಷ್ಟ್ರೀಯ ಪ್ರಶಸ್ತಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 09 : ಇಲ್ಲಿಯ ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹದ ಅಧ್ಯಕ್ಷ ಡಾ. ಅಬ್ದುಲ್ ಖದೀರ ಅವರನ್ನು ಅಲಿಗಢ್ ಮುಸ್ಲಿಮ್ ವಿಶ್ವವಿದ್ಯಾಲಯ (ಎಎಂಯು)ದ 2025ನೇ ಸಾಲಿನ ರಾಷ್ಟ್ರೀಯ ಸರ್ ಸೈಯದ್ ಎಕ್ಸಲೆನ್ಸ್ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹವು ದೇಶದ ವಿವಿಧ ರಾಜ್ಯಗಳು ಹಾಗೂ ವಿದೇಶದಲ್ಲೂ ತನ್ನ ಶಾಖೆಗಳನ್ನು ಹೊಂದಿದೆ. ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಅನುಪಮ ಕೊಡುಗೆಗಾಗಿ ಡಾ.ಅಬ್ದುಲ್ ಖದೀರ್ ಅವರಿಗೆ ಪ್ರಶಸ್ತಿ ಒಲಿದು ಬಂದಿದೆ.

ಅಲಿಗಢ್ ಮುಸ್ಲಿಮ್ ವಿದ್ಯಾಲಯದಲ್ಲಿ ಅ. 17 ರಂದು ನಡೆಯಲಿರುವ ವಿಶ್ವವಿದ್ಯಾಲಯದ ಸಂಸ್ಥಾಪಕ ಸರ್ ಸೈಯದ್ ಅಹಮ್ಮದ್ ಖಾನ್ ಅವರ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ತಮ್ಮ ಶೈಕ್ಷಣಿಕ ಕ್ರಾಂತಿಯ ಮೂಲಕ ಕರ್ನಾಟಕ ಮಾತ್ರವಲ್ಲದೆ, ಇಡೀ ದೇಶವೇ ಬೀದರ್‌ನತ್ತ ತಿರುಗಿ ನೋಡುವಂತೆ ಮಾಡಿದವರು ಡಾ. ಅಬ್ದುಲ್ ಖದೀರ್.

ಸಾವಿರಾರು ವಿದ್ಯಾರ್ಥಿಗಳ ವೈದ್ಯಕೀಯ ಹಾಗೂ ಇತರ ಕೋರ್ಸ್‌ಗಳ ಕನಸು ನನಸಾಗಿಸಿದ ಹಿರಿಮೆ ಅವರದ್ದು.

ಬೀದರ್‌ನಿಂದ ಆರಂಭವಾದ ಶಾಹೀನ್ ಶಿಕ್ಷಣ ಸಂಸ್ಥೆ ತನ್ನ ಗುಣಮಟ್ಟದ ಸ್ಪರ್ಧಾತ್ಮಕ ಶಿಕ್ಷಣದಿಂದಾಗಿ ಇಂದು ದೇಶ, ವಿದೇಶಕ್ಕೂ ಪಸರಿಸಿದೆ.

ಶಿಕ್ಷಣ ಹಾಗೂ ಸಾಮಾಜಿಕ ಕ್ಷೇತ್ರಕ್ಕೆ ನೀಡಿದ ಕೊಡುಗೆಗಾಗಿ ಡಾ. ಅಬ್ದುಲ್ ಖದೀರ್ ಅವರಿಗೆ ಅನೇಕ ಪ್ರಶಸ್ತಿ, ಸಮ್ಮಾನಗಳು ಸಂದಿವೆ.

ಶಾಹೀನ್ ಶಿಕ್ಷಣ ಸಂಸ್ಥೆ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಗೂ ಭಾಜನವಾಗಿದೆ.

ರಾಷ್ಟ್ರೀಯ ಸರ್ ಸೈಯದ್ ಎಕ್ಸಲೆನ್ಸ್ ಪ್ರಶಸ್ತಿಗೆ ಆಯ್ಕೆ ಮಾಡಿರುವುದು ಸಂತಸ ಉಂಟು ಮಾಡಿದೆ.

ಇದು, ನನ್ನ ಸಾಮಾಜಿಕ ಹೊಣೆಗಾರಿಕೆಯನ್ನು ಇನ್ನಷ್ಟು ಹೆಚ್ಚಿಸಿದೆ ಎಂದು ಡಾ. ಅಬ್ದುಲ್ ಖದೀರ್ ಪ್ರತಿಕ್ರಿಯಿಸಿದ್ದಾರೆ.

# ವಾಲಿಬಾಲ್ ಕ್ರೀಡೆ: ಎನ್.ಎನ್. ತಾಂಡಾ ವಿಭಾಗಮಟ್ಟಕ್ಕೆ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.09–ಆಳಂದ ತಾಲೂಕಿನ ಎನ್.ಎನ್.ತಾಂಡಾ (ಕೊರಳ್ಳಿ) ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ವಿದ್ಯಾರ್ಥಿನಿಯರು 2025–26ನೇ ಶೈಕ್ಷಣಿಕ ಸಾಲಿನಲ್ಲಿ ದಿನಾಂಕ: 08–10–2025ರಂದು ಶ್ರೀ.ಚಂದ್ರಶೇಖರ ಪಾಟೀಲ್ ಕ್ರೀಡಾಂಗಣದಲ್ಲಿ ಜರುಗಿದ ಜಿಲ್ಲಾ ಮಟ್ಟದ ಬಾಲಕಿಯರ ಪ್ರಾಥಮಿಕ ವಿಭಾಗದ ವಾಲಿಬಾಲ್ ಕ್ರೀಡೆಯಲ್ಲಿ ಭಾಗವಹಿಸಿ, ಪ್ರಥಮ ಸ್ಥಾನ ಪಡೆದು ವಿಭಾಗ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಈ ವಸತಿ ಶಾಲೆಯ ವಿದ್ಯಾರ್ಥಿನಿಯರು ವಿಭಾಗಮಟ್ಟಕ್ಕೆ ಆಯ್ಕೆಯಾಗಿರುವುದಕ್ಕೆ ಹಾಗೂ ಬಾಲಕಿಯರ ಪ್ರೌಢ ವಿಭಾಗದ ವಾಲಿಬಾಲ್ ಕ್ರೀಡೆಯಲ್ಲಿ ಜಿಲ್ಲಾ ಮಟ್ಟದಲ್ಲಿ ದ್ವಿತೀಯ ಸ್ಥಾನ ಪಡೆದು ವಸತಿ ಶಾಲೆಗೆ ಕೀರ್ತಿ ತಂದಿರುವುದಕ್ಕಾಗಿ ಈ ವಸತಿ ಶಾಲೆಯ ಪ್ರಾಂಶುಪಾಲರಾದ ಪ್ರಶಾಂತ ಕಡಗಂಚಿ ಅವರು ಹರ್ಷ ವ್ಯಕ್ತಪಡಿಸಿದ್ದಾರೆ.

ವಿದ್ಯಾರ್ಥಿನಿಯರ ಕ್ರೀಡೆಗಳಲ್ಲಿನ ಸಾಧನೆಗಾಗಿ ಸಿಬ್ಬಂದಿಗಳು ಹಾಗೂ ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ಪ್ರೀತಿ ದೊಡ್ಡಮನಿ ಅವರು ಮೆಚ್ಚುಗೆಯನ್ನು ವ್ಯಕ್ತಪಡಿಸಿ ವಿದ್ಯಾರ್ಥಿಗಳ ಕ್ರೀಡಾ ಸಾಧನೆಯನ್ನು ಪ್ರಶಂಸಿಸಿದ್ದಾರೆ ಎಂದು ಆಳಂದ ತಾಲೂಕಿನ ಎನ್.ಎನ್.ತಾಂಡಾ (ಕೊರಳ್ಳಿ) ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಿಮರೋಡಿ ನಿರೀಕ್ಷಣಾ ಜಾಮೀನು ಅರ್ಜಿ ವಜಾ



ಮಂಗಳೂರು:ಅ.9: ಅಕ್ರಮವಾಗಿ ಶಸ್ತ್ರಾಸ್ತ್ರ ಹೊಂದಿದ ಪ್ರಕರಣ ಸಂಬಂಧ ನಿರೀಕ್ಷಣಾ ಜಾಮೀನು ಕೋರಿ ಮಹೇಶ್ ಶೆಟ್ಟಿ ತಿಮರೋಡಿ ಸಲ್ಲಿಸಿದ್ದ ಅರ್ಜಿಯನ್ನು ಕೋರ್ಟ್ ವಜಾಗೊಳಿಸಿದೆ.

ಗುರುವಾರ ದಕ್ಷಿಣ ಕನ್ನಡ ಜಿಲ್ಲಾ ಸೆಷನ್ಸ್ ನ್ಯಾಯಾಲಯ ಅರ್ಜಿ ವಜಾಗೊಳಿಸಿ ಆದೇಶ ಹೊರಡಿಸಿದೆ. ಈಗಾಗಲೇ ವಿಚಾರಣೆಗೆ ಹಾಜರಾಗುವಂತೆ ಬೆಳ್ತಂಗಡಿ ಪೊಲೀಸರು ಮೂರು ಬಾರಿ ನೋಟಿಸ್ ನೀಡಿದ್ದರು. ಪೊಲೀಸರು ನೀಡಿದ ಮೂರು ನೋಟಿಸ್‌ಗೂ ತಿಮರೋಡಿ ಪ್ರತಿಕ್ರಿಯಿಸಿರಲಿಲ್ಲ. ವಿಚಾರಣೆಗೆ ಹಾಜರಾದರೆ ಬಂಧನ ಭೀತಿ ಕಾರಣಕ್ಕೆ ನಾಪತ್ತೆಯಾಗಿದ್ದಾರೆ. ಕಳೆದ 20 ದಿನಗಳಿಂದ ತಿಮರೋಡಿ ತಲೆಮರೆಸಿಕೊಂಡಿದ್ದಾರೆ.

ಧರ್ಮಸ್ಥಳ ಪ್ರಕರಣ ಸಂಬಂಧ ಎಸ್‌ಐಟಿ ಶೋಧ ಸಂದರ್ಭದಲ್ಲಿ ತಿಮರೋಡಿ ಮನೆಯಲ್ಲಿ ಅಕ್ರಮ ಶಸ್ತ್ರಾಸ್ತ್ರ ಸಂಗ್ರಹಿಸಿರುವುದು ಬೆಳಕಿಗೆ ಬಂದಿತ್ತು. ಎಸ್‌ಐಟಿ ಅಧಿಕಾರಿಗಳು 2 ತಲವಾರು ಮತ್ತು ಒಂದು ಬಂದೂಕು ವಶಕ್ಕೆ ಪಡೆದಿದ್ದರು. ಈ ಹಿನ್ನೆಲೆ ವಿಚಾರಣೆಗೆ ಹಾಜರಾಗುವಂತೆ ಎಸ್‌ಐಟಿ ಅಧಿಕಾರಿಗಳು ನೋಟಿಸ್ ಜಾರಿ ಮಾಡಿದ್ದರು.

# ಬೀದರ ಜಿಲ್ಲೆಯ ಸರ್ಕಾರಿ ಶಾಲಾ ಮಕ್ಕಳ ಪ್ರತಿಭೆ ಮತ್ತೊಮ್ಮೆ ವಿಶ್ವಮಟ್ಟದಲ್ಲಿ ಕಂಗೊಳಿಸಿದೆ: ಇಓ ಡಾ.ಗಿರೀಶ ಬದೋಲೆ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.09: ಬೀದರ್ ಜಿಲ್ಲೆಯ ಸರ್ಕಾರಿ ಶಾಲಾ ಮಕ್ಕಳ ಪ್ರತಿಭೆಗಳು ಮತ್ತೊಮ್ಮೆ ವಿಶ್ವಮಟ್ಟದಲ್ಲಿ ಕಂಗೊಳಿಸಿವೆ. ಬೀದರ್ ಜಿಲ್ಲೆಯ ಆದರ್ಶ ವಿದ್ಯಾಲಯ ಜನವಾಡ ಶಾಲೆಯ ವಿದ್ಯಾರ್ಥಿನಿಯರಾದ ಶ್ರೇಯಾ ಮತ್ತು ಸುಕೃತಿ ಇವರಿಂದ ವಿನ್ಯಾಸಗೊಂಡ "Hydrophonic Forming" ಹಾಗೂ ಆದಿತ್ಯ ಮತ್ತು ಶ್ರೇಯಸ್ ಇವರಿಂದ ನಿರ್ಮಿತವಾದ "EDUKIOSK" ಎಂಬ ನವೀನ ಮಾದರಿಗಳು Global Innovation Challenge£À Finalist (ಅಂತಿಮ ಹಂತ)ಗೆ ಆಯ್ಕೆಯಾಗಿವೆ. ಇದು ಇವರಿಂದ ವಿನ್ಯಾಸಗೊಂಡ ಮಹತ್ತರ ಸಾಧನೆಯಾಗಿದೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ ತಿಳಿಸಿದರು.

ಈ ವಿದ್ಯಾರ್ಥಿಗಳ ಸಾಧನೆಗೆ ಕರ್ನಾಟಕ ಸರ್ಕಾರ ಸಮಗ್ರ ಶಿಕ್ಷಣ ಕರ್ನಾಟಕ ವತಿಯಿಂದ ನಡೆಯುತ್ತಿರುವ ಅಗಸ್ತ್ಯ ವಿಜ್ಞಾನ ಚಟುವಟಿಕೆ ಕೇಂದ್ರ ಸ್ಫೂರ್ತಿಯಾಗಿದೆ. ಈ ಆಯ್ಕೆ ಮೂಲಕ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳು ರಾಷ್ಟ್ರೀಯ, ಅಂತಾರಾಷ್ಟ್ರೀಯ ಹಾಗೂ ಅಃಖಇ ಶಾಲೆಗಳೊಂದಿಗೆ ಸಮಾನ ಮಟ್ಟದಲ್ಲಿ ಸ್ಪರ್ಧಿಸುವ ಅವಕಾಶ ಪಡೆದಿದ್ದಾರೆ. ಸರ್ಕಾರಿ ಶಾಲೆಗಳ ಪೈಕಿ ವಿದ್ಯಾರ್ಥಿಗಳ ಯೋಜನೆಗಳು ಅಂತಿಮ ಹಂತ ಪ್ರವೇಶಿಸಿರುವುದು ಗಮನಾರ್ಹ ಸಂಗತಿಯಾಗಿದೆ ಎಂದರು.

ಈ ಯಶಸ್ಸಿನ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಗಿರೀಶ್ ದಿಲೀಪ್ ಬಡೋಲೆ ಅವರು ಈ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರಶಂಸಾ ಪತ್ರ (Certificate) ನೀಡಿ ಗೌರವಿಸಿದರು.

ಬೀದರ್ ಆದರ್ಶ ವಿದ್ಯಾಲಯ ಜನವಾಡ ವಿದ್ಯಾರ್ಥಿಗಳು ಈ ಹಂತ ತಲುಪಿರುವುದು ಉತ್ತರ ಕರ್ನಾಟಕದ ಸೃಜನಶೀಲತೆ ಮತ್ತು ವೈಜ್ಞಾನಿಕ ಚಾತುರ್ಯವನ್ನು ವಿಶ್ವಮಟ್ಟದಲ್ಲಿ ಪ್ರತಿಷ್ಠಾಪಿಸಿದೆ.

ಈ ಸಾಧನೆಗೆ ಕಾರಣರಾದ ವಿದ್ಯಾರ್ಥಿಗಳು, ಪೊ?ಷಕರು, ಅಗಸ್ತ್ಯ ಫೌಂಡೇಶನ್‌ನ ಮುಖ್ಯಸ್ಥರು ಶ್ರೀ ಬಾಬುರಾವ್ ಸಲಸರೆ,

ಶಾಲೆಯ ವಿಜ್ಞಾನ ಶಿಕ್ಷಕಿಯರಾದ ಶ್ರೀಮತಿ ಕೃಷ್ಣವೇಣಿ ಮೇಡಂ, ಹಾಗೂ ಅಗಸ್ತ್ಯ ವಿಜ್ಞಾನ ಕೇಂದ್ರದ ಮಾರ್ಗದರ್ಶಕರಾದ ಆಕಾಶ ಪಾಟೀಲ್ ಅವರಿಗೆ ಹೃತ್ಪೂರ್ವಕ

ಅಭಿನಂದನೆಗಳು. ನಿಮ್ಮ

ಸಾಧನೆಯು ಕರ್ನಾಟಕವನ್ನು ಹೆಮ್ಮೆಪಡುವಂತೆ ಮಾಡಿದೆ ಎಂದು ತಿಳಿಸಿದರು.

# ಎಸ್‌ಬಿಐ ಬ್ಯಾಂಕ್ ದರೋಡೆ ಪ್ರಕರಣದ ಆರೋಪಿಗಳ ಬಂಧನ



ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ:ಅ.9: ಜಿಲ್ಲೆಯ ಚಡಚಣ ಶಾಖೆಯ ಎಸ್‌ಬಿಐ ಬ್ಯಾಂಕ್ ದರೋಡೆ ಪ್ರಕರಣದ ಆರೋಪಿಗಳನ್ನ ಬಂಧಿಸುವಲ್ಲಿ ವಿಜಯಪುರ ಪೋಲಿಸರು ಯಶಸ್ವಿಯಾಗಿದ್ದರೆ.

ಒಟ್ಟು ನಾಲ್ವರು ಆರೋಪಿಗಳನ್ನ ಪೊಲೀಸರು ಬಂಧಿಸಿದ್ದಾರೆ. ಬಿಹಾರ ರಾಜ್ಯದ ರಾಕೇಶ ಕುಮಾರ್ ಸಹಾನಿ, ರಾಜಕುಮಾರ ಪಾಸ್ವಾನ, ರಕ್ಷಕ ಕುಮಾರ್ ಮಾತೋ ಬಂಧಿತ ಆರೋಪಿಗಳಾಗಿದ್ದಾರೆ. ಬಂಧಿರೆಲ್ಲರೂ 21, 22 ವಯಸ್ಸಿನ ಯುವಕರು.

ಈಗ ಬಂಧಿಸಲಾ ಮೂವರು ಆರೋಪಿಗಳು ಅಕ್ರಮವಾಗಿ ಪಿಸ್ತೂಲ್ ಪೂರೈಕೆ ಹಾಗೂ ಕೃತ್ಯಕ್ಕೆ ಸಹಕಾರ ನೀಡಿದ್ದರು.

ಮತ್ತೋರ್ವ ಆರೋಪಿ ಮಹಾರಾಷ್ಟ್ರ ರಾಜ್ಯದ ಪ್ರಮುಖ ಆರೋಪಿಯಾಗಿದ್ದು, ಅ.7ರಂದೇ ಬಂಧಿಸಿ ನ್ಯಾಯಾಂಗ ತನಿಖೆಗೆ ಒಪ್ಪಿಸಲಾಗಿತ್ತು. ಆದ್ರೆ ಆತನ ಹೆಸರನ್ನ ಬಹಿರಂಗಪಡಿಸಿಲ್ಲ.

ಬ್ಯಾಂಕ್ ದರೋಡೆ ಪ್ರಕರಣದಲ್ಲಿ ಈವರೆಗೆ 9.1 ಕೆಜಿ ಚಿನ್ನ, 86,31,220 ರೂ. ನಗದು ಜಪ್ತಿ ಮಾಡಲಾಗಿದೆ. ಚಡಚಣ ಬ್ಯಾಂಕ್ ದರೋಡೆಯಲ್ಲಿ ಒಟ್ಟು ನಾಲ್ವರ ಬಂಧನವಾಗಿದ್ದು, ತನಿಖೆ ಮುಂದುವರೆದಿದೆ ಅಂತಾ ಎಡಿಜಿಪಿ ಆರ್ ಹಿತೇಂದ್ರ ಹಾಗೂ ಎಸ್ಪಿ ಲಕ್ಷ್ಮಣ ನಿಂಬರಗಿ ಸ್ಪಷ್ಟಪಡಿಸಿದ್ದಾರೆ.


ಜಿಲ್ಲೆಯ ಚಡಚಣ ಎಸ್‌ಬಿಐ ಬ್ಯಾಂಕ್‌ನಲ್ಲಿ 1 ಕೋಟಿ ರೂ. ನಗದು, 12 ರಿಂದ 13 ಕೆ.ಜಿ ಚಿನ್ನ ದರೋಡೆಯಾಗಿದೆ.

ಸಾಲಕ್ಕಾಗಿ ಅಡವಿಟ್ಟದ್ದ 12–13 ಕೆಜಿ ಚಿನ್ನ ದರೋಡೆಯಾಗಿರುವುದಾಗಿ ವಿಜಯಪುರ ಎಸ್ಪಿ ಲಕ್ಷ್ಮಣ ನಿಂಬರಗಿ ಪ್ರಾಥಮಿಕ ಮಾಹಿತಿ ನೀಡಿದ್ದರು.

ಐದಕ್ಕೂ ಹೆಚ್ಚು ಮಂದಿ ಮುಸುಕುಧಾರಿ ದರೋಡೆ–ಕೋರರಿಂದ ಕೃತ್ಯ ನಡೆದಿತ್ತು. ಚಡಚಣ ಪಟ್ಟಣದ ಎಸ್‌ಬಿಐ ಬ್ಯಾಂಕ್‌ನಲ್ಲಿನ ಮ್ಯಾನೇಜರ್,

ಕ್ಯಾಶಿಯರ್ ಹಾಗೂ ಇತರೆ ಸಿಬ್ಬಂದಿ ಕೈಕಾಲು ಕಟ್ಟಿ ಹಾಕಿ ಕೂಡಿ ಹಾಕಿ ದರೋಡೆ ನಡೆಸಲಾಗಿತ್ತು. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದ ಪೊಲೀಸರು ತನಿಖೆ ಕೈಗೊಂಡಿದ್ದರು. ಬ್ಯಾಂಕ್‌ನಲ್ಲಿದ್ದ ಸಿಸಿಟಿವಿ ಕ್ಯಾಮೆರಾ, ಹಾರ್ಡ್ ಡಿಸ್ಕ್ ವಶಕ್ಕೆ ಪಡೆದು ತೀವ್ರ ತಪಾಸಣೆ ನಡೆಸಿದ್ದರು.

# ಉಪ ವಲಯ ಅರಣ್ಯ ಅಧಿಕಾರಿ ಹಾವಪ್ಪಗೆ ಮುಖ್ಯಮಂತ್ರಿ ಪದಕ



ಬೀದರ್:ಅ.9:ಸಾಮಾಜಿಕ ಅರಣ್ಯ ವಲಯದಲ್ಲಿ ಉಪ ವಲಯ ಅರಣ್ಯ ಅಧಿಕಾರಿಯಾಗಿ ಸೇವೆ ಸಲ್ಲಿಸುತ್ತಿರುವ ಶ್ರೀ.

ಹಾವಪ್ಪ ಇವರಿಗೆ 2024–25ನೇ ಸಾಲಿನ ಅತ್ಯುತ್ತಮ ಅರಣ್ಯೀಕರಣಕ್ಕಾಗಿ ಮುಖ್ಯಮಂತ್ರಿ ಪದಕ ಪಡೆದಿದ್ದಾರೆ.

ಅ.8ರಂದು ಬೆಂಗಳೂರಿನ ವಿಧಾನಸೌಧ ಬ್ಲಾಕೆಂಟ್ ಹಾಲ್ ನಡೆದ ಸಮಾರಂಭದಲ್ಲಿ ಅರಣ್ಯ ಇಲಾಖೆಯಲ್ಲಿ ಅತ್ಯುತ್ತಮವಾಗಿ ಸೇವೆ ಸಲ್ಲಿಸಿರುವ 25 ಜನರಿಗೆ ಮುಖ್ಯಮಂತ್ರಿಗಳ ಪದಕ ಆಯ್ಕೆಯಾಗಿದ್ದಾರೆ ಇವರುಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮುಖ್ಯಮಂತ್ರ ಪದಕ ನೀಡಿ ಸನ್ಮಾನಿಸಿ ಗೌರವಿಸಿದರು.

ಅರಣ್ಯ ಅರಣ್ಯ ಸಚಿವರಾದ ಶ್ರೀ. ಈಶ್ವರ ಖಂಡ್ರೆ. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು, (ಅರಣ್ಯಪಡೆ ಮುಖ್ಯಸ್ಥರು), ಮೀನಾಕ್ಷಿನೇಗಿ ಹಲವಾರು ಗಣ್ಯರು ಉಪಸ್ಥಿತರಿದ್ದರು. ಬೀದರ್ ಸಮಾಜಕ ಅರಣ್ಯ ಇಲಾಖೆಯಲ್ಲಿ ಅತ್ಯುತ್ತಮವಿ ಸೇವೆ ಸಲ್ಲಿಸಿರುವ ಹಾವಪ್ಪನವರಿಗೆ ಮುಖ್ಯಮಂತ್ರಿಯ ಪದಕ ದೊರಕಿದ್ದಕ್ಕೆ ಸಾಮಾಜಿಕ ಅರಣ್ಯ ವಿಭಾಗದ ಸಂರಕ್ಷಣಾಧಿಕಾರಿ ಶ್ರೀನಿವಾಸ್ ಎನ್. ಯರಡೋಣಿ. ವಲಯ ಅರಣ್ಯ ಅಧಿಕಾರಿ ಶಿವಕುಮಾರ್ ರಾಥೋಡ್. ಕಚೇರಿ ಅಧೀಕ್ಷಕರಾದ ಕಾಶಿನಾಥ್. ಸಿಬ್ಬಂದಿ ವರ್ಗದವರಾದ ಶೇಕ್ ತಾಯರ ಅಲಿ. ಬಸವರಾಜ್ ಸಜ್ಜನ್. ಮಂಜುನಾಥ್ ಮತ್ತು ಪರಿಸರವಾದಿ ಶೈಲೇಂದ್ರ ಕಾವಡಿ ಹರ್ಷ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ.

# ಸ್ವಚ್ಛ ಹಸಿರು ರಾಯಚೂರಿಗಾಗಿ ಭರವಸೆಯ ಓಟ

ರಾಯಚೂರು ಅ 09 : ನಗರದ ಯುವಜನರು ಸಕಾರಾತ್ಮಕ ಚಟುವಟಿಕೆಗಳ ಕಡೆಗೆ ಆಕರ್ಷಿತರಾಗಬೇಕು ಮತ್ತು ಅವರ ಶಕ್ತಿಯನ್ನು ಸಮಾಜ ಹಿತದ ಕಡೆಗೆ ಹರಿಸಬೇಕು ಎನ್ನುವ ಸದುದ್ದೇಶದಿಂದ ಮಹಾನಗರ ಪಾಲಿಕೆಯು ವಿವಿಧ ಇಲಾಖೆಗಳ ಸಹಯೋಗದಲ್ಲಿ ಅಕ್ಟೋಬರ್ 09ರಂದು ಮ್ಯಾರಾಥಾನ್ ಸ್ಪರ್ಧೆಯನ್ನು ಆಯೋಜನೆ ಮಾಡಿತ್ತು.

ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆ ಮತ್ತು ನಿಯಂತ್ರಣಾಧಿಕಾರಿಗಳ (ಕೆ.ಎಸ್.ಎ.ಪಿ.ಎಸ್) ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ, ಸ್ವಚ್ಛ ಹಸಿರು ರಾಯಚೂರಿಗಾಗಿ ಭರವಸೆಯ ಓಟ ಎಂಬ ವಿಷಯದಡಿಯಲ್ಲಿ 5 ಕಿಲೋಮೀಟರ್ ಮ್ಯಾರಥಾನ್ ಸ್ಪರ್ಧೆಗೆ ಮಹಾನಗರ ಪಾಲಿಕೆಯ ಆಯುಕ್ತ ಜುಬಿನ್ ಮೊಹಪಾತ್ರ ಅವರು ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಆಯುಕ್ತರು, ಪ್ರಸ್ತುತ ಯುವಜನರು ವಿವಿಧ ನಕಾರಾತ್ಮಕ ಚಟುವಟಿಕೆಗಳ ಕಡೆಗೆ ಒಲವು ತೋರುವ ಸನ್ನಿವೇಶದಲ್ಲಿ ಅವರನ್ನು ಸರಿಯಾದ ಮಾರ್ಗದರ್ಶನ ಮತ್ತು ಸಕ್ರಿಯ ಭಾಗವಹಿಸುವಿಕೆಯ ಮೂಲಕ ಸಮುದಾಯದ ಮುಖ್ಯಧಾರೆಗೆ ತರುವುದು ಅತ್ಯಗತ್ಯವಾಗಿದ್ದು, ಈ ಉದ್ದೇಶದಿಂದಲೇ ಇಂತಹ ಕಾರ್ಯಕ್ರಮಗಳನ್ನು ರೂಪಿಸಲಾಗುತ್ತಿದೆ ಎಂದರು.

ಯುವಜನರು ನಮ್ಮ ನಗರದ ಭವಿಷ್ಯ. ಅವರನ್ನು ಸಕಾರಾತ್ಮಕವಾಗಿ ಒಟ್ಟುಗೂಡಿಸುವುದು ನಮ್ಮ ಕರ್ತವ್ಯ. ಇಂದಿನ ಓಟ ಇದರ ಒಂದು ಹಂತ ಮಾತ್ರ. ಯುವಜನರು ದುರ್ಮಾರ್ಗಕ್ಕೆ ತಿರುಗದೆ, ಸಮಾಜದ ಅಭಿವೃದ್ಧಿಯ ಮುಖ್ಯಸ್ಥರಾಗಲು ನಾವು ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದೇವೆ ಮತ್ತು ಮುಂದೆಯೂ ಹಮ್ಮಿಕೊಳ್ಳಲಿದ್ದೇವೆ ಎಂದರು.

ಈ ಕಾರ್ಯಕ್ರಮದ ಯಶಸ್ಸು ಎಂದರೆ ಅದು ಯುವಜನರನ್ನು ಒಳಗೊಳ್ಳುವುದಾಗಿದೆ. ಹೆಚ್ಚಿನ ಕಾರ್ಯಕ್ರಮಗಳನ್ನು ಯೋಜಿಸುವಲ್ಲಿ ಪಾಲಿಕೆ ಮತ್ತು ಇತರೆ ಸಂಸ್ಥೆಗಳನ್ನು ಪ್ರೋತ್ಸಾಹಿಸುವುದಾಗಿದೆ. ಭವಿಷ್ಯದಲ್ಲಿ ಕ್ರಿಕೆಟ್, ವಿಜ್ಞಾನ ಪ್ರದರ್ಶನ, ಸ್ವಚ್ಛತಾ



ಅಭಿಯಾನ, ಕ್ರೀಡಾ ಸ್ಪರ್ಧೆಗಳು ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಲು ಯೋಜನೆಗಳಿವೆ ಎಂದರು.

ಯುವಕರು ದುಶ್ಚಟಗಳಿಗೆ ಬಲಿಯಾಗಿ ಆಯಸ್ಸನ್ನು ಕಳೆದುಕೊಳ್ಳದೆ, ಉತ್ತಮ ರೀತಿಯಲ್ಲಿ ಜೀವನ ಸಾಗಿಸಿ ಸಾಧನೆ ಮಾಡುವ ಕಡೆ ಗಮನ ಹರಿಸಬೇಕು ಎಂದು ಸಲಹೆ ಮಾಡಿದರು.

ಈ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಮಾತನಾಡಿ, ಆರೋಗ್ಯಕರ ಜೀವನಶೈಲಿ ಮತ್ತು ಏಡ್ಸ್ ನಿಯಂತ್ರಣದ ಬಗ್ಗೆ ಅರಿವು ಮೂಡಿಸುವುದು ನಮ್ಮ ಉದ್ದೇಶ. ಈ ರೀತಿಯ ಸಮುದಾಯ ಕಾರ್ಯಕ್ರಮಗಳು ಆರೋಗ್ಯ ಮತ್ತು ಜಾಗೃತಿಯ ಸಂದೇಶವನ್ನು ತಲುಪಿಸಲು ಈ ಕಾರ್ಯಕ್ರಮವು ಉತ್ತಮ ವೇದಿಕೆಯಾಗಿದೆ ಎಂದರು.

ವಿಜೇತರಿಗೆ ಪ್ರಶಸ್ತಿ ವಿತರಣೆ: 17ರಿಂದ 35ರ ವರ್ಷದವರೆಗಿನ ಯುವಕರು ಮತ್ತು ಮಹಿಳೆಯರಿಗಾಗಿ 5 ಕಿಲೋಮೀಟರ್ ಮ್ಯಾರಥಾನ್ ಸ್ಪರ್ಧೆಯು ನಗರದ ಅಂಬೇಡ್ಕರ್ ವೃತ್ತದಿಂದ ಸ್ಟೇಷನ್ ವೃತ್ತದವರೆಗೆ ಮತ್ತು ನವೀನ್ ಆಸ್ಪತ್ರೆಯಿಂದ ಮಹ್ಮತಗಾಂಧಿ ಕ್ರೀಡಾಂಗಣದವರೆಗೆ ಮಾರಥಾನ್ ಆಯೋಜಿಸಲಾಗಿದ್ದು, ಪ್ರಥಮ ಬಹುಮಾನವನ್ನು ಪುರುಷರ ವಿಭಾಗದಲ್ಲಿ ದೇವದುರ್ಗ ತಾಲೂಕಿನ ಜಾಲಹಳ್ಳಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿ ನಿಂಗಣ್ಣ, ಮಹಿಳಾ ವಿಭಾಗದಲ್ಲಿ ದೇವಸೂಗೂರಿನ ಯಲ್ಲಮ್ಮ, ದ್ವಿತೀಯ ಬಹುಮಾನವನ್ನು ಪುರುಷರ ವಿಭಾಗದಲ್ಲಿ ರಾಯಚೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿ ತಾಯಪ್ಪ, ಸರ್ಕಾರಿ ಮಹಿಳಾ ಕಾಲೇಜಿನ ವಿದ್ಯಾರ್ಥಿ ಭೂಮಿಕಾ, ತೃತೀಯ ಬಹುಮಾನವನ್ನು ರಾಯಚೂರಿನ ಸನ್‌ರೈಸ್ ಕಾಲೇಜಿನ ವಿದ್ಯಾರ್ಥಿ ತಿಮ್ಮಪ್ಪ, ಎಲ್‌ವಿಡಿ ಕಾಲೇಜಿನ ಶೃತಿ ಅವರಿಗೆ ನೀಡಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿರೇಶ್ ನಾಯಕ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರವೀಣ್ ಕುಮಾರ್, ಪಾಲಿಕೆಯ ಆರೋಗ್ಯಾಧಿಕಾರಿ ಡಾ.ಎಂ.ಡಿ.ಶಾಕೀರ್ ಸೇರಿದಂತೆ ಪಾಲಿಕೆಯ ವಿವಿಧ ವಿಭಾಗದ ಅಧಿಕಾರಿಗಳು ಹಾಗೂ ಸಿಬ್ಬಂದಿ ಇದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.